ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 73 ಸಂಚಿಕೆ- 73 | PAGE- 8 ಪುಟ-8 | ಶುಕ್ರವಾರ 25.04.2025 | RS.2/- ಬೆಲೆ 2/-

# ಉಗ್ರರನ್ನು ಹುಡುಕಿ ಹೊಡೆಯುತ್ತೇವೆ:ಮೋದಿ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ ಪಾಟ್ನಾ,ಏ.24:ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ದಾಳಿ ಮಾಡಿದ ಉಗ್ರರು ಮತ್ತು ದಾಳಿಯ ಸಂಚು ರೂಪಿಸಿದವರಿಗೆ ಕಲ್ಪನೆಗೂ ಮೀರಿದ ಶಿಕ್ಷೆ ಆಗಲಿದೆ ಎಂದು ಪ್ರಧಾನಿ ನರೇಂದ್ರಮೋದಿ ಗುಡುಗಿದ್ದಾರೆ.

ಪಹಲ್ಗಾಮ್‌ನ ಬೀಭತ್ಸ ಕೃತ್ಯದ ನಂತರ ಇಡೀ ದೇಶವೇ ಸಿಡಿದೆದ್ದು ತುಡಿಯುತ್ತಿರುವ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರು ಉಗ್ರರಿಗೆ ಘನಘೋರ ಎಚ್ಚರಿಕೆ ನೀಡಿ ಕಲ್ಪನೆಗೂ ಮೀರಿದ ಶಿಕ್ಷೆ ನೀಡುತ್ತೇವೆ ಎಂದು ಹೇಳಿರುವುದು ಮುಂದೆ ಭಾರತ ಉಗ್ರರ ವಿರುದ್ಧ ಯಾವ ರೀತಿಯ ಪ್ರತೀಕಾರ ತೆಗೆದುಕೊಳ್ಳುತ್ತದೆ ಎಂಬುದನ್ನು ಸಂಕೇತಿಸಿದೆ.

ಉಗ್ರರನ್ನು ಹುಡುಕಿ ಹೊಡೆಯಲಿದ್ದೇವೆ ಅವರಿಗೆ ತಕ್ಕ ಶಾಸ್ತಿ ಮಾಡಿಯೇ ತೀರುತ್ತೇವೆ ಎಂದು ಪ್ರಧಾನಿ ಮೋದಿ ಖಡಕ್ ಎಚ್ಚರಿಕೆ ನೀಡಿದರು.

ಪಹಲ್ಗಾಮ್‌ನಲ್ಲಿ ನಡೆದಿರುವ ದಾಳಿ ಕೇವಲ ಜನರ ಮೇಲೆ ನಡೆದಿರುವ ದಾಳಿಯಲ್ಲ. ಭಾರತದ ಆತ್ಮದ ಮೇಲೆ ನಡೆದ ದಾಳಿ. ಈ ರೀತಿಯ ದುಸ್ಸಾಹಸ ಯಾರು ಮಾಡಿದ್ದಾರೋ, ಯಾರು ಈ ದಾಳಿಯ ಹಿಂದಿದ್ದಾರೋ ಅವರಿಗೆ ಕಲ್ಪನೆಗೂ ಮೀರಿದ ಶಿಕ್ಷೆ ನೀಡುತ್ತೇವೆ ಎಂದು ಪ್ರಧಾನಿ ಮೋದಿ ಹೇಳಿದರು.



ಉಗ್ರರನ್ನು ಹೆಡೆಮುರಿ ಕಟ್ಟಿ ನಮ್ಮ ದೇಶದಿಂದ ಹೊರ ಹಾಕುವ ಸಮಯ ಬಂದಿದೆ ಭಾರತೀಯರೆಲ್ಲರೂ ಒಗ್ಗಟ್ಟಿನಲ್ಲಿದ್ದರೆ ಉಗ್ರರ ಸೊಂಟ ಮುರಿಯುವುದೇನು ಕಷ್ಟವಲ್ಲ. ಈ ಭೂಮಿಯಿಂದಲೇ ಉಗ್ರರನ್ನು ಹೊರಗಟ್ಟುತ್ತೇವೆ ಎಂದರು.ಬಿಹಾರದ ಮಧುಬನಿಯಲ್ಲಿಂದು ಪ್ರಧಾನಮಂತ್ರಿ ಆವಾಜ್ ಮತ್ತು ದೀನ್‌ದಯಾಳ್ ಉಪಾಧ್ಯಾಯ ಅಂತ್ಯೋದ್ಯಯ ಯೋಜನೆ, ರಾಷ್ಟ್ರೀಯ ಗ್ರಾಮೀಣ ಜೀವನ್ ಮಿಷನ್ ಯೋಜನೆಯ ಜಾರಿ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ ಮೋದಿ ಅವರು, ಪಹಲ್ಗಾಮ್‌ನಲ್ಲಿ ದಾಳಿ ನಡೆಸಿದ ಸಂಚುಕೋರರು ಮತ್ತು ಉಗ್ರರ ವಿರುದ್ಧ ಕಿಡಿಕಾರಿ ಈ ಕೃತ್ಯವೆಸಗಿರುವವರಿಗೆ ಕಲ್ಪನೆಗೂ ಮೀರಿದ ಶಿಕ್ಷೆ ಸಿಗಲಿದೆ ಎಂದಿದ್ದಾರೆ.

ಬಿಹಾರದ ನೆಲದಲ್ಲಿ ನಿಂತು ಇಡೀ ಜಗತ್ತಿಗೆ ಭರವಸೆ ಕೊಡುತ್ತಿದ್ದೇನೆ ಭಾರತವೂ ಪ್ರತಿ ಭಯೋತ್ಪಾದಕ ಮತ್ತು ಭಯೋತ್ಪಾದಕರನ್ನು ಬೆಂಬಲಿಸುವವರನ್ನು ಗುರುತಿಸಿ ಪತ್ತೆ ಹಚ್ಚುತ್ತದೆ. ಜತೆಗೆ ಅವರಿಗೆ ಕಲ್ಪನೆಗೂ ನಿಲುಕದ ರೀತಿಯಲ್ಲಿ ಶಿಕ್ಷೆಯಾಗಲಿದೆ ಎಂದರು.

(2ನೇ ಪುಟ ನೋಡಿ)

# ಭೀಕರ ಅಪಘಾತ: ಮಗು ಸೇರಿ ಮೂವರ ಸಾವು



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಏ.24: ರಸ್ತೆ ಮೇಲೆ ಅಡ್ಡ ಬಂದ ನಾಯಿ ಜೀವ ಉಳಿಸುವ ಪ್ರಯತ್ನದಲ್ಲಿ ಟವೇರಾ ಕಾರು ರಸ್ತೆ ಬದಿಯ ಕಲ್ಲಿನ ಕಂಬಗಳಿಗೆ ಅಪ್ಪಳಿಸಿ ಒಂದೇ ಕುಟುಂಬದ ಮೂವರು ದಾರುಣವಾಗಿ ಸಾವನ್ನಪ್ಪಿದ ಘಟನೆ ಅಫಜಲಪುರ ತಾಲೂಕಿನ ಗೊಬ್ಬೂರು ಗ್ರಾಮದ ಬಳಿ ಸಂಭವಿಸಿದೆ.

ಕಲಬುರಗಿಯ ಮಿಲ್ಲತ್ ನಗರದ ಆಯೇಷಾ(70), ಅಜ್ಮೇರಾ (30) ಜೈನಬ್ (2) ಮೃತ ದುರ್ದೈವಿಗಳು. ಮಹಾರಾಷ್ಟ್ರ ಗಡಿಭಾಗದ ಹೈದ್ರಾ ದರ್ಗಾದಲ್ಲಿ ನಡೆಯಬೇಕಿದ್ದ ಸಂಬಂಧಿಕರ ಮಗುವಿನ ಜಾವಳ ಕಾರ್ಯಕ್ರಮಕ್ಕೆ ಟವೇರಾ ಕಾರಿನಲ್ಲಿ ಕುಟುಂಬ ಸಮೇತ ತೆರಳುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ.

ಕಲಬುರಗಿಯ ಮಿಲ್ಲತ್ ನಗರದಿಂದ ಹೊರಟಿದ್ದ ಕಾರು ಗೊಬ್ಬೂರು ಬಳಿ ಬರುತ್ತಿದ್ದಂತೆಯೇ ನಾಯಿ ಅಡ್ಡ ಬಂದಿದೆ. ಈ ವೇಳೆ ನಾಯಿಯ ಪ್ರಾಣ ಕಾಪಾಡುವ ಸಂಬಂಧ ಕಾರಿನ ಚಾಲಕ ರಸ್ತೆ ಬದಿಗೆ ಕಾರಿಳಿಸಿದಾಗ ನಿಯಂತ್ರಣ ತಪ್ಪಿ ಕಲ್ಲಿನ ಕಂಬಗಳಿಗೆ ಕಾರು ಅತ್ಯಂತ ರಭಸವಾಗಿ ಡಿಕ್ಕಿ ಹೊಡೆದಿದೆ. ಅಪಘಾತದ ತೀವ್ರತೆಗೆ ಕಾರು ನಜ್ಜುಗುಜ್ಜಾಗಿ, ಮೂವರು ಕೊನೆಯುಸಿರೆಳೆದಿದ್ದಾರೆ.

ದೇವಲಗಾಣಗಾಪುರ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದು, ದೇವಲಗಾಣಗಾಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಿಂಧೂ ಜಲ ಒಪ್ಪಂದ ಅಮಾನತು 'ಯುದ್ಧಕ್ಕೆ ಸಮ': ಪಾಕ್



ಮಲ್ಲಮ್ಮ ನುಡಿ ವಾರ್ತೆ ಇಸ್ಲಾಮಾಬಾದ್:ಏ.24: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರ ದಾಳಿಗೆ ಪ್ರತೀಕಾರವಾಗಿ ಭಾರತ 1960 ರ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿದ್ದು, ಇದನ್ನು ಪಾಕಿಸ್ತಾನ ಗುರುವಾರ ತಿರಸ್ಕರಿಸಿದೆ.

ಭಾರತದ ಪ್ರತೀಕಾರದ ಕ್ರಮಗಳಿಗೆ ದೇಶದ ಪ್ರತಿಕ್ರಿಯೆಯನ್ನು ರೂಪಿಸಲು ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಭದ್ರತಾ ಮಂಡಳಿ ಸಭೆಯ ನಂತರ, ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸುವುದರಿಂದ "240 ಮಿಲಿಯನ್ ಪಾಕಿಸ್ತಾನಿಗಳ ಜೀವನಾಡಿಯನ್ನು"ನಿರ್ಬಂಧಿಸಿದಂತಾಗುತ್ತದೆ ಎಂದು ಹೇಳಿದೆ.

"ಪಾಕಿಸ್ತಾನದ ಸಾರ್ವಭೌಮತ್ವ ಮತ್ತು ದೇಶದ ಜನರ ಭದ್ರತೆಗೆ ಯಾವುದೇ ಬೆದರಿಕೆ ಬಂದರೆ ಅದಕ್ಕೆ ಪ್ರತಿಯಾಗಿ ಪ್ರತಿಕಾರ ತೀರಿಸಿಕೊಳ್ಳಲು ಎಲ್ಲಾ ಕ್ಷೇತ್ರಗಳಲ್ಲಿ ದೃಢವಾದ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ. ಭಾರತವು ತನ್ನ ಸಂಕುಚಿತ ರಾಜಕೀಯ ಕಾರ್ಯಸೂಚಿಯನ್ನು ಮುಂದುವರಿಸಲು ಪಹಲ್ಗಾಮ್‌ನಂತಹ ಘಟನೆಗಳಿಗೆ ಪಾಕಿಸ್ತಾನವನ್ನು ದೂಷಿಸುವ ಮೂಲಕ ಸಿನಿಕತನ ಪ್ರದರ್ಶಿಸಿದೆ" ಎಂದು ಪಾಕಿಸ್ತಾನ ಪ್ರಧಾನಿ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ."ಸಿಂಧೂ ಜಲ ಒಪ್ಪಂದದ ಪ್ರಕಾರ ಪಾಕಿಸ್ತಾನಕ್ಕೆ ಸೇರಿದ ನೀರಿನ ಹರಿವನ್ನು ನಿಲ್ಲಿಸುವ

ಅಥವಾ ತಿರುಗಿಸುವ ಯಾವುದೇ ಪ್ರಯತ್ನ ಮತ್ತು

ಕೆಳ ನದಿಪಾತ್ರದ ಹಕ್ಕುಗಳನ್ನು ಕಸಿದುಕೊಳ್ಳುವುದನ್ನು ಯುದ್ಧಕ್ಕೆ ಸಮವೆಂದು ಪರಿಗಣಿಸಲಾಗುತ್ತದೆ ಮತ್ತು ಇದಕ್ಕೆ ಪೂರ್ಣ ಬಲದ ಪ್ರತಿಕ್ರಿಯೆ ನೀಡಲಾಗುತ್ತದೆ" ಎಂದು ಹೇಳಿದೆ.

ಭಾರತದ ಕ್ರಮಗಳಿಗೆ ಪ್ರತಿಕ್ರಿಯೆಯಾಗಿ ಇಸ್ಲಾಮಾಬಾದ್ ಭಾರತೀಯ ವಿಮಾನಯಾನ

ಸಂಸ್ಥೆಗಳಿಗೆ ವಾಯುಪ್ರದೇಶವನ್ನು ನಿರ್ಬಂಧಿಸಿದೆ ಮತ್ತು ವಾಘಾ ಗಡಿಯನ್ನು ಬಂದ್ ಮಾಡಿದೆ.

# ಆಕಸ್ಮಿಕವಾಗಿ ಪಾಕ್ ಪ್ರದೇಶ ಪ್ರವೇಶಿಸಿದ್ದ : ಬಿಎಸ್‌ಎಫ್‌ಯೋಧನ ಬಂಧಿಸಿದ ಪಾಕ್



ಮಲ್ಲಮ್ಮನುಡಿವಾರ್ತೆ ಪಂಜಾಬ್:ಏ.24: ಪಾಕಿಸ್ತಾನದ ಪಂಜಾಬ್ ಗಡಿಯನ್ನು ಆಕಸ್ಮಿಕವಾಗಿ ದಾಟಿದ ಬಿಎಸ್‌ಎಫ್ ಜವಾನನನ್ನು ಪಾಕಿಸ್ತಾನ ರೇಂಜರ್ಸ್ ಬಂಧಿಸಿದ್ದಾರೆ. ಆರಂಭಿಕ ಬಿಡುಗಡೆಗಾಗಿ ಎರಡು ಪಡೆಗಳ ನಡುವೆ ಧ್ವಜ ಸಭೆ ನಡೆಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಪಹಲ್ಗಾಮ್ ಉಗ್ರ ದಾಳಿಯ ಹಿನ್ನೆಲೆಯಲ್ಲಿ ಭಾರತ ಪಾಕ್ ವಿರುದ್ಧ ಕೈಗೊಂಡಿದ್ದ ಕ್ರಮಗಳಿಗೆ ಪ್ರತಿಕ್ರಿಯೆ ನೀಡಿರುವ ಪಾಕಿಸ್ತಾನ ಗುರುವಾರ ಭಾರತೀಯ ವಿಮಾನಯಾನ ಸಂಸ್ಥೆಗಳಿಗೆ ತನ್ನ ವಾಯುಪ್ರದೇಶವನ್ನು ನಿರ್ಬಂಧಿಸಿದೆ. ವಾಘಾ ಗಡಿ ದಾಟುವಿಕೆಯನ್ನು ತಾನೂ ಮುಚ್ಚಿದೆ. ಭಾರತದೊಂದಿಗಿನ ಎಲ್ಲಾ ವ್ಯಾಪಾರವನ್ನು ಸ್ಥಗಿತಗೊಳಿಸಿದೆ ಮತ್ತು ಸಿಂಧೂ ಜಲ ಒಪ್ಪಂದದಡಿಯಲ್ಲಿ ಪಾಕಿಸ್ತಾನಕ್ಕೆ ಉದ್ದೇಶಿಸಲಾದ ನೀರನ್ನು ಬೇರೆಡೆಗೆ ತಿರುಗಿಸುವ ಯಾವುದೇ ಪ್ರಯುತ್ನವನ್ನು ಯುದ್ಧದ ಕೃತ್ಯವೆಂದು ಪರಿಗಣಿಸಲಾಗುತ್ತದೆ ಎಂದು ಹೇಳಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಲು ಮತ್ತು ರಾಜತಾಂತ್ರಿಕ ಸಂಬಂಧಗಳನ್ನು ಕೆಳಮಟ್ಟಕ್ಕಿಳಿಸಲು ಭಾರತದ ಕ್ರಮಕ್ಕೆ ದೇಶದ ಪ್ರತಿಕ್ರಿಯೆಯನ್ನು ರೂಪಿಸಲು ಪ್ರಧಾನಿ ಶೆಹಬಾಜ್ ಷರೀಫ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಂತರ ಈ ಪ್ರಕಟಣೆಗಳನ್ನು ಮಾಡಲಾಯಿತು.

ಸಭೆಯಲ್ಲಿ ಪ್ರಮುಖ ಮಂತ್ರಿಗಳು ಮತ್ತು ಮೂರು ಪಡೆಗಳ ಮುಖ್ಯಸ್ಥರು ಭಾಗವಹಿಸಿದ್ದರು. ಈಗ ಆಕಸ್ಮಿಕವಾಗಿ ಪಾಕ್ ಪ್ರದೇಶ ದಾಟಿದ ಯೋಧನನ್ನು ಪಾಕಿಸ್ತಾನ ಬಂಧಿಸಿರುವುದು ಆತಂಕಕ್ಕೆ ಕಾರಣವಾಗಿದೆ.

# ಸರ್ಕಾರಿ ಗೌರವಗಳೊಂದಿಗೆ ಮಂಜುನಾಥ್ ರಾವ್, ಭರತ್ ಭೂಷಣ್ ಅಂತ್ಯಕ್ರಿಯೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.24: ಇಂದು ಬೆಳಿಗ್ಗೆ ಕಾಶ್ಮೀರದಿಂದ ಕರ್ನಾಟಕಕ್ಕೆ ಆಗಮಿಸಿದ ಪಹಲ್ಗಾಮ್ ಉಗ್ರದಾಳಿಯ ಸಂತ್ರಸ್ತರ ಅಂತ್ಯಕ್ರಿಯೆ ಸರ್ಕಾರಿ ಗೌರವಗಳೊಂದಿಗೆ ನಡೆಯಿತು.

ಮೃತ ಮಂಜುನಾಥ್ ರಾವ್ ಅವರ ಪಾರ್ಥಿವ ಶರೀರ ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಶಿವಮೊಗ್ಗ ತಲುಪಿದರೆ, ಮತ್ತೋರ್ವ ಸಂತ್ರಸ್ತ ಭರತ್ ಭೂಷಣ್ ಪಾರ್ಥಿವ ಶರೀರ ಬೆಂಗಳೂರಿನಲ್ಲಿರುವ ಅವರ ಸ್ವಗೃಹ ತಲುಪಿತು.

ಬಳಿಕ ಭರತ್ ಭೂಷಣ್ ನಿವಾಸಕ್ಕೆ ಸಿಎಂ ಸಿದ್ದರಾಮಯ್ಯ, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹಾಗೂ ಇನ್ನಿತರ ಗಣ್ಯರು ಭೇಟಿ ನೀಡಿ ಅಂತಿಮ ದರ್ಶನ ಪಡೆದು ಕುಟುಂಬಕ್ಕೆ ಸಾಂತ್ವನ ಹೇಳಿದರು.

ಮೃತ ಮಂಜುನಾಥ್ ಅಂತ್ಯಕ್ರಿಯೆ ಶಿವಮೊಗ್ಗದ ರೋಟರಿ ಚಿತಾಗಾರದಲ್ಲಿ ಸರ್ಕಾರಿ ಗೌರವಗಳೊಂದಿಗೆ ನಡೆದರೆ, ಭರತ್ ಭೂಷಣ್ ಅಂತ್ಯಕ್ರಿಯೆ ಹೆಬ್ಬಾಳದ ಚಿತಾಗಾರದಲ್ಲಿ ಸರ್ಕಾರಿ ಗೌರವಗಳೊಂದಿಗೆ ನಡೆಯಿತು.




ಹುಮನಾಬಾದ:ಬ್ಲಾಕ್ ಕಾಂಗ್ರೆಸ್ ಸಮಿತಿವತಿಯಿಂದ ಮಾಜಿ ಸಚಿವ ರಾಜಶೇಖರ ಪಾಟೀಲ ನೇತೃತ್ವದಲ್ಲಿ ಇಂದು ಸಂಜೆ ಪಟ್ಟಣದಲ್ಲಿ ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯಲ್ಲಿ ಮೃತಪಟ್ಟವರಿಗೆ ಶ್ರದ್ಧಾಂಜಲಿ ಸಲ್ಲಿಸಲು ಹಮ್ಮಿಕೊಂಡಿದ್ದ ಕ್ಯಾಂಡಲ್ ಮಾರ್ಚನಲ್ಲಿ ಕಾಂಗ್ರೆಸ್ ಮುಖಂಡರು,ಕಾರ್ಯಕರ್ತರು, ಸಾರ್ವಜನಿಕರು ಭಾಗವಹಿಸಿದ್ದರು.

# ಗುಪ್ತಚರ ವೈಫಲ್ಯ ಮತ್ತು ಭದ್ರತಾ ಲೋಪದ ತನಿಖೆಗೆ ಸಿಡಬ್ಲ್ಯೂಸಿ ಆಗ್ರಹ



ನವದೆಹಲಿ:ಏ.24: ಪಹಲ್ಗಾಮ್ ಭಯೋತ್ಪಾದಕದಾಳಿಗೆ ಸಂಬಂಧಿಸಿದಂತೆ ದೆಹಲಿಯಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ಸಭೆ ನಡೆಯಿತು. ಸಭೆಯಲ್ಲಿ, ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಸಲ್ಲಿಸಲು ಕಾಂಗ್ರೆಸ್ ನಾಯಕರು ಒಂದು ನಿಮಿಷ ಮೌನ ಆಚರಿಸಿದರು. ಇದಲ್ಲದೆ ನಿರ್ಣಯವೊಂದನ್ನು ಅಂಗೀಕರಿಸಲಾಯಿತು. ಸಭೆಯ ನಂತರ, ಕಾಂಗ್ರೆಸ್ ಪತ್ರಿಕಾಗೋಷ್ಠಿಯ ಮೂಲಕ ಈ ಪ್ರಸ್ತಾವನೆಯ ಬಗ್ಗೆ ಮಾಹಿತಿ ನೀಡಿತು. ಪಾಕಿಸ್ತಾನ ಈ ಹೇಡಿತನದ ಪಿತೂರಿ ನಡೆಸಿದೆ. ದೇಶದಲ್ಲಿ ಭಾವನೆಗಳನ್ನು ಪ್ರಚೋದಿಸಲು ಹಿಂದೂಗಳನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಲಾಗಿದೆ ಎಂದು ಕಾಂಗ್ರೆಸ್ ಹೇಳಿದೆ. ಗುಪ್ತಚರ ವೈಫಲ್ಯಗಳು ಮತ್ತು ಭದ್ರತಾ ಲೋಪಗಳನ್ನು ಕಾಂಗ್ರೆಸ್ ಬೆಟ್ಟು ಮಾಡಿದ್ದು ಸರ್ಕಾರದಿಂದ ತನಿಖೆಗೆ ಒತ್ತಾಯಿಸಿದೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪವನ್ ಖೇರಾ, ಅಮರನಾಥ ಯಾತ್ರೆಯ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಯಾತ್ರೆಯ ಸಮಯದಲ್ಲಿ ಯಾವುದೇ ಯಾತ್ರಿಕರಿಗೆ ಯಾವುದೇ ತೊಂದರೆಯಾಗದಂತೆ ಸರಿಯಾದ ವ್ಯವಸ್ಥೆಗಳನ್ನು ಮಾಡಬೇಕೆಂದು

(2ನೇ ಪುಟ ನೋಡಿ)

# ಏ.27ರೊಳಗೆ ಭಾರತ ಬಿಟ್ಟು ತೆರಳಿ, ಪಾಕ್ ಪ್ರಜೆಗಳಿಗೆ ಕೇಂದ್ರದ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ,ಏ.24:ಏ.27ರೊಳಗೆ ಭಾರತ ಬಿಟ್ಟು ತೊಲಗುವಂತೆ ಪಾಕ್ ಪ್ರಜೆಗಳಿಗೆ ಕೇಂದ್ರ ಸರ್ಕಾರ ಖಡಕ್ ಎಚ್ಚರಿಕೆ ನೀಡಿದೆ.

ಜಮ್ಮು ಕಾಶ್ಮೀರದ ಪಹಗ್ಲಾಮ್‌ನಲ್ಲಿ ಉಗ್ರರ ದಾಳಿ ನಡೆದ ಬೆನ್ನಲ್ಲೇ ಪಾಕಿಸ್ತಾನ ಪ್ರಜೆಗಳಿಗೆ ಎಚ್ಚರಿಕೆಯ ಸಂದೇಶ ರವಾನಿಸಿದೆ.

ಪಾಕ್ ಪ್ರಜೆಗಳ ಎಲ್ಲಾ ರೀತಿಯ ವೀಸಾಗಳನ್ನು ಸರ್ಕಾರ ಇಂದು ಸ್ಥಗಿತಗೊಳಿಸಿದ್ದು, ಮೆಡಿಕಲ್ ವೀಸಾಗಳಿಗೆ ಏ.29ರವೆಗೆ ಅವಕಾಶ ಕಲ್ಪಿಸಿದೆ.

ಎಲ್ಲಾ ರೀತಿಯ ವೀಸಾಗಳನ್ನು ಗುರುವಾರ ಸ್ಥಗಿತಗೊಳಿಸಿದ್ದು, ಏ.27ರೊಳಗೆ ಭಾರತ ತೊರೆಯುವಂತೆ ಸೂಚಿಸಿದೆ. ವೈದ್ಯಕೀಯ ವೀಸಾಗಳು ಏ.29ರವರೆಗೆ ಮಾನ್ಯವಾಗಿರಲಿದ್ದು, ಬಳಿಕ ರದ್ದಾಗಲಿವೆ ಎಂದು ತಿಳಿಸಿದೆ.

ಪೈಶಾಚಿಕ ಭಯೋತ್ಪಾದಕ ದಾಳಿಯ ಬಳಿಕ ಸಚಿವ ಸಂಪುಟ ಹಲವು ಭದ್ರತೆಯ ಕುರಿತಾದ ನಿರ್ಧಾರಗಳನ್ನು ಕೈಗೊಂಡಿದೆ. ಈ ನಿರ್ಧಾರದ ಮುಂದುವರಿದ ಭಾಗವಾಗಿ ಕೇಂದ್ರ ಸರ್ಕಾರ ತಕ್ಷಣವೇ ಎಲ್ಲಾ ಪಾಕಿಸ್ತಾನಿ ಪ್ರಜೆಗಳಿಗೆ ವೀಸಾ ಸೇವೆಗಳನ್ನು ಸ್ಥಗಿತಗೊಳಿಸಲು ನಿರ್ಧರಿಸಿದೆ ಎಂದು ತಿಳಿಸಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಸಿಸಿಎಸ್ ಸಭೆಯ ನಂತರ, ಸರ್ಕಾರ ಪಾಕಿಸ್ತಾನಿ ಪ್ರಜೆಗಳ ಸಾರ್ಕ್ ವೀಸಾಗಳನ್ನು ಸ್ಥಗಿತಗೊಳಿಸಿತ್ತು. ಸಾರ್ಕ್ ವೀಸಾ ವಿನಾಯಿತಿ ಯೋಜನೆಯಡಿಯಲ್ಲಿ ಪಾಕ್ ಪ್ರಜೆಗಳಿಗೆ ಭಾರತಕ್ಕೆ ಪ್ರಯಾಣಿಸಲು ಅವಕಾಶವಿರುವುದಿಲ್ಲ ಮತ್ತು ಈ ಹಿಂದೆ ನೀಡಿದ್ದ ಎಲ್ಲಾ ಎಸ್‌ಪಿಇಎಸ್ ವೀಸಾಗಳನ್ನು ರದ್ದುಗೊಳಿಸಲಾಗುತ್ತದೆ ಎಂದು ತಿಳಿಸಿತ್ತು. ಪ್ರಸ್ತುತ ಎಸ್‌ಪಿಇಎಸ್ ವೀಸಾದಡಿಯಲ್ಲಿ ಭಾರತದಲ್ಲಿರುವ ಎಲ್ಲ ಪಾಕಿಸ್ತಾನಿ ಪ್ರಜೆಗಳು 48 ಗಂಟೆಯೊಳಗೆ ಭಾರತವನ್ನು ತೊರೆಯಲು ಕಾಲಾವಕಾಶವಿದೆ ಎಂದು ತಿಳಿಸಿದರು.

# ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ; 3,647 ಕೋಟಿ ರೂ. ಯೋಜನೆಗಳಿಗೆ ಅನುಮೋದನೆ



ಮಲ್ಲಮ್ಮ ನುಡಿ ವಾರ್ತೆ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ; 3,647 ಕೋಟಿ ರೂ.ಯೋಜನೆಗಳಿಗೆ ಅನುಮೋದನೆ

ಚಾಮರಾಜನಗರ:ಏ.24: ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮೈಸೂರು ಪ್ರಾದೇಶಿಕ ವಿಭಾಗದಲ್ಲಿ 3,647 ಕೋಟಿ ರೂ. ಮೌಲ್ಯದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಇಂದು ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ತನಿಖೆಗೆ ಸಿಡಬ್ಲ್ಯೂಸಿ ಆಗ್ರಹ

ಅವರು ಸರ್ಕಾರವನ್ನು ಒತ್ತಾಯಿಸಿದರು.ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶ ಎಂದು ಪವನ್ ಖೇರಾ ಹೇಳಿದರು. ಅಂತಹ ಪರಿಸ್ಥಿತಿಯಲ್ಲಿ, ಇಲ್ಲಿ ಭದ್ರತೆಯ ಜವಾಬ್ದಾರಿ ಕೇಂದ್ರ ಸರ್ಕಾರದ ಮೇಲಿದೆ. ಪಹಲ್ಗಾಮ್ ಅನ್ನು ಅತ್ಯಂತ ಸುರಕ್ಷಿತ ಪ್ರದೇಶವೆಂದು ಪರಿಗಣಿಸಲಾಗಿದೆ. ಅಲ್ಲಿ ಮೂರು ಹಂತದ ಭದ್ರತಾ ವ್ಯವಸ್ಥೆ ಜಾರಿಯಲ್ಲಿದೆ. ಆದ್ದರಿಂದ, ಕೇಂದ್ರ ಗೃಹ ಸಚಿವಾಲಯದ ನೇರ ವ್ಯಾಪ್ತಿಗೆ ಬರುವ ಈ ಕೇಂದ್ರಾಡಳಿತ ಪ್ರದೇಶದಲ್ಲಿ ಇಂತಹ ದಾಳಿ ನಡೆಯಲು ಕಾರಣವಾದ ಗುಪ್ತಚರ ವೈಫಲ್ಯಗಳು ಮತ್ತು ಭದ್ರತಾ ವೈಫಲ್ಯಗಳ ಬಗ್ಗೆ ಸಮಗ್ರ ಮತ್ತು ಸಮಗ್ರ ತನಿಖೆ ನಡೆಸುವುದು ಅತ್ಯಗತ್ಯ. ವಿಶಾಲ ಸಾರ್ವಜನಿಕ ಹಿತಾಸಕ್ತಿಯ ದೃಷ್ಟಿಯಿಂದ ಈ ಪ್ರಶ್ನೆಗಳನ್ನು ಎತ್ತುವುದು ಅವಶ್ಯಕ. ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಸಿಗುವ ಏಕೈಕ ಮಾರ್ಗ ಇದೊಂದೇ ಎಂದರು.ಪಾಕಿಸ್ತಾನದ ಈ ಹೇಡಿತನದ ಮತ್ತು ಯೋಜಿತ ಭಯೋತ್ಪಾದಕ ಕೃತ್ಯವು ನಮ್ಮ ಗಣರಾಜ್ಯದ ಮೌಲ್ಯಗಳ ಮೇಲಿನ ನೇರ ದಾಳಿಯಾಗಿದೆ. ದೇಶಾದ್ಯಂತ ಭಾವನೆಗಳನ್ನು ಕೆರಳಿಸಲು ಹಿಂದೂಗಳನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಲಾಗುತ್ತಿದೆ. ಈ ಗಂಭೀರ ಪ್ರಚೋದನೆಯ ಸಂದರ್ಭದಲ್ಲಿ ನಾವು ಶಾಂತವಾಗಿರಲು ಮನವಿ ಮಾಡುತ್ತೇವೆ. ಪ್ರತಿಕೂಲತೆಯನ್ನು ಎದುರಿಸಲು ನಮ್ಮ ಸಾಮೂಹಿಕ ಶಕ್ತಿಯನ್ನು ಪುನರುಚ್ಚರಿಸುತ್ತೇವೆ. ಸಿಡಬ್ಲ್ಯೂಸಿ ಶಾಂತಿಗಾಗಿ ಮನವಿ ಮಾಡಿದೆ.

ಬಿಜೆಪಿ ವಿರುದ್ಧ ದಾಳಿ ನಡೆಸಿದ ಕಾಂಗ್ರೆಸ್, ಈ ಹತ್ಯಾಕಾಂಡವನ್ನು ಜಮ್ಮು ಮತ್ತು ಕಾಶ್ಮೀರದ ಎಲ್ಲಾ ರಾಜಕೀಯ ಪಕ್ಷಗಳು ಮತ್ತು ಅದರ ನಾಗರಿಕರ ದೊಡ್ಡ ವರ್ಗ ಖಂಡಿಸಿದೆ ಎಂದು ಹೇಳಿದೆ. ಆದಾಗ್ಯೂ, ಏಕತೆ ಮತ್ತು ಒಗ್ಗಟ್ಟು ಅತ್ಯಂತ ಅಗತ್ಯವಿರುವ ಸಮಯದಲ್ಲಿ, ಬಿಜೆಪಿ ತನ್ನ ಅಧಿಕೃತ ಮತ್ತು ಪ್ರಾಕ್ಸಿ ಸಾಮಾಜಿಕ ಮಾಧ್ಯಮ ವೇದಿಕೆಗಳ ಮೂಲಕ, ಈ ಭೀಕರ ದುರಂತವನ್ನು ಮತ್ತಷ್ಟು ಭಿನ್ನಾಭಿಪ್ರಾಯ, ಅಪನಂಬಿಕೆ, ಧ್ರುವೀಕರಣ ಮತ್ತು ವಿಭಜನೆಯನ್ನು ಬೆಳೆಸಲು ಬಳಸಿಕೊಳ್ಳುತ್ತಿರುವುದು ಆಘಾತಕಾರಿ ಎಂದಿದೆ.

## ಯೋಜನೆಗಳಿಗೆ ಅನುಮೋದನೆ

ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದ ನಾಲ್ಕು ಪ್ರದೇಶಗಳಲ್ಲಿ ಸಚಿವ ಸಂಪುಟ ಸಭೆಗಳನ್ನು ನಡೆಸಲು ಸಂಪುಟ ಸಭೆ ನಿರ್ಧರಿಸಿದೆ ಎಂದು ಹೇಳಿದರು.

ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಸಂಪುಟ ಸಭೆ ಖಂಡಿಸಿದೆ ಮತ್ತು ಘಟನೆಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಸಂತಾಪ ಸೂಚಿಸಿದೆ ಎಂದು ಸಿಎಂ ತಿಳಿಸಿದರು.ಸಭೆಯಲ್ಲಿ 78 ವಿಷಯಗಳ ಕುರಿತು ಚರ್ಚಿಸಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

"ಇಂದು, ನಾನು ಮಲೆ ಮಹದೇಶ್ವರ ಬೆಟ್ಟದಲ್ಲಿ ಐತಿಹಾಸಿಕ ಸಚಿವ ಸಂಪುಟ ಸಭೆಯ ಅಧ್ಯಕ್ಷತೆ ವಹಿಸಿದ್ದೆ. ಕರ್ನಾಟಕದ ನಾಲ್ಕು ಪ್ರದೇಶಗಳಲ್ಲಿ ಸಚಿವ ಸಂಪುಟ ಸಭೆಗಳನ್ನು ನಡೆಸಲು ನಾವು ನಿರ್ಧರಿಸಿದ್ದೇವೆ. ಇದಕ್ಕೂ ಮೊದಲು, ಕಲಬುರಗಿ ಪ್ರದೇಶದಲ್ಲಿ ಸಭೆ ನಡೆದಿತ್ತು; ಇಂದು, ಮೈಸೂರು ಪ್ರದೇಶದಲ್ಲಿ ನಡೆದಿದ್ದು, ಮುಂಬರುವ ಸಭೆಗಳು ಬೆಳಗಾವಿ ಮತ್ತು ಬಿಜಾಪುರದಲ್ಲಿ ಹಾಗೂ ಬೆಂಗಳೂರು ವಿಭಾಗದ ಸಭೆ ನಂದಿ ಬೆಟ್ಟದಲ್ಲಿ ನಡೆಯಲಿದೆ ಮತ್ತು ಆಯಾ ಪ್ರದೇಶಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದರು.ಇಂದು ನಡೆದ ಸಭೆಯಲ್ಲಿ 1,787 ಕೋಟಿ ರೂ.ಗಳ ನೀರಾವರಿ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಆರೋಗ್ಯ ಕ್ಷೇತ್ರದ ಸುಧಾರಣೆಗೆ 228 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು, ಕೊಳ್ಳೇಗಾಲದಲ್ಲಿರುವ ಸರ್ಕಾರಿ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

ಗುಂಡ್ಲುಪೇಟೆ 110 ಕೆರೆಗಳಿಗೆ ನೀರು ತುಂಬಿಸಲು 475 ಕೋಟಿ ವೆಚ್ಚಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಅಷ್ಟೇ ಅಲ್ಲದೆ ಚಾಮರಾಜನಗರದಲ್ಲಿ ಹೊಸ ಪ್ರವಾಸಿ ಮಂದಿರ ನಿರ್ಮಾಣ, ಚಾಮರಾಜನಗರ ಟೌನ್ ನಲ್ಲಿ ಕುಡಿಯುವ ನೀರು, ಒಳ ಚರಂಡಿ ನಿರ್ಮಾಣ ಹಾಗೂ ಮೈಸೂರು ತಾಲ್ಲೂಕಿನ ಇಲವಾಲದಲ್ಲಿ ಅಂತರಾಷ್ಟ್ರೀಯ ಕ್ರೀಡಾಂಗಣ ನಿರ್ಮಿಸಲು ಜಾಗ ಒದಗಿಸಲು ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ."ಪ್ರವಾಸೋದ್ಯಮಕ್ಕೆ 300 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ. ಹನೂರಿನಲ್ಲಿ ತಾಲೂಕು ಕಟ್ಟಡ ಮತ್ತು 50 ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಲಾಗುವುದು. ಚಾಮರಾಜನಗರ ಜಿಲ್ಲೆಯ ಚಿಕ್ಕಲೂರು, ಕೊಳ್ಳೇಗಾಲದಲ್ಲಿ, ಮಾಂಟೇಶ್ವರಿ, ರಾಚಪ್ಪಾಜಿ ಮತ್ತು ಸಿದ್ದಪ್ಪಾಜಿ ಪ್ರಾಧಿಕಾರಗಳ ಸ್ಥಾಪನೆಗೆ ನಿರ್ಧಾರ ತೆಗೆದುಕೊಳ್ಳಲಾಗಿದೆ. ಮೈಸೂರಿನ ಇಲವಾಲದಲ್ಲಿ ಕ್ರಿಕೆಟ್ ಕ್ರೀಡಾಂಗಣಕ್ಕಾಗಿ ಸ್ಥಳ ಹಂಚಿಕೆ ಮಾಡಲಾಗುವುದು" ಎಂದು ಸಿಎಂ ಹೇಳಿದರು.

## ಹೊಡೆಯುತ್ತೇವೆ:ಮೋದಿ ಎಚ್ಚರಿಕೆ

ನಮ್ಮ ಈ ಸಂಕಲ್ಪದಲ್ಲಿ ಇಡೀ ಭಾರತವೇ ಒಂದಾಗಿ ನಿಂತಿದೆ. ಮಾನವೀಯತೆಯನ್ನು ನಂಬುವ, ಪ್ರತಿಪಾದಿಸುವ ಪ್ರತಿಯೊಬ್ಬರೂ ನಮ್ಮ ಜತೆ ನಿಂತಿದ್ದಾರೆ ಎಂದರು.ಪಹಲ್ಗಾಮ್‌ನಲ್ಲಿ ಮೃತಪಟ್ಟವರಲ್ಲಿ ಕನ್ನಡ, ಹಿಂದಿ, ಮರಾಠಿ, ಗುಜರಾತಿ, ಒಡಿಶಾ, ಬಾಂಗ್ಲಾ ಹೀಗೆ ಒಬ್ಬೊಬ್ಬರು ಒಂದು ಭಾಷೆಯನ್ನು ಮಾತನಾಡುವವರಿದ್ದಾರೆ. ಆದರೆ ಅವರ ಸಾವಿಗೆ ಆಕ್ರೋಶ ಮಾತ್ರ ಕಾರ್ಗಿಲ್‌ನಿಂದ ಕನ್ಯಾಕುಮಾರಿವರೆಗೆ ಒಂದೇ ಆಗಿದೆ ಎಂದರು.ಈ ಭಯೋತ್ಪಾದಕ ದಾಳಿಯಲ್ಲಿ ಯಾರೋ ಒಬ್ಬರು ತಮ್ಮ ಮಗನನ್ನು, ಯಾರೋ ಒಬ್ಬರು ತಮ್ಮ ಸಹೋದರರನ್ನು, ಯಾರೋ ಒಬ್ಬರು ತಮ್ಮ ಸಂಗಾತಿಯನ್ನು ಕಳೆದುಕೊಂಡಿದ್ದಾರೆ. ಈ ಎಲ್ಲ ಜನರ ಸಾವಿನ ಬಗ್ಗೆ ನಮ್ಮ ಮನಸ್ಸಿನಲ್ಲಿರುವ ದುಃಖ ಮತ್ತು ಕೋಪ ಒಂದೇ ಆಗಿದೆ. ಅಮಾಯಕ ನಾಗರಿಕರನ್ನು ಕೊಂದ ಕೌರ್ಯದಿಂದ ಇಡೀ ರಾಷ್ಟ್ರವು ದುಃಖಿತವಾಗಿದೆ. ಎಲ್ಲ ಸಂತ್ರಸ್ಥ ಕುಟುಂಬಗಳ ದುಃಖದಲ್ಲಿ ಇಡೀ ರಾಷ್ಟ್ರ ಭಾಗಿಯಾಗಿದೆ ಎಂದರು.ಈ ದಾಳಿಯ ಸಂದರ್ಭದಲ್ಲಿ ಗಾಯಗೊಂಡವರಿಗೆ ಚಿಕಿತ್ಸೆ ನಡೆಯುತ್ತಿದೆ ಅವರು ಬೇಗ ಗುಣಮುಖರಾಗುವಂತೆ ನೋಡಿಕೊಳ್ಳಲು ಸರ್ಕಾರ ಎಲ್ಲ ಪ್ರಯತ್ನ ನಡೆಸಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಭಯೋತ್ಪಾದನೆ ಎದುರು ಭಾರತ ಎಂದೂ ತಲೆಬಾಗುವುದಿಲ್ಲ ಎಂದು ಅವರು ಹೇಳಿದರು.ಪಹಲ್ಗಾಮ್ ಉಗ್ರರ ದಾಳಿ ನಂತರ ನಮ್ಮ ಜತೆ ನಿಂತ ದೇಶಗಳ ಜನರಿಗೆ ಹಾಗೂ ನಾಯಕರಿಗೆ ನಾನು ಧನ್ಯವಾದ ಹೇಳುತ್ತೇನೆ ಎಂದು ಪ್ರಧಾನಿ ಮೋದಿ ಹೇಳಿದರು.

ಉಗ್ರರಿಗೆ ಹಾಗೂ ಸಂಚುಕೋರರಿಗೆ ಶಿಕ್ಷೆ ನೀಡುವ ಮಾತುಗಳನ್ನು ಪ್ರಧಾನಿಯವರು ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಹೇಳುವ ಮೂಲಕ ಒಂದು ದೊಡ್ಡ ಸಂದೇಶವನ್ನು ರವಾನಿಸಿದ್ದಾರೆ.ಈ ಕಾರ್ಯಕ್ರಮಕ್ಕೂ ಮೊದಲು ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯಿಂದ ಮೃತಪಟ್ಟ ಕುಟುಂಬದವರಿಗೆ ಒಂದು ನಿಮಿಷ ಮೌನ ಆಚರಿಸಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

## ನಾಮನಿರ್ದೇಶಿತ ಸದಸ್ಯರನ್ನು ನೇಮಕ ಮಾಡಲು ಅರ್ಜಿ ಆಹ್ವಾನ

ಕಲಬುರಗಿ,ಏ.24:ಕರ್ನಾಟಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಜಿಲ್ಲಾ ಅನುಷ್ಠಾನ ಸಮಿತಿಗೆ ನಾಮನಿರ್ದೇಶಿತ ಸದಸ್ಯರನ್ನು ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ತಿಳಿಸಿದ್ದಾರೆ. ಕರ್ನಾಟಕ ಪ.ಜಾತಿ/ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸರ್ಕಾರ ಜಾರಿಗೆ ತರುವ ಯೋಜನೆಗಳ ಅನುಷ್ಠಾನಕ್ಕೆ ಜಿಲ್ಲಾ ಮಟ್ಟದ ಸಮಿತಿಯಲ್ಲಿ ಈಗಾಗಲೇ ಇರುವ ನಾಮನಿರ್ದೇಶಿತ ಸದಸ್ಯರ ಅವಧಿಯು ಮುಕ್ತಾಯಗೊಂಡಿದ್ದು, ಆದ್ದರಿಂದ ಸದರಿ ಸದಸ್ಯರನ್ನು ನೇಮಿಸಲು ಅರ್ಹ ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯಕ್ಕೆ ಸೇರಿದ ಮತ್ತು ಸದರಿ ಸಮುದಾಯಗಳಿಗೆ ಸಂಬಂಧಿಸಿದಂತೆ ಕಾರ್ಯನಿರ್ವಹಿಸಿರುವ ಹಾಗೂ ಗುರುತಿಸಿಕೊಂಡಿರುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

## ರಾಜಕುಮಾರ್ ವ್ಯಕ್ತಿಯಲ್ಲ, ನಾಡಿನ ಹೋರಾಟದ ಶಕ್ತಿ



ಕಲಬುರಗಿ,ಏ.24:ರಾಜ್‌ಕುಮಾರ್ ಕೇವಲ ವ್ಯಕ್ತಿ, ನಟನಷ್ಟೆಯಲ್ಲ, ಅವರೊಬ್ಬ ನಾಡಿನ ಹೋರಾಟದ ಪ್ರತೀಕ ಶಕ್ತಿಯಾಗಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ ಹೇಳಿದರು.ಕಲಬುರಗಿ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇವುಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದ ಕನ್ನಡ ಭವನದ ಸುವರ್ಣ ಸಭಾಭವನದಲ್ಲಿ ಆಯೋಜಿಸಿದ ವರನಟ ಡಾ. ಡಾಜ್‌ಕುಮಾರ್ ಅವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.ಗೋಕಾಕ್ ಚಳುವಳಿ ಸೇರಿದಂತೆ ಅನೇಕ ಕನ್ನಡಪರ ಹೋರಾಟಗಳಲ್ಲಿ ಮುಂಚೂಣಿಯಲ್ಲಿ ನಿಲ್ಲುತ್ತಿದ್ದ ನಟ ಸಾರ್ವಭೌಮ ರಾಜ್ ಕುಮಾರ ಅವರ ಭಾಷಾಭಿಮಾನ ನಮಗೆಲ್ಲ ಸ್ಫೂರ್ತಿಯ ಚಿಲುಮೆಯಾಗಿದ್ದು, ಇದುವೇ ನಮಗೆಲ್ಲ ಕನ್ನಡ ಉಳಿಸಿ ಬೆಳೆಸುವ ಶಕ್ತಿ ನೀಡಿದೆ ಎಂದ ಅವರು, ತಮ್ಮ ಅಭಿನಯದ ಮೂಲಕ ನಾಡಿನ ಪ್ರತಿಯೊಬ್ಬರ ಹೃದಯದಲ್ಲಿ ಡಾ.ರಾಜ್ ಕುಮಾರ್ ಅಮರರಾಗಿದ್ದಾರೆ ಎಂದರು.ಇದಕ್ಕೂ ಮುನ್ನ ಮುತ್ತುರಾಜನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿಗಳ ಕಚೇರಿಯ ಶಿಷ್ಠಾಚಾರ ತಹಶೀಲ್ದಾರ ಪಂಪಯ್ಯ ಮಾತನಾಡಿ, ಡಾ.ರಾಜ್ ಅವರು ಜೀವನದುದ್ದಕ್ಕೂ ಕನ್ನಡ ಚಿತ್ರ ಹೊರತುಪಡಿಸಿ ಬೇರೆ ಸಿನಿಮಾ ಮಾಡಿಲ್ಲ.ಇದು ಅವರ ಭಾಷಾಭಿಮಾನ ತೋರಿಸುತ್ತದೆ. ವೀರಪ್ಪನ್ ಅವರು ಅವರನ್ನು ಅಪಹರಣ ಮಾಡದೆ ಇದ್ದೆ ಡಾ.ರಾಜ್ ಅವರು ಇನ್ನಷ್ಟು ಕಾಲ ನಮ್ಮೊಂದಿಗೆ ಇರುತ್ತಿದ್ದರು ಎಂದರು.ಗೀತ ಗಾಯನ: ಇದೇ ಸಂದರ್ಭದಲ್ಲಿ ಕಿರಣ ಪಾಟೀಲ ಮತ್ತು ಕಾವೇರಿ ಹಿರೇಮಠ ಅವರುಗಳು ಡಾ. ರಾಜಕುಮಾರ್ ಅಭಿನಯದ ಚಲಿಸುವ ಮೋಡಗಳು ಚಿತ್ರದ "ಜೇನಿನ ಹೊಳೆಯೋ ಹಾಲಿನ ಮಳೆಯೋ", ಸನಾದಿ ಅಪ್ಪಣ್ಣ ಚಿತ್ರದ" ಕರೆದರು ಕೇಳದೆ ಸುಂದರನೆ", ದೇವತಾ ಮನುಷ್ಯ ಚಿತ್ರದ "ಹೃದಯದಲ್ಲಿ ಇದೇನಿದು", ಕವಿರತ್ನ ಕಾಳಿದಾಸ ಚಿತ್ರದ "ಓ. ಪ್ರಿಯತಮಾ", "ಕರುಣೆ ತೋರಯ್" ಸೇರಿದಂತೆ ಅನೇಕ ಚಿತ್ರಗೀತೆಗಳು, ವಿಶೇಷವಾಗಿ ಪುನಿತ್ ರಾಜಕುಮಾರ್ ಅಭಿನಯದ "ಬೊಂಬೆ ಹೇಳುತೈತೆ ಮತ್ತೆ ಹೇಳುತೈತೆ ನೀನು ರಾಜಕುಮಾರ" ಹಾಡಿ ಗಾನದ ಸುಧೆ ಹರಿಸಿದರು. ಇದಲ್ಲದೆ ಅನೇಕ ಕನ್ನಡಾಭಿಮಾನಿಗಳು ರಾಜ್ ಅಭಿನಯದ ಕನ್ನಡ ಹಾಡು ಖುಷಿಪಟ್ಟರು.ಮೌನಾಚರಣೆ: ಇದೇ ಸಂದರ್ಭದಲ್ಲಿ ಕಾರ್ಯಕ್ರಮ ಆರಂಭಕ್ಕು ಮುನ್ನ ಇತ್ತೀಚೆಗೆ ಜಮ್ಮು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಂ ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಸಾವನಪ್ಪಿದವರ ಆತ್ಮಕ್ಕೆ ಶಾಂತಿ ಕೋರಿ ಎರಡು ನಿಮಿಷ ಮೌನಾಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಡಿ.ಕೆ.ರಾಜರತ್ನ, ಡಾ.ರಾಜ್ ಕುಮಾರ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ರಾಘವೇಂದ್ರ ವಿ. ಕುಲಕರ್ಣಿ, ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಡಾ. ರಾಜ್‌ಕುಮಾರ್ ಅಭಿಮಾನಿಗಳು, ಸಾರ್ವಜನಿಕರು ಭಾಗವಹಿಸಿದ್ದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ರವಿ ಮಿರಸ್ಕರ್ ಸ್ವಾಗತಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶಿವರಾಜ ಅಂಡಗಿ ನಿರೂಪಿಸಿದರೆ, ಗೌರವ ಕಾರ್ಯದರ್ಶಿ ಧರ್ಮಣ್ಣ ಧನ್ನಿ ವಂದಿಸಿದರು.

## 5ನೇ ದಿನಕ್ಕೆ ಕಾಲಿಟ್ಟ ಧರಣಿ ಸತ್ಯಾಗ್ರಹ



ಕಲಬುರಗಿ:ಏ.24: ಜಿಲ್ಲೆಯ ಸೇಡಂ ತಾಲೂಕಿನ ಮಳಖೇಡ ಗ್ರಾಮದಲ್ಲಿರುವ ರಾಜೇಶ್ರೀ ಅಲ್ಟ್ರಾಟೆಕ್ ಸಿಮೆಂಟ್ ಕಾರ್ಖಾನೆಯಲ್ಲಿ ಪ್ಯಾಕಿಂಗ್ ಮತ್ತು ಲೋಚಿಂಗ್ ಕಾರ್ಮಿಕರಿಗೆ ಸುಮಾರು ವರ್ಷಗಳಿಂದ ಆಗುತ್ತಿರುವ ಸಮಸ್ಯೆಗಳು ಅಂದರೆ :- ಸರಿಯಾದ ಸಮಯದಲ್ಲಿ ಕೆಲಸಕ್ಕೆ ತೆಗೆದುಕೊಳ್ಳುವುದಿಲ್ಲ ಹಾಗು ಮನಬಂದಂತೆ ಸಮಯ ಮೀರಿ ರಾತ್ರೋರಾತ್ರಿ ವೇಳೆಯಲ್ಲಿ ಕೆಲಸ ತೆಗೆದುಕೊಳ್ಳಣ್ಣನ್ನು, ಸ್ಯಾಲರಿ ಸ್ಲಿಪ್ ಸರಿಯಾದ ಸಮಯಕ್ಕೆ ಕೊಡದೇ ಇರುವುದರಿಂದ ಯಾವುದೇ ಒಂದು ಶೀಫ್ರ ವೈಸ್ ನಿಯಮ ಪ್ರಕಾರ ಕೆಲಸ ತೆಗೆದುಕೊಳ್ಳುತ್ತಿಲ್ಲ.ಸಂಬಂಧಪಟ್ಟ ಎಚ್.ಆರ್.ನಾರಾಯಣ ಹಾಗು ಕಂಪನಿಯ ಸಿಬ್ಬಂದಿಗಳಿಗೆ ಮನವಿ ಮಾಡಿದರು ಹಾಗು ಸಂಬಂಧಪಟ್ಟ ಕಾರ್ಮಿಕ ಇಲಾಖೆಯ ಎದುರುಗಡೆ ಆಗು ಜಿಲ್ಲಾಧಿಕಾರಿಗಳ ಕಛೇರಿ ಎದುರುಗಡೆ ಹೊರಾಟ ಮಾಡಿದರು ಕೂಡ ಸಂಬಂಧಪಟ್ಟ ಯಾವುದೇ ಅಧಿಕಾರಿಗಳು ಇಲ್ಲಿಯವರೆಗೆ ಗಮನ ಹರಿಸುತ್ತಿಲ್ಲ.ನಿರ್ಲಕ್ಷತನ ತೋರಿಸುತ್ತಿದ್ದಾರೆ. ಹಾಗು ಹೋರಾಟ ಮಾಡಿದ ಮೇಲೆ ಕೂಡ ಕಾರ್ಮಿಕರಿಗೆ ಅಲ್ಲಿ ಇರುವ ಕಂಪನಿಯ ಸುಪರ ವೈಸರಗಳು ಹಾಗು ಕೇಲವು ಪುಡಿರೌಡಿಗಳು ಕಾರ್ಮಿಕರ ಮೇಲೆ ದೌರ್ಜನ್ಯ ಗುಂಡಾಗಿರಿ ಅಸತ್ಯವರ್ತನೆ, ಬೇದರಿಕೆ, ಅಲ್ಲಿರುವ ಸುಪರವೈಸರಗಳು ಮತ್ತು ಅರ್ಜುನ ರೋಚವೈಸ್ ಮತ್ತು ಮಹಾರಾಜ ಗ್ರೂಪ್ ಇವರ ಕೊಂಟೆಕ್ಟ್ ಲೈಸೆನ್ನ ರದ್ದು ಮಾಡಿ ಕಪ್ಪು ಪಟ್ಟಿಗೆ ಸೇರಿಸಬೇಕು ಹಾಗು ಎಚ್. ಆರ್. ಮತ್ತು ಮೇಲ್ದಾಣಿಸಿದ ಸಂಬಂಧಪಟ್ಟವರ ಮೇಲೆ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು ಹಾಗು ಕಾರ್ಮಿಕರಿಗೆ ಸಿಗಬೇಕಾದ ಸೌವಲತ್ತು, ಹೆಚ್ಚಿನ ಸಂಬಳ ಒದಗಿಸಿಕೊಟ್ಟು

ಕಾರ್ಮಿಕರ ಸಮಸ್ಯೆ ಆದಷ್ಟು ಬೇಗ ಬಗೆ ಹರಿಸಿಕೊಟ್ಟು ಅನುಕೂಲ ಮಾಡಿಕೊಡಬೇಕೆಂದು ಸಂಘಟನೆ ವತಿಯಿಂದ ವಿನಂತಿಸಿಕೊಳ್ಳುತ್ತೇವೆ.

ಕಾರ್ಮಿಕರ ಇಡೇರಿಸಬೇಕಾದ ಬೇಡಿಕೆಗಳು ಈ ಕೆಳಗಿನಂತೆ ಇರುತ್ತದೆ.1) ಕಾಲಿಂಗ್ ಡ್ಯುಟಿ ರದ್ದುಪಡಿಸಿ, ಸುಮಾರು 08 ಗಂಟೆಗಳ ಕಾಲ ಶೀಫ್ರ ವೈಸ್ ಕೆಲಸ ಎ.ಬಿ.ಸಿ. ಪ್ರಕಾರ ನಿಯೋಜಿಸಬೇಕು,21(Board ofWages)ಪದ್ದತಿಯಂತೆ ಪ್ರತಿ ದಿನ ರೂ. 1063/-ಗಳು ವೇತನ ಪಾವತಿ ಮಾಡಬೇಕು.

3) ಪ್ರತಿ ತಿಂಗಳಿಗೆ ಸ್ಯಾಲರಿ ಸ್ಲಿಪ್ ತಪ್ಪದೇ ಕೊಡಬೇಕು. ಅದರಲ್ಲಿ ಎ.ಎಸ್.ಐ.ಪಿ.ಎಫ್. ಬೋನಸ್ ಗೆಜ್ಯುರಿಟಿ ಡಿ.ಎ ಮತ್ತು ಬಿ.ಡಿ.ಎ. ಪ್ರತಿ ದಿನ ವೇತನದ ದರ ಎಷ್ಟು ಎಂಬುವುದನ್ನು ಫಲಪೂರ್ಣವಾಗಿ ನಮೂದಿಸಬೇಕು. ಪ್ರತಿ ಒಂದು ಗಂಟೆಗೆ ಹೆಚ್ಚುವರಿ ಕೆಲಸಕ್ಕೆ ಕೇಂದ್ರ ಕಾರ್ಮಿಕ ಇಲಾಖೆ ನಿಯಮದಂತೆ ಓಟಿ ದರ ಎಷ್ಟು ಎಂಬುವುದನ್ನು ನಮೂದಿಸಬೇಕು.

4) ಕಾರ್ಮಿಕರಿಗೆ ಊಟದ ಸಮಯ ಕನಿಷ್ಠ 45 ನಿಮಿಷ ಅಥವಾ 01 ಗಂಟೆಯವರೆಗೆ ಕಾಲವಧಿ ನಿಗಧಿ ಪಡಿಸಬೇಕು, ಕಾರ್ಮಿಕರಿಗೆ ಟೀ ಬ್ರೇಕ್ ಇರಬೇಕು.

51ಕಂಪನಿಯಲ್ಲಿ ಮಾಡುತ್ತಿರುವ ಕಾರ್ಮಿಕರ ಕುಟುಂಬಸ್ಥರಿಗೆ ಏನಾದರು ಸಮಸ್ಯೆ ಉಂಟಾದಾಗ ಊರಿಗೆ ಹೋದಾಗ ಮತ್ತು ಊರಿನಿಂದ ಬಂದಕೂಡಲೇ ಕೆಲಸಕ್ಕೆ) ಕಂಪನಿಯ ವತಿಯಿಂದ ತುರ್ತು ವೈದ್ಯಕೀಯ ಸೇವೆಗಾಗಿ ಅಂಬ್ಯುಲೇನ್ಸ ವ್ಯವಸ್ಥೆ ಮಾಡಬೇಕು.

8) ಸರ್ಕಾರಿ ರಜೆ ದಿನಗಳಲ್ಲಿ ಸದರಿ ಕಂಪನಿಯಲ್ಲಿ ಕೆಲಸ ಮಾಡಿದರೆ 02 ದಿನದ ವೇತನವನ್ನು ಕೊಡಬೇಕು, ಕೆಲಸ ಮಾಡದೇ ಇದ್ದಲ್ಲಿ 01 ದಿನದ ವೇತನ ಕೊಡಬೇಕು.

9) ಕರ್ತವ್ಯನಿರತ ಕಾರ್ಮಿಕರಿಗೆ ಪ್ರತಿವರ್ಷಕ್ಕೆ ಎರಡು ಜೋಡ ಸಮವಸ್ತ್ರಗಳನ್ನು ಕೊಡಬೇಕು. ಮತ್ತು ಪ್ರತಿ ತಿಂಗಳಿಗೆ 1 ಕೆ.ಜಿ. ಕೊಬರಿ ಎಣ್ಣೆ, 2 ಕೆ.ಜಿ. ಬೆಲ್ಲವನ್ನು ಕಡ್ಡಾಯವಾಗಿ ಕೊಡಬೇಕು."

10) ಬಡ ಕಾರ್ಮಿಕರ ಮಕ್ಕಳಿಗೆ ಉನ್ನತ ಮಟ್ಟದಲ್ಲಿ ಶಿಕ್ಷಣ ಹಾಗು ಸ್ಕಾಲರಶೀಪ್, ಮತ್ತು ಇತರೆ ಸೌಲಭ್ಯ ಒದಗಿಸಿಕೊಡಬೇಕು.

ಆದ್ದರಿಂದ ಮಾನ್ಯರವರು ಈ ಬೇಡಿಕೆಗಳನ್ನು ಕೂಡಲೇ ಆದಷ್ಟು ಬೇಗ ಇಡೇರಿಸಬೇಕೆಂದು ಅಂಬೇಡ್ಕರ್ ಸೇವಾ ಸಮಿತಿ ಕರ್ನಾಟಕ ಸಂಘಟನೆ ವತಿಯಿಂದ ವಿನಂತಿಸಿಕೊಳ್ಳುತ್ತೇವೆ ಎಂದು ಅಂಬೇಡ್ಕರ್ ಸೇವಾ ಸಮಿತಿ ಕರ್ನಾಟಕ ಯುವ ಘಟಕ ಅಧ್ಯಕ್ಷರು ಅರ್ಜುನ್ ಅವರು ಮನವಿ ಮಾಡಿದರು.

## ದತ್ತಾತ್ರೇಯ ದೇವಸ್ಥಾನ ಅಭಿವೃದ್ಧಿಗೆ ನಾಟಿಕರ್ ಧರಣಿ 8ನೇ ದಿನಕ್ಕೆ




ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಏ.24:ಗಾಣಗಾಪುರದ ದತ್ತಾತ್ರೇಯ ದೇವಸ್ಥಾನವನ್ನು ಕಾಶಿ ವಿಶ್ವನಾಥ ದೇವಸ್ಥಾನದ ಮಾದರಿಯಲ್ಲಿ ಅಭಿವೃದ್ಧಿ ಮಾಡುವಂತೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಯುತ್ತಿದ್ದು ಇವತ್ತು ಎಂಟನೇಯ ದಿನಕ್ಕೆ ಕಾಲಿಟ್ಟಿದೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹಕ್ಕೆ ಇಂದು ಅಫಜಲಪುರ ಮಠದ ಪೂಜ್ಯ ಪ್ರಣವ ನಿರಂಜನ ಸ್ವಾಮಿಜಿ ಹಾಗೂ ಶೋಭಾ ಬಾಣಿ ಬಿಜೆಪಿ ಹಿಂದುಳಿದ ಮಹಿಳಾ ಉಪಾಧ್ಯಕ್ಷರು ಸಾಯಬಣ್ಣ ಕರಜಗಿ, ಸಂಗಣ್ಣಾ ಹಣಮಂತಗೋಳ, ಶಿವಾಜಿ, ಹೈದರಸಾಬ ಮುಲ್ಲಾ, ರಾಮಲಿಂಗ ನಾಟೀಕಾರ, ದತ್ತು ನಾಯ-ಕೋಡಿ, ಉಮ್ಮಣಗೌಡ ಪಾಟೀಲ, ಶ್ರೀಶೈಲ ಬಾಣಿ, ಶರಣಪ್ಪ ಬಂದರವಾಡ, ಭೀಮರಾವ ಜಾಲಿಹಾಲ, ಹಾಗೂ ವಿವಿಧ ಸಮಾಜದ ಮುಖಂಡರು ಭಾಗವಹಿಸಿ ಬೆಂಬಲ ಸೂಚಿಸಿದರು.

## ಪ್ರಿಯಾಂಕ್ ಖರ್ಗೆ ಹೆಸರಿಗೆ ಕಪ್ಪು ಚುಕ್ಕೆ ತರುವ ಕೆಲಸ ನಡೆದಿದೆ:ಅರಣಕಲ್




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.24: ಜಿಲ್ಲೆ ಚಿತ್ತಾಪೂರ ತಾಲೂಕಿನ ಭಾಗೋಡಿ ಗ್ರಾಮದ ಹತ್ತಿರ ಕಾಗಿಣಾ ನದಿಯಲ್ಲಿ ವ್ಯಾಪಕವಾಗಿ ಮರಳು ಗಣಿಗಾರಿಕೆ ನಡೆದು ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಪ್ರಿಯಾಂಕ್ ಖರ್ಗೆ ಅವರ ಹೆಸರಿಗೆ ಕಪ್ಪು ಚುಕ್ಕೆ ಹಚ್ಚುವ ಕೆಲಸ ಮಾಡಲಾಗುತ್ತಿದೆ. ಮರಳು ಗಣಿಗಾರಿಕೆಯ ಕುರಿತು ಸಮಗ್ರ ಮಾಹಿತಿ ಸಚಿವರಿಗೆ ವಿಡಿಯೊ ಮೂಲಕ ತಿಳಿಸಿ. ನಿಮಗೆ ಕೆಟ್ಟ ಹೆಸರು ಬರುತ್ತದೆ ನದಿಯಲ್ಲಿ ಮರಳು ಗಣಿಗಾರಿಕೆ ತಡೆಹಿಡಿಯಲು ಮುಂದಾಗಬೇಕು ಎಂದು ಕೋರಲು ವಿಡಿಯೊ ಮಾಡಿಸಿದ್ದೇನೆ ಹೊರತು ಯಾರ ಹತ್ತಿರವೂ ಹಣ ಕೇಳುವ ದುರುದ್ದೇಶದಿಂದ ಮಾಡಿದ್ದಲ್ಲ ಎಂದು ಮೊದಲು ಸ್ಪಷ್ಟಪಡಿಸುತ್ತಿದ್ದೇನೆ ಎಂದು ದೇವಿಂದ್ರ ಎಂ. ಅರಣಕಲ್ ತಿಳಿಸಿದ್ದಾರೆ.ಕಾಗಿಣಾ ಪರಿಸರದಲ್ಲಿನ ಬೆಳಗುಂಪಾ ಸಮೀಪ ಖಾಸಗಿ ಪಟ್ಟಾ ಜಮೀನಿನಲ್ಲಿ ಮರಳು ಗಣಿಗಾರಿಕೆ ಸ್ಥಳದಲ್ಲಿ ಬೆಳಗುಂಪಾ ಗ್ರಾಮದ ಶಶಿಧರ್ ಎಂಬ ಕೋಲಿ ಸಮಾಜದ ವ್ಯಕ್ತಿಯ ಶವ ದೊರೆತಾಗ ಮೃತನ ಕುಟುಂಬಕ್ಕೆ ನ್ಯಾಯ ಕೊಡಿಸಲೆಂದು ಘಟನಾ ಸ್ಥಳಕ್ಕೆ ಆಗಮಿಸಿದ ಕೋಲಿ, ಕಬ್ಬಲಿಗ ಸಮಾಜದ ಸಮನ್ವಯ ಸಮಿತಿ ಮುಖಂಡ ಅವ್ವಣ್ಣಾ ಮ್ಯಾಕೇರಿ ಅವರು ಧ್ವನಿ ಎತ್ತಿದ್ದಾರೆ. ಅವರ ಧ್ವನಿಗೆ ಶಕ್ತಿ ಬರಲಿ ಎಂದು ಮರಳು ಗಣಿಗಾರಿಕೆಯ ವಿಡಿಯೊ ತುಣುಕ್ಕೊಂದು ಕೊಟ್ಟಿದ್ದು ನಿಜ. ಆದರೆ, ಅವರು ಅದನ್ನು ತಮ್ಮ ಸ್ವಾರ್ಥ ರಾಜಕೀಯಕ್ಕಾಗಿ ವಿಡಿಯೊ ಬಳಸಿಕೊಂಡು, ನನ್ನ ಹೆಸರಿಗೆ ಕಳಂಕ ಹಚ್ಚುವ ಕೆಲಸ ಮಾಡಿದ್ದನ್ನು ಖಂಡಿಸುತ್ತೇನೆ ಎಂದಿದ್ದಾರೆ.ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಮಾತನಾಡುವ ಅವ್ವಣ್ಣಾ ಅವರಿಗೆ ಧೈರ್ಯ ಮತ್ತು ನೈತಿಕತೆಯಿದ್ದರೆ ಬಿಜೆಪಿಯವರು ಎಷ್ಟು ಜನರು ಮರಳುಗಾರಿಕೆ ದಂಧೆ ಮಾಡುತ್ತಿದ್ದಾರೆ. ಬಿಜೆಪಿ ಸರ್ಕಾರದಲ್ಲಿ ಎಷ್ಟು ಖಾಸಗಿ ಪಟ್ಟಾ ಜಮೀನುಗಳಲ್ಲಿ ಮರಳುಗಾರಿಕೆ ನಡೆಸಲು ಮತ್ತು ಕಾಗಿಣಾ ನದಿಯಲ್ಲಿ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ಮರಳುಗಾರಿಕೆಗೆ ಅನುಮತಿ ಕೊಟ್ಟಿರುವ ಕುರಿತು ಬಹಿರಂಗಪಡಿಸಲಿ, ಸತ್ತಿರುವ ವ್ಯಕ್ತಿಯ ಹೆಸರಲ್ಲಿ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವವರು ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕೆಟ್ಟ ಹೆಸರು ತರುವ ಏಕೈಕ ದುರುದ್ದೇಶದಿಂದ ಆರೋಪ ಮಾಡುವುದು ಖಂಡಿಸುತ್ತೇನೆ. ತಮ್ಮ ರಾಜಕೀಯಕ್ಕೆ ಕೋಲಿ ಸಮಾಜ ಬಳಸಿಕೊಳ್ಳುವುದು ಬಿಟ್ಟು ಪಕ್ಷದ ಹೆಸರು ಬಳಸಿಕೊಳ್ಳಲಿ ಎಂದರು.ಎಂದು ಒತ್ತಾಯಿಸುತ್ತೇನೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಮರಳು ಗುಂಡಿಯಲ್ಲಿ ಬಿದ್ದು ಮೃತಪಟ್ಟ ಕುಟುಂಬದವರಿಗೆ ಭೇಟಿಯಾಗದೆ ಮೃತದೇಹ ಪತ್ತೆಯಾದ ಮರಳು ಗುಂಡಿ ವೀಕ್ಷಣೆ ಮಾಡದೆ, ಸರ್ಕಾರಿ ಸಂಸ್ಥೆಯಾದ ಕೆಆರ್ಐಡಿಎಲ್ ಮರಳು ದಾಸ್ತಾನು ಅಡ್ಡೆ ಮತ್ತು ಅಡ್ಡೆಯಲ್ಲಿ ಸಂಗ್ರಹಿಸಿದ್ದ ಬೃಹತ್ ಪ್ರಮಾಣದ ಮರಳು ನೋಡದೆ ನೇರವಾಗಿ ಭಾಗೋಡಿ ಗ್ರಾಮಕ್ಕೆ ಬಂದ್ದಿದ್ದಕ್ಕೆ ವಿರೋಧ ವ್ಯಕ್ತಪಡಿಸಿದ್ದೇನೆಯೆ ಹೊರತು ಇದರಲ್ಲಿ ಯಾವುದೇ ರೀತಿಯಲ್ಲಿ ಸಚಿವರ ಪಾತ್ರ ಇಲ್ಲ. ಕಾರ್ಯಕರ್ತರನ್ನು ಮುಂದೆ ಮಾಡಿ ಹೇಡಿತನದ ರಾಜಕಾರಣ ಮಾಡುವ ರಾಜ-ಕಾರಣಿ ಪ್ರಿಯಾಂಕ್ ಖರ್ಗೆ ಅವರಲ್ಲ ಎಂದರು.ವಕೀಲರಾಗಿ ಕೆಲಸ ಮಾಡುವ ಹಣಮಂತ ಯಳಸಂಗಿ ಅವರು ನನಗಿಂತ ವಯಸ್ಸಿನಲ್ಲಿ ಹಿರಿಯರು. ಸರಿಯಾದ ಮಾಹಿತಿಯಿಲ್ಲದೆ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುವ ಭರದಲ್ಲಿ ನನ್ನ ಕುರಿತು ಬಹಳ ಹಗುರವಾಗಿ, ಸಚಿವ ಪ್ರಿಯಾಂಕ್ ಖರ್ಗೆ ಅವರ ಕುರಿತು ಸುಳ್ಳು ಆರೋಪ ಮಾಡಿ ಮಾತನಾಡಿದ್ದನ್ನು ಬಲವಾಗಿ ಖಂಡಿಸುತ್ತೇನೆ ಮತ್ತು ವಿರೋಧಿಸುತ್ತೇನೆ. ನನಗೆ ಮ್ಯಾನೇಜ್ ಮಾಡಿದ್ದಾರೆ ಎಂದು ಸುಳ್ಳು ಆರೋಪ ಮಾಡಿರುವ ಯಳಸಂಗಿ ಅವರು ಅದನ್ನು ಸಾಭೀತು ಪಡಿಸಬೇಕು.ಸಾಭೀತುಪಡಿಸಿದರೆ ಒಂದು ವರ್ಷ ಅವರ ಆಳಾಗಿ ದುಡಿಯುತ್ತೇನೆ. ಇಲ್ಲವಾದರೆ ಅವರು ಬಹಿರಂಗ ಕ್ಷಮೆ ಕೇಳಬೇಕು ಅಥವಾ ವಕೀಲ ವೃತ್ತಿಗೆ ವಿದಾಯ ಹೇಳಬೇಕು ಎಂದು ಸವಾಲು ಹಾಕುತ್ತೇನೆ ಎಂದರು.ಸಮಾಜದ ಸಂಘಟನೆಯಲ್ಲಿ ದಿ.ವಿಠಲ್ ಹೇರೂರ ಅವರ ಜೊತೆಗೆ ಗುರುತಿಸಿಕೊಂಡು, ಅವರ ಕಟ್ಟಾ ಅನುಯಾಯಿಯಾಗಿ ಸಂಘಟನೆ ಕೆಲಸ ಮಾಡಿದ್ದೇನೆ. ಯಾವುದೇ ರೀತಿಯ ಆಸೆ, ಆಮೀಷಗಳಿಗೆ ಒಳಗಾಗುವ ವ್ಯಕ್ತಿ ನಾನಲ್ಲ. ಕಳೆದ ಇಪ್ಪತ್ತು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತನಾಗಿ ಪ್ರಾಮಾಣಿಕವಾಗಿ ಪಕ್ಷದ ಕೆಲಸ ಮಾಡುತ್ತಿದ್ದೇನೆ. ಪಕ್ಷದ ವಿರುದ್ಧ, ಸಚಿವ ಪ್ರಿಯಾಂಕ್ ಖರ್ಗೆ ಅವರ ವಿರುದ್ಧ ಯಾವುದೇ ವಿಷಯದಲ್ಲಿ ಯಾರದ್ದೆ' 'ವಿರೋಧ ಬಂದಾಗ, ಸುಳ್ಳು ಆರೋಪ ಮಾಡಿದಾಗ ಪಕ್ಷದ ಕಾರ್ಯಕರ್ತನಾಗಿ ಅದಕ್ಕೆ ಉತ್ತರ ಕೊಡುವ ಕೆಲಸ ಮಾಡುವುದು ನನ್ನ ಹಕ್ಕು ಮತ್ತು ಜವಾಬ್ದಾರಿಯಾಗಿದೆ. ಅದನ್ನು ಪ್ರಶ್ನಿಸುವ ನೈತಿಕತೆ ಬಿಜೆಪಿಗೆ ಮತ್ತು ಬೇರೆಯಾರಿಗೂ ಇಲ್ಲ ಎಂದು ದೇವಿಂದ್ರ ಎಂ. ಅರಣಕಲ್ ಅವರು ಆಕ್ರೋಶ ವ್ಯಕ್ತಪಡಿಸಿದರು

## ಬೈಕ ಸವಾರನ ಮೇಲೆ ಹಲ್ಲೆ ಖಂಡನೀಯ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಏ.24:ಬೆಂಗಳೂರಿನ ನಡು ರಸ್ತೆಯಲ್ಲಿ ಏಕಾಏಕಿ ಕಾರ್‌ನ ಡೋರ್ ತೆಗೆದಿದ್ದಕ್ಕೆ ಬೈಕ್ ಸವಾರ ಅದಕ್ಕೆ ಡಿಕ್ಕಿ ಹೊಡೆದುಕೊಂಡಿದ್ದ. ಯಾಕೆ ಎಂದು ಪ್ರಶ್ನಿಸಿದ್ದಕ್ಕೆ ವಾಯುಪಡೆಯ ಈ ಅಧಿಕಾರಿ ಬೈಕ್ ಸವಾರನಿಗೆ ಮನಬಂದಂತೆ ಬಡಿದಿದ್ದಕ್ಕೆ ಸಿಸಿಟಿವಿಯ ದೃಶ್ಯಗಳೇ ಸಾಕ್ಷಿ ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ ಶೆಟ್ಟಿ) ಬಣದ ಕಲ್ಯಾಣ ಕರ್ನಾಟಕ ಅಧ್ಯಕ್ಷ ಅಭಿಶೇಕ ಬಾಲಾಜಿ ಹೇಳಿದರು. ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ತಾನೇ ರೌಡಿಯಂತೆ ವರ್ತಿಸಿ ತನ್ನ ಮೇಲೆ ಹಲ್ಲೆಯಾಗಿದೆ ಎಂದು ವಿಡಿಯೋ ಮಾಡಿ ಅನುಕಂಪ ಗಿಟ್ಟಿಸಿಕೊಳ್ಳಲು ಪ್ರಯತ್ನಿಸಿದ್ದ ಈ ವಿಂಗ್ ಕಮಾಂಡರ್ ಶಿಲಾದಿತ್ಯ ಬೋಸ್, ಹಲ್ಲೆ ಸಂದರ್ಭದಲ್ಲಿ ಬೈಕ್ ಸವಾರನ ಕೀ ಈ ಶಿಲಾದಿತ್ಯನ ಮುಖಕ್ಕೆ ತಾಗಿ ರಕ್ತ ಬಂದಿತ್ತು. ಅದನ್ನೇ ಬಂಡವಾಳ ಮಾಡಿಕೊಂಡು ವಿಡಿಯೋ ಹೇಳಿಕೆ ರಿಲೀಸ್ ಮಾಡಿದ್ದ. ನ್ಯಾಷನಲ್ ಮೀಡಿಯಾಗಳು ಬೆಂಗಳೂರಲ್ಲಿ ವಲಸಿಗರಿಗೆ ರಕ್ಷಣೆಯಿಲ್ಲ ಎಂಬರ್ಥದಲ್ಲಿ ಸುದ್ದಿ ಮಾಡಿದ್ದವು. ಅಷ್ಟೇ ಅಲ್ಲ. ಕನ್ನಡ ಮಾತನಾಡದಿದ್ದಕ್ಕೆ ಬೆಂಗಳೂರಿನಲ್ಲಿ ನನ್ನ ಮೇಲೆ ಹಲ್ಲೆಯಾಗಿದೆ ಎಂದು ಬಿಂಬಿಸಲು ಈ ಅಧಿಕಾರಿ ಪ್ರಯತ್ನ ನಡೆಸಿದ್ದ. ತನ್ನ ಪತ್ನಿ ಮೂಲಕ ಬೈಕ್ ಸವಾರನ ವಿರುದ್ಧ ಪೊಲೀಸ್ ದೂರು ಕೊಡಿಸಿದ್ದ. ಈ ದೂರನ್ನ ನಂಬಿ ಹಲ್ಲೆಗೊಳಗಾದ ಬೈಕ್ ಸವಾರ ವಿಕಾಸ್‌ನನ್ನೇ ಬೈಯಪ್ಪನಹಳ್ಳಿ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕರ್ನಾಟಕಕ್ಕೆ ತನ್ನ ಹೊಟ್ಟೆಪಾಡಿಗಾಗಿ ವಲಸೆ ಬಂದವರು ಈ ನೆಲದ, ಇಲ್ಲಿನ ಜನರ ಮೇಲೆ ನಿಯತ್ತಿನಿಂದ ಇರಲಿ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

### ಧರ್ಮ ಒಡೆಯುವ ಶಕ್ತಿಗಳ ಬಗ್ಗೆ ಎಚ್ಚರ ಇರಲಿ

# ಪಂಚ ಪೀಠಗಳು ಸಮಾಜದಲ್ಲಿ ಸಮತೋಲನ ಕಾಪಾಡಿಕೊಂಡು ಬಂದಿವೆ:- ಶ್ರೀ ರಂಭಾಪುರಿ ಜಗದ್ಗುರು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಧರ್ಮ ಹಾಗೂ ಸಮಾಜ ಒಡೆಯುವಂಥ ದುಷ್ಟ ಶಕ್ತಿಗಳ ಬಗ್ಗೆ ಭಕ್ತರು ಜಾಗೃತರಾಗಿರಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು. ತಾಲೂಕಿನ ಹುಡಗಿ ಗ್ರಾಮದ ಶ್ರೀ ರಂಭಾಪುರಿ ಶಾಖಾ ಮಠವಾದ ಕಟ್ಟಿಮನಿ ಹಿರೇಮಠ ಸಂಸ್ಥಾನದಲ್ಲಿ ಆಯೋಜಿಸಿದ್ದ ಶ್ರೀ ದಿಗಂಬರ ಮಠದ ಪೀಠಾಧಿಪತಿ ಶ್ರೀ ವಿರೂಪಾಕ್ಷ ಶಿವಾಚಾರ್ಯರ ಅಮೃತೋತ್ಸವ ಹಾಗೂ ನೂತನ ಶ್ರೀಗಳ ಗುರು ಪಟ್ಟಾಧಿಕಾರ ಮಹೋತ್ಸವದಲ್ಲಿ ಮಾತನಾಡಿದ ಅವರು,ಧರ್ಮದ ವಿಷಯ ಬಂದಾಗ ಎಲ್ಲರೂ ಒಗ್ಗಟ್ಟಿನಿಂದ ಇರಬೇಕು ಎಂದು ಕರೆ ನೀಡಿದರು. ವೀರಶೈವ ಮತ್ತು ಲಿಂಗಾಯತ ಬೇರೆ-ಬೇರೆ ಎಂಬುದು ಸಂಕುಚಿತ ಭಾವನೆ. ಧರ್ಮದ ಸಂವಿಧಾನಕ್ಕೆ ತೆಲೆಬಾಗಿ ಬಂದವರಿಗೆ ಸಮಾಜ ಅಪ್ಪಿಕೊಳ್ಳುತ್ತದೆ. ವೀರಶೈವ ಧರ್ಮಕ್ಕೆ ತನ್ನದೇ ಆದ ಇತಿಹಾಸ, ಪರಂಪರೆ ಇದೆ. ವೀರಶೈವ ಧರ್ಮದ ಪಂಚಪೀಠದ ಬಗ್ಗೆ ಜಗತ್ತಿಗೆ ಪರಿಚಯ ಮಾಡಿಕೊಡಬೇಕಿಲ್ಲ. ದೇವರ ಮುಂದೆ ಬೆಳಗುವ ನಂದಾದೀಪದಂತೆ ಪೀಠಗಳು ಯಾವಾಗಲೂ ಸಮಾಜದಲ್ಲಿ ಸಮತೋಲನ ಕಾಪಾಡಿಕೊಂಡು ಬಂದಿವೆ. ಈ ಮೂಲಕ ಧರ್ಮ ಜಾಗೃತಿ ಕಾರ್ಯ ಮಾಡುತ್ತಿವೆ ಎಂದು ನುಡಿದರು. ಹುಡಗಿ ಮಠದ ಶ್ರೀ ವಿರೂಪಾಕ್ಷ ಶಿವಾಚಾರ್ಯರ ಧಾರ್ಮಿಕ ಹಾಗೂ ಸಮಾಜಮುಖಿ ಕಾರ್ಯ ಅಪಾರ. ಅವರ ಅಮೃತ ಮಹೋತ್ಸವವನ್ನು ಭಕ್ತರು ಹಮ್ಮಿಕೊಂಡಿರುವುದು ಸಂತಸ ತಂದಿದೆ. ಇವರ ಸ್ಥಾನಕ್ಕೆ ಉತ್ತರಾಧಿಕಾರಿಯಾಗಿ ಶ್ರೀ ನಾಗಯ್ಯ ದೇವರ ಪಟ್ಟಾಧಿಕಾರ ಮಾಡಿದ್ದು, ಇನ್ಮುಂದೆ ಇವರು ಶ್ರೀ ಸೋಮನಾಥ ಶಿವಾಚಾರ್ಯರಾಗಿ ನಾಮಕರಣಗೊಳ್ಳಲಿದ್ದಾರೆ ಎಂದು ತಿಳಿಸಿದರು. ಕೇದಾರ ಪೀಠದ ಜಗದ್ಗುರು ಶ್ರೀ ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದರು ಮಾತನಾಡಿ, ವಿರೂಪಾಕ್ಷ ಶಿವಾಚಾರ್ಯರು ಅತ್ಯಂತ ಸರಳರು, ದೇಶದಲ್ಲಿ ಇಂಥವರು ವಿರಳ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಿ ಮಾತನಾಡಿ, ಯುವಕರು ದುಶ್ಚಟಗಳ ದಾಸರಾಗಿ ದಾರಿ ತಪ್ಪುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಲು ಧರ್ಮೋಪದೇಶ, ಸಂಸ್ಕಾರದ ಅಗತ್ಯವಿದೆ ಎಂದು ಹೇಳಿದರು. ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿದರು. ಶ್ರೀ ರಾಜೇಶ್ವರ ಶಿವಾಚಾರ್ಯ, ಶ್ರೀ ರೇಣುಕ ಗಂಗಾಧರ ಶಿವಾಚಾರ್ಯ, ಶ್ರೀ ಹಾವಗಿಲಿಂಗೇಶ್ವರ ಶಿವಾಚಾರ್ಯ, ಶ್ರೀ ಮೃತುಂಜಯ ಶಿವಾಚಾರ್ಯ, ಶ್ರೀ ಸಿದ್ದಲಿಂಗ ಶಿವಾಚಾರ್ಯ, ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ, ಶ್ರೀ ಚನ್ನಮಲ್ಲ ಸ್ವಾಮೀಜಿ, ಶ್ರೀ ನಾಗಯ್ಯ ದೇವರು ಸೇರಿ ವಿವಿಧ ಮಠಾಧೀಶರು ಸಾನ್ನಿಧ್ಯ, ಶಾಸಕ ಡಾ. ಸಿದ್ದಲಿಂಗಪ್ಪ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ್, ಮಾಜಿ ಶಾಸಕ ಸುಭಾಷ ಕಲ್ಲೂರ, ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್, ಪ್ರಮುಖರಾದ ಬಸವರಾಜ ಆರ್ಯ, ಈಶ್ವರಸಿಂಗ್ ಠಾಕೂರ್, ಶಿವಶರಣಪ್ಪ ಸಿರಿ, ಶಿವಯ್ಯ ಸ್ವಾಮಿ, ಗಿರೀಶ್ ತುಂಬಾ ಇತರರಿದ್ದರು. ಗೌರಿಶಂಕರ ಪರ್ತಾಪುರೆ ಸ್ವಾಗತಿಸಿದರು. ರಮೇಶ ರಾಜೋಳೆ ನಿರೂಪಣೆ ಮಾಡಿದರು. ಡಾ. ಶಾಂತಕುಮಾರ ಸಿದ್ದೇಶ್ವರ ವಂದಿಸಿದರು. ಶ್ರೀ ದಿಗಂಬರ ಕರಿಬಸವೇಶ್ವರ ಜೀವನ ಚರಿತ್ರೆ ಗ್ರಂಥ ಬಿಡುಗಡೆಗೊಳಿಸಲಾಯಿತು.

**ಪೂಜ್ಯರಿಗೆ ಡಾಕ್ಟರೇಟ್ ಸಿಗಲಿ**

ಧಾರ್ಮಿಕ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿದ ಶ್ರೀ ವಿರೂಪಾಕ್ಷ ಶಿವಾಚಾರ್ಯರಿಗೆ ಡಾಕ್ಟರೇಟ್ ನೀಡಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಆಗ್ರಹಿಸಿದರು. ಸಚಿವ ಈಶ್ವರ ಖಂಡ್ರೆ ಸರ್ಕಾರದ ಮೇಲೆ ಒತ್ತಡ ಹಾಕಿ ಶ್ರೀಗಳಿಗೆ ಡಾಕ್ಟರೇಟ್ ಕೊಡಿಸಲು ಸಮಸ್ತ ಭಕ್ತರ ಪರವಾಗಿ ಮನವಿ ಮಾಡುವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಸುಮಾರು 97 ವರ್ಷದ ಹಿರಿಯ ಸ್ವಾಮೀಜಿ ಇವರು. ಇಂದಿಗೂ ಕನ್ನಡಕ ಧರಿಸಲ್ಲ. ಚೆನ್ನಾಗಿ ಮಾತನಾಡುತ್ತಾರೆ. ನಿತ್ಯ ತ್ರಿಕಾಲ ಪೂಜೆ ಮಾಡುತ್ತ ಧರ್ಮ ಕಾರ್ಯದೊಂದಿಗೆ ಶೈಕ್ಷಣಿಕ, ಸಾಮಾಜಿಕ ಕ್ಷೇತ್ರದಲ್ಲಿ ಅಪಾರ ಕೊಡುಗೆ ನೀಡುತ್ತಿದ್ದಾರೆ ಎಂದು ಹೇಳಿದರು.

### ಪಂಡಿತಾರಾಧ್ಯ ಶಿವಾಚಾರ್ಯರ ನೇತೃತ್ವದಲ್ಲಿ ಜಾತ್ರಾ ಮಹೋತ್ಸವ

# ಶ್ರೀ ರೇವಣಸಿದ್ದೇಶ್ವರ ನೂತನ ರಥೋತ್ಸವ ಏಪ್ರಿಲ್ 28ಕ್ಕೆ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ಕೋಡಂಬಲ್ ಮತ್ತು ಮುದನಾಳ ಗ್ರಾಮದ ಹೊರವಲಯದಲ್ಲಿರುವ ಜಗದ್ಗುರು ಶ್ರೀ ರೇವಣಸಿದ್ದೇಶ್ವರ ಮಠವು ನಿರಂತರವಾಗಿ 25 ವರ್ಷಗಳಿಂದ ಜನಸೇವೆಯಲ್ಲಿ, ಆಧ್ಯಾತ್ಮಿಕ ಕ್ರಾಂತಿಯನ್ನು ಮಾಡಿ, ಶ್ರೀಮಠದ ಸಂಸ್ಥಾಪಕ ಪೀಠಾಧಿಪತಿಗಳಾದ ಶ್ರೀ ಸಿದ್ದಾನಂದ ಶಿವಯೋಗಿ ಅವರು ಲೋಕ ಕಲ್ಯಾಣಾರ್ಥಕವಾಗಿ ಅನೇಕ ಅನುಷ್ಠಾನಗಳು ಗೈಯುತ್ತ ಶ್ರೀ ರೇವಣಸಿದ್ದೇಶ್ವರ ಮಠದ ಚುಕಾಣಿಯನ್ನು ಇಲ್ಲಿಯವರೆಗೆ ಅನೇಕ ಜಾತ್ರಾ ಮಹೋತ್ಸವಗಳನ್ನು ನಡೆಸಿಕೊಂಡು ಬಂದಿದ್ದಾರೆ. ತಮ್ಮ ಉತ್ತರಾಧಿಕಾರಿಯಾದ ವೀರಪ್ರಭು ಪಂಡಿತಾರಾಧ್ಯ ಶಿವಾಚಾರ್ಯರು 24-2-2023ರಂದು ಪಂಡಿತಾರಾಧ್ಯ ಶಿವಾಚಾರ್ಯರನ್ನು ಪೀಠಾಧಿಕಾರಿಯಾಗಿ ನೇಮಕ ಮಾಡಲಾಗಿದೆ ಎಂದು ಸಿದ್ದಾನಂದ ಶಿವಯೋಗಿಗಳು ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದ್ದಾರೆ. ಡಾ. ವೀರಪ್ರಭು ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ನೇತೃತ್ವದಲ್ಲಿ ಏಪ್ರಿಲ್ 27 ಮತ್ತು 28ರ ವರೆಗೆ ಜಾತ್ರಾ ಮಹೋತ್ಸವ ಕಾರ್ಯಕ್ರಮ ಸಡಗರದಿಂದ ಜರುಗಲಿವೆ. ಏಪ್ರಿಲ್ 27 ರವಿವಾರ ಬೆಳಿಗ್ಗೆ 7 ಘಂಟೆಗೆ ಧ್ವಜಾರೋಹಣ, ಬೆಳಿಗ್ಗೆ 8 ಗಂಟೆಗೆ ರುದ್ರ ಹೋಮ ಮತ್ತು ಮಹಾ ರುದ್ರಾಭಿಷೇಕ, ಮಹಾನೈವೇದ್ಯ, ರಾತ್ರಿ 8:00 ಗಂಟೆಗೆ ಸಂಗೀತ ಕಾರ್ಯಕ್ರಮ ಜರಗಲಿವೆ. ಏಪ್ರಿಲ್ 28 ಸೋಮವಾರ ಬೆಳಿಗ್ಗೆ 7 ಘಂಟೆಗೆ ಕಳಸಾರೋಹಣ , 8 ಘಂಟೆಗೆ ಮಹಾಪೂಜೆ, 9 ಘಂಟೆಗೆ ಮುತ್ತೈದೆಯರಿಗೆ ಉರಿ ತುಂಬುವ ಕಾರ್ಯಕ್ರಮ ಮಧ್ಯಾಹ್ನ 2 ಗಂಟೆಗೆ ಧರ್ಮಸಭೆ ಸಾಯಂಕಾಲ 5 ಗಂಟೆಗೆ ನೂತನ ರಥೋತ್ಸವ ಉದ್ಘಾಟನಾ ಸಮಾರಂಭದಲ್ಲಿ ಪೂಜ್ಯರಾದ ಹವಾ ಮಲ್ಲಿನಾಥ ಮಹಾರಾಜರು ನಿರಗುಡಿ, ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು, ಸೊಂತ, ಪ್ರಯಾಗರಾಜದ ನಾಗಾ ಸಾಧುಗಳಾದ ಶ್ರೀ ಶ್ರೀ ಕಾಶಿಪುರಿ ಬಾಬಾ ಮಹಾರಾಜರು, ಮತ್ತು ಅಂಗೋರಿ ಬಾಬಾಗಳು, ನಿಡವಂಚಾ ಮಠದ ಮಾತೆ ಮೈತ್ರದೇವಿ, ಶಿವಶರಣೆ ಮಾತಾ ಶಿವಯೋಗಿನಿ ತಾಯಿ ಬೆಳಗಾಂವ, ಕ್ಷೇತ್ರದ ಶಾಸಕ ಡಾ. ಸಿದ್ದು ಪಾಟೀಲ್, ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಮಾಜಿ ಸಚಿವ ರಾಜಶೇಖರ ಪಾಟೀಲ್ ಸೇರಿದಂತೆ ಮಠಾಧೀಶರು, ರಾಜಕೀಯ ಧುರೀಣರು ಆಗಮಿಸಲಿದ್ದಾರೆ ಎಂದು ಪಂಡಿತಾರಾಧ್ಯ ಶಿವಾಚಾರ್ಯರು ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದ್ದಾರೆ. ಈ ಜಾತ್ರಾ ಮಹೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆಯಬೇಕೆಂದು ಭೂದಾನಿಗಳಾದ ಅಮೃತ ರೆಡ್ಡಿ, ಡಾ. ಶ್ರೀನಿವಾಸ್ ರೆಡ್ಡಿ, ಕೃಷ್ಣಾರೆಡ್ಡಿ, ಗೋಪಾಲ್ ರೆಡ್ಡಿ, ಮತ್ತು ರೆಡ್ಡಿ ಪರಿವಾರ ಮುದನ್ನಾಳ ಮನವಿ ಮಾಡಿದ್ದಾರೆ. ಸಮಾಜ

# ಮುದ್ರಾ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ ಏಪ್ರಿಲ್.24: 2025-26ನೇ ಸಾಲಿಗೆ ಬೀದರ ಜಿಲ್ಲೆಯ ಕೈಮಗ್ಗ ನೇಕಾರರಿಗೆ ಮುದ್ರಾ ಯೋಜನೆಯಡಿ ಸಾಲ ಮಂಜೂರಾತಿಗಾಗಿ ಬ್ಯಾಂಕ್‌ಗಳಿಗೆ ಶಿಫಾರಸ್ಸು ಮಾಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಜಿಲ್ಲಾ ಪಂಚಾಯತ ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿಗಳನ್ನು ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ರೇಷ್ಮೆ ಇಲಾಖೆ ಕಛೇರಿ ಕಟ್ಟಡ, 2ನೇ ಮಹಡಿ, ಕೋಳಾರ(ಕೆ), ಬೀದರ-585402 ದೂರವಾಣಿ ಸಂಖ್ಯೆ: 08482-233129 ಇವರ ಕಛೇರಿಗೆ ಸಲ್ಲಿಸಿ ಇದರ ಸದುಪಯೋಗವನ್ನು ಪಡೆಯಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.



ಬಸವಕಲ್ಯಾಣ :- ಬೆಂಗಳೂರು ನಗರದ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಮಲ್ಲಿಕಾರ್ಜುನ ನಾಗರಾಳೆ ಅವರ ಗೃಹಪ್ರವೇಶ ಕಾರ್ಯಕ್ರಮದಲ್ಲಿ ಬೆಂಗಳೂರು ಹೈಕೋರ್ಟ್ ನ್ಯಾಯಮೂರ್ತಿಗಳಾದ ಶ್ರೀ ಶಿವಶಂಕರ ಅಮರಣ್ಣನವರನ್ನು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಚಿತ್ರ ಮಲ್ಲಮ್ಮ ನುಡಿ ವಾರ್ತೆ)

# ಪಹಲ್ಗಾಮ್‌ನಲ್ಲಿ ದಾಳಿ ಖಂಡಿಸಿ: ಕ್ಯಾಂಡಲ್ ಮಾರ್ಚ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪಹಲ್ಗಾಮ್‌ನಲ್ಲಿ ನಡೆದ ದಾಳಿ ಅತ್ಯಂತ ಘೋರ ಮಾನವೀಯತೆಯ ವಿರುದ್ಧದ ಕೃತ್ಯವಾಗಿದ್ದು, ಈ ದಾಳಿಯಲ್ಲಿ ಅನೇಕರು ಬಲಿಯಾಗಿದ್ದಾರೆ, ಉಗ್ರರಿಗೆ ತಕ್ಕ ಶಿಕ್ಷೆಯಾಗಬೇಕು ಎಂದು ಶ್ರೀರಾಮ್ ಸೇನೆ ಆಗ್ರಹಿಸಿದೆ. ಪಟ್ಟಣದಲ್ಲಿ ಗುರುವಾರ ಸಾಯಂಕಾಲ ಶ್ರೀರಾಮ ಸೇನೆ ವತಿಯಿಂದ ಕ್ಯಾಂಡಲ್ ಮಾರ್ಚ್ ಮೂಲಕ ದಾಳಿಯಲ್ಲಿ ಬಲಿಯಾದವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸಿದರು. ಈ ಮೆರವಣಿಗೆಯಲ್ಲಿ ಮಲ್ಲಿಕಾರ್ಜುನ ಪಾಟೀಲ, ರಾಶೀದ್ ಪಟೇಲ್, ಆಕಾಶ ಗುತ್ತೇದಾರ, ಸಾಯಿ ಶಿರ್ಕೆ, ರಾಜದೀಪ ಜಾಬಾ, ನಟವರ ಪವಾರ, ತಬ್ರೇಜ್, ಪ್ರಕಾಶ ಗೌಳಿ, ವೀರೇಶ ತುಗಾಂವ, ಅಮೀತ ತೊಗಲೂರ, ಅಮರ ರೆಡ್ಡಿ, ದತ್ತು ಹಲಗೆ, ಪ್ರವೀಣ ಮೇತ್ರಸ್ಕರ, ರಾಜು ಪೂಜಾರಿ, ಶರಣು ಗಡಮಿ, ಪ್ರವೀಣ ರಾಜಾಪೂರ, ರಾಜಗೋಪಾಲ ಐನಾಪುರ, ಸಚಿನ ಮಠಪತಿ, ದೀಪಕ ಕುದರಿ, ಉಮೇಶ ರೆಡ್ಡಿ, ಸಿದ್ದು ಚೆನ್ನೂರ, ಬಸಪ್ಪ ಪಡಗಿ, ಕಿರಣ ಭೋವಿ, ವಸಂತ , ಕೇದಾರ ಉಪ್ಪಿನ, ಮಹೇಶ ಮಹಾಜನ್, ಮಲ್ಲು ಬೆಂಕಿಪಳ್ಳಿ ಸೇರಿದಂತೆ ಅನೇಕರು ಇದ್ದರು.

# ಸಂಗೀತ ದರ್ಬಾರ್ ಮುಖಾಂತರ 4ನೇ ವರ್ಷದ ಪುಣ್ಯಸ್ಮರಣೆ ಆಚರಣೆ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪಟ್ಟಣದ ಕಾಯಕ ಜೀವಿ ಲಿಂಗೈಕ್ಯ ಅನೀಲಕುಮಾರ ಆರ್. ಹಡಪದ ಅವರ 4ನೇ ವರ್ಷದ ಪುಣ್ಯಸ್ಮರಣೋತ್ಸವವನ್ನು ಇವರ ಕುಟುಂಬದವರು ಕಲಾವಿದರ ಸಂಗೀತ ದರ್ಬಾರ್ ಮೂಲಕ ಏರ್ಪಡಿಸಿ ಪುಣ್ಯಸ್ಮರಣೆ ಆಚರಿಸಿ ಕಲಾವಿದರಿಗೆ ಪ್ರೋತ್ಸಾಹ ನೀಡಿದರು. ಲಿಂಗೈಕ್ಯ ಅನೀಲಕುಮಾರ ಆರ್. ಹಡಪದ ಅವರು ಸರಳ ಜೀವಿಗಳಾಗಿದರು. ಜೀವನದ ಕೊನೆಯ ಉಸಿರಿನ ವರೆಗೆ ಕಲಾವಿದರರನ್ನು ಪ್ರೋತ್ಸಾಹಿಸುತ್ತ ಬಂದಿದ್ದರು. ಕಾಯಕದಲ್ಲಿ ಅಪಾರ ನಂಬಿಕೆ ಇದ್ದವರು ಕಾಯಕ ಮಾಡಿ ಜೀವಿಸುತ್ತಿದರು ಇತರರಿಗೆ ಕಾಯಕದ ಮಹತ್ವದ ಬಗ್ಗೆ ಜಾಗೃತಿ ಮಾಡುತ್ತಿದ್ದರು ಎಂದು ಕಲ್ಯಾಣ ಕರ್ನಾಟಕ ಸಂಗೀತ ಕಲಾವಿದೆ ಬೇಬಿತಾ ಡಿಗ್ಗಿ ಅವರು ಹಾಡುವ ಮೂಲಕ ಸ್ಮರಿಸಿದರು. ಪತ್ರಕರ್ತರು ಹಾಗೂ ಅವರ ಸೊಹೋದರ ರಾಜಕುಮಾರ ಆರ್. ಹಡಪದ ಮಾತನಾಡಿ, ಲಿಂಗೈಕ್ಯ ತಂದೆ ಮತ್ತು ಸಹೋದರನ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ದೇವರಲ್ಲಿ ಪ್ರಾರ್ಥಿಸಿದರು. ನಮ್ಮ ತಂದೆ ತಾಯಿ ಮತ್ತು ಹಿರಿಯರು ಹಾಕಿ ಕೊಟ್ಟಿರುವ ಮಾರ್ಗದಲ್ಲಿ ನನ್ನ ಸೊಹೋದರ ಲಿಂಗೈಕ್ಯ ಅನೀಲಕುಮಾರ ಅವರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯುತ್ತಿದ್ದೇವೆ ಎಂದರು. ವ್ಯಕ್ತಿಯಲ್ಲಿ ದೈಹಿಕ ಬದಲಾವಣೆಂಯೊಂದಿಗೆ ಮಾನಸಿಕ ಶಾಂತಿ ನೀಡುವ ಶಕ್ತಿ ಸಂಗೀತಕ್ಕಿದೆ. ಇಂದಿನ ಒತ್ತಡದ ಬದುಕಿನ ತೊಂದರೆಗೆ ಸಂಗೀತ ಆಲಿಸುವುದು ಅಗತ್ಯವಾಗಿದೆ. ಸಂಗೀತ ಕ್ಷೇತ್ರದ ಬೆಳವಣಿಗೆಗೆ ಇಡೀ ತಮ್ಮ ಜೀವನದುದ್ದಕ್ಕೂ ಸೇವೆಯನ್ನು ಸಲ್ಲಿಸಿ ನಮ್ಮ ನಾಡಿನ ಕೀರ್ತಿಯನ್ನು ದೇಶದಾದ್ಯಂತ ಪಸರಿಸುವಂತೆ ಮಾಡಿದ ಸಂಗೀತ ಕಲಾವಿದೆ ಬೇಬೀತಾ ಡಿಗ್ಗಿ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.

ಮಾತೋಶ್ರೀ ನಾಗಮ್ಮ ಹಡಪದ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಜರುಗಿತ್ತು. ಸಿಂಧನಕೇರಾ ಸೋಮಲಿಂಗೇಶ್ವರ ಭಜನಾ ಮಂಡಳಿ ಅಧ್ಯಕ್ಷ ಶಾಮಕರ್ಣ ಮೂಲಗಿ, ತಬಲವಾದಕ ಛತ್ರಪ್ಪ ಹಡಪದ, ಭೀಮಶಾ ಹಣಗಾರ್, ಮನೋಹರ್ ಕಾಡವಾದಿ, ಮಡೇಪ್ಪ ಹಡಪದ, ಸೂರ್ಯಕಾಂತ ಹಡಪದ, ವೆಂಕಟ ಪೂಜಾರಿ ಇವರು ಸಂಗೀತ ಸೇವೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಹಣಮಂತ ಹಡಪದ, ದತ್ತಾತ್ರೇಯ ಹಡಪದ, ಶಿವಕುಮಾರ್ ಹಡಪದ, ಅಭಿಷೇಕ ಹಡಪದ, ನವೀನ ಹಡಪದ, ಆದಿತ್ಯ ಎ. ಹಡಪದ, ಆಯುಷ್ ಎ.ಹಡಪದ, ಅಭಿಷೇಕ ಸಸ್ತಪೂರ್, ಸದಾನಂದ ಹಡಪದ ಅಮೀತ ಸಸ್ತಪೂರ್ ಹಾಗೂ ಹಡಪದ ಪರಿವಾರದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ದ್ವಿತೀಯ ಪಿಯುಸಿ ಪರೀಕ್ಷೆ: ಚನ್ನಬಸವಗೆ ಶೇ 99.03 ಅಂಕ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 24 :- ತೆಲಂಗಾಣ ಬೋರ್ಡ್ ಆಫ್ ಇಂಟರ್‌ಮಿಡಿಯೇಟ್ ಎಜುಕೇಷನ್ ನಡೆಸಿದ ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ನಗರದ ಚನ್ನಬಸವ ಮಲ್ಲಿಕಾರ್ಜುನ ಮರಕಲೆ ಶೇ 99.07 ರಷ್ಟು ಅಂಕ ಗಳಿಸಿ ಅಮೋಘ ಸಾಧನೆ ಮಾಡಿದ್ದಾರೆ.

ಹೈದರಾಬಾದ್‌ನ ಮಾದಾಪುರದ ಶ್ರೀ ಚೈತನ್ಯ ಕಾಲೇಜಿನ ವಿದ್ಯಾರ್ಥಿಯಾಗಿರುವ ಚನ್ನಬಸವ ಗಣಿತ, ಭೌತವಿಜ್ಞಾನ ಹಾಗೂ ರಸಾಯನ ವಿಜ್ಞಾನದಲ್ಲಿ ಗರಿಷ್ಠ ಅಂಕ ಪಡೆದಿದ್ದಾರೆ. ಸಂಸ್ಕೃತದಲ್ಲಿ ಶೇ 98 ಹಾಗೂ ಇಂಗ್ಲಿಷ್‌ನಲ್ಲಿ ಶೇ 97 ಅಂಕ ಗಳಿಸಿದ್ದಾರೆ.

ಚನ್ನಬಸವ 1 ರಿಂದ 10ನೇ ವರೆಗೆ ಬೀದರನ ಜ್ಞಾನಸುಧಾದಲ್ಲಿ ವ್ಯಾಸಂಗ ಮಾಡಿದ್ದಾರೆ. ಅವರ ತಂದೆ ಮಲ್ಲಿಕಾರ್ಜುನ ಮರಕಲೆ ಹಿರಿಯ ಪತ್ರಕರ್ತರಾಗಿದ್ದಾರೆ.

ಸನ್ಮಾನ: ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದಿದ್ದಕ್ಕಾಗಿ ಭಾಲ್ಕಿಯಲ್ಲಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು ಶಾಲು ಹೊದಿಸಿ ಸತ್ಕರಿಸಿದರು. ಬೀದರನಲ್ಲಿ ಜೈ ಭಾರತ ಮಾತಾ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜ ಸನ್ಮಾನಿಸಿ ಪ್ರೋತ್ಸಾಹಿಸಿದರು.

ಮಹಾನಂದ ರವಿ ಪಾಟೀಲ, ಶ್ರೀಕಾಂತ, ತಾಯಿ ಸವಿತಾ, ರತ್ನಮ್ಮ ಮತ್ತಿತರರು ಇದ್ದರು.

# ವ್ಯಕ್ತಿ ಕಾಣೆ: ಪತ್ತೆಗೆ ಪೊಲೀಸರ ಮನವಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 24: ದೇವದುರ್ಗ ತಾಲೂಕಿನ ಬಸವಂತಪುರ ಗ್ರಾಮದ ಚಾಲಕನಾದ 35 ವಯೋಮಾನದ ಸಿದ್ದಪ್ಪ ತಂದೆ ಬನ್ನಪ್ಪ ಅವರು ಕಾಣೆಯಾದ ಬಗ್ಗೆ ಗಬ್ಬೂರು ಠಾಣೆಯಲ್ಲಿ ಗುನ್ನೆ ನಂ-55/2025 ಕಲಂರಡಿ ಮನುಷ್ಯ ಕಾಣೆ ಪ್ರಕರಣ ದಾಖಲಾಗಿದೆ.

ಫರ್ಯಾದಿ ನೀಡಿದ ವ್ಯಕ್ತಿಗೆ 03 ಜನ ಗಂಡುಮಕ್ಕಳಿದ್ದು, ಅದರಲ್ಲಿ ಕಾಣೆಯಾದ ಸಿದ್ದಪ್ಪ ಈತನು ಸುಮಾರು 15 ವರ್ಷಗಳ ಹಿಂದೆ ಯಾವುದೋ ಯೋಚನೆಯಲ್ಲಿ ಮನೆಬಿಟ್ಟು ಹೋಗಿದ್ದು, 15 ದಿನಗಳ ನಂತರ ರಾಯಚೂರಿನಲ್ಲಿ ಪತ್ತೆಯಾಗಿರುತ್ತಾನೆ. ನಂತರ 10 ವರ್ಷಗಳ ಹಿಂದೆ ವಿವಾಹ ಮಾಡಿದ್ದು ಇನ್ನೂ ಮಕ್ಕಳು ಆಗದೇ ಇರುವುದರಿಂದ ಅದೇ ಚಿಂತೆಯಲ್ಲಿ ಹೆಂಡ ಕುಡಿಯೋ ಚಟಕ್ಕೆ ಬಿದ್ದಿದ್ದು, ದಿನಾಂಕ 12.04.2025 ರಂದು ಮಧ್ಯಾಹ್ನ 12 ಗಂಟೆ ಸುಮಾರಿಗೆ ದೇವಸೂಗೂರಿಗೆ ಹೋಗಿ ಬರುವುದಾಗಿ ಹೇಳಿ ಮನೆಬಿಟ್ಟು ಹೋಗಿದ್ದು ಇಲ್ಲಿಯವರೆಗೆ ವಾಪಸ್ ಮನೆಗೆ ಬಂದಿರುವುದಿಲ್ಲ. ಅಲ್ಲಲ್ಲಿ ಹುಡುಕಾಡಿ ಸಂಬಂಧಿಕರ ಮನೆಗಳಿಗೆ ವಿಚಾರಿಸಿದ್ದು ಎಲ್ಲಿಯೂ ಪತ್ತೆಯಾಗಿರುವುದಿಲ್ಲ, ಈ ಹಿಂದೆಯೂ ಕೂಡ ಮನೆಬಿಟ್ಟು ಹೋಗಿ ವಾಪಸ್ ಬಂದಿದ್ದರಿಂದ ಅದರಂತೆ ಬರುವನೆಂದು ಕಾದರೂ ಸಿದ್ದಪ್ಪ ಬಂದಿಲ್ಲ ಎಂದು ಫಿರ್ಯಾದಿದಾರರು ದೂರು ದಾಖಲಿಸಿದ್ದಾರೆ. ಸಿದ್ದಪ್ಪ ಅವರು ಸದೃಢ ದೇಹ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, 5.0 ಅಡಿ ಎತ್ತರ ಇದ್ದಾರೆ. ಕನ್ನಡ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಅಂಗಿ ಮತ್ತು ಬಿಳಿ ಬಣ್ಣದ ಲುಂಗಿ ಧರಿಸಿ ಹೋಗಿರುತ್ತಾನೆ. ಈ ಭಾವಚಿತ್ರದಲ್ಲಿ ಇರುವ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಗಬ್ಬೂರು ಠಾಣೆ ನಂ-9480803860, ಸಿಪಿಐ ದೇವದುರ್ಗ- ಮೊ:9480803835 ವಿಳಾಸಕ್ಕೆ ಸಂಪರ್ಕಿಸಲು ಕೋರಲಾಗಿದೆ ಎಂದು ಪಿ.ಎಸ್.ಐ. ಗಬ್ಬೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿರಿಯ ಪತ್ರಕರ್ತ ಶೈಲೇಂದ್ರ ಕಾವಡಿ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ತಾಲೂಕಿನ ಬೆಮಳಖೇಡಾ ವೀರಶೈವ ಸಮಾಜದ ಬಸವ ಮಂಟಪದಲ್ಲಿ ಪರಿಸರವಾದಿ ಶೈಲೇಂದ್ರ ಕಾವಡಿಯವರಿಗೆ ಸಮಾಜದ ಸದಸ್ಯರಾದ ಸಿದ್ದು ಮುದ್ದಾ ಸನ್ಮಾನಿಸಿದರು. ಸಮಾಜದ ರುದ್ರಭೂಮಿಯಲ್ಲಿ ಸಸಿ ನೆಡೆಸಿಕೊಡಲು ಮನವಿ ಮಾಡಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ಬಸವ ಮಂಟಪ ಹೊಸ ಆಡಳಿತ ಮಂಡಳಿಯವರ ನೇತೃತ್ವದಲ್ಲಿ ಬಸವ ಮಂಟಪ ಆಕರ್ಷಣೆ ಆಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಅನೀಲ ಚಟ್ನಳ್ಳಿ, ರಾಜಕುಮಾರ್ ಹಾಲದೊಡ್ಡಿ, ಬಸಯ್ಯಾ ಡಿಗ್ರಿ ಮುಸ್ತರಿ ಉಪಸ್ಥಿತರಿದ್ದರು.

# 26ರಿಂದ ಫುಟ್ಬಾಲ್ ಚಾಂಪಿಯನ್ಶಿಪ್ ರಾಜ್ಯ ಮಟ್ಟದ ಸ್ಪರ್ಧೆ: ವಿ.ಎಂ ಜ್ಯೋತಿ



ಬೀದರ. ಏ. 24 : ಬುದ್ಧ ಭೂಷಣ ಸ್ಪೋರ್ಟ್ಸ್ ಅಕೆಡಮಿ ಹಾರೂರಗೇರಿಬೀದರವತಿಯಿಂದ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಬಿ.ಆರ್. ಅಂಬೇಡ್ಕರರವರ 134ನೇ ಜಯಂತೋತ್ಸವದ ಪ್ರಯುಕ್ತ ಫೂಟ್‌ಬಾಲ್ ಚಾಂಪಿಯನ್‌ಶಿಪ್ ರಾಜ್ಯ ಮಟ್ಟದ ಸ್ಪರ್ಧೆಯನ್ನು ಏ:26 ಬೆಳಿಗ್ಗೆ 7 ಗಂಟೆಯಿಂದ ಏ.28 ಸಾಯಂಕಾಲ 5 ಗಂಟೆಯ ವರೆಗೆ ಮೂರು ದಿನಗಳ ಕಾಲ ನಗರದ ನೇಹರು ಕ್ರೀಡಾಂಗಣ ಬೀದರದಲ್ಲಿ ಆಯೋಜಿಸಲಾಗಿದೆ ಎಂದು ನಿವೃತ್ತ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿ.ಎಂ ಜ್ಯೋತಿ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಇಂದಿನ ಯುವಜನರು ಮೊಬೈಲ್‌ನಲ್ಲಿರುವ ವಾಟ್ಸಾಪ್, ಫೇಸ್‌ಬುಕ್,ಟ್ವಿಟರ್,ಇನ್ಸ್ಟಾಗ್ರಾಂ, ಟೆಲಿಗ್ರಾಂ ಹಾಗೂ ಇತರೆ ವಾಟ್ಸಪ್ ಗೇಮುಗಳಿಗೆ ಮಾರು ಹೋಗಿ ದೈಹಿಕ ಚಟುವಟಿಕೆಗಳಿಂದ ವಿಮುಖರಾಗುತ್ತಿರುವರು. ಯುವಜನರಲ್ಲಿ ಕುಗ್ಗಿರುವ ದೈಹಿಕ ಸಾಮರ್ಥ್ಯವನ್ನು ಬಲಪಡಿಸಲು ಹಾಗೂ ಬೀದರ್‌ನಲ್ಲಿ ಫುಟ್ಬಾಲ್ ಕ್ರೀಡೆಯನ್ನು ಉಹೆಚ್ಚಿನ ರೀತಿಯಲ್ಲಿ ಪ್ರಚುರಪಡಿಸಲು ಈ ಪಂದ್ಯಾವಳಿ ಹಮ್ಮಿಕೊಳ್ಳಲಾಗಿದೆ. ಮೂರು ದಿನಗಳ ಕಾಲ ನಡೆಯಲಿರುವ ಈ ಪಂದ್ಯಾವಳಿಯಲ್ಲಿ ಧಾರವಾಡ ಹಾಗೂ ಕಲಬುರ್ಗಿಯಿಂದ ನಾಲ್ಕು, ಹೈದರಾಬಾದ್‌ನಿಂದ ನಾಲ್ಕು ತಂಡಗಳು, ಬೀದರ್ ನಿಂದ ಎರಡು ತಂಡಗಳು, ಪಕ್ಕದ ಮಹಾರಾಷ್ಟ್ರದ ಪರಭಣಿಯಿಂದ ಒಂದು ತಂಡ ಬರುವ ನಿರೀಕ್ಷೆಯಿದ್ದು ಈಗಾಗಲೇ 10 ತಂಡಗಳು ನೊಂದಣಿ ಮಾಡಿಕೊಂಡಿರುತ್ತವೆ. ಈ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಗಳಿಸುವ ತಂಡಕ್ಕೆ ನಗದು 25,000 ಬಹುಮಾನ, ಟ್ರೋಫಿ, ಪದಕ ಹಾಗೂ ಪ್ರಶಸ್ತಿ ಫಲಕ ನೀಡಿ ಗೌರವಿಸಲಾಗುವುದು. ದ್ವಿತೀಯ ಬಹುಮಾನವಾಗಿ ರು.15,000 ನಗದು ಬಹುಮಾನ, ಪ್ರಶಸ್ತಿ ಫಲಕ, ಟ್ರೋಫಿ, ಮೆಡಲ್‌ಗಳನ್ನು ನೀಡಿ ಗೌರವಿಸಲಾಗುವುದು. ಅದೇ ರೀತಿ ಮ್ಯಾನ್ ಆಫ್ ದಿ ಮ್ಯಾಚ್, ಬೆಸ್ಟ್ ಗೋಲ್ಡ್ ಕೀಪರ್, ಬೆಡ್ಸ್‌ಸ್ಕೋರರ್ ಇತ್ಯಾದಿ ವಯಕ್ತಿಕ ಸ್ಪರ್ಧಾಳುಗಳಿಗೂ ಪದಕ, ಪ್ರಶಸ್ತಿ ಫಲಕ ನೀಡಿ ಗೌರವಿಸಲಾಗುತ್ತಿದೆ ಎಂದರು.

ಕ್ರೀಡಾಕೂಟದ ಉದ್ಘಾಟನೆಯನ್ನು 26ರಂದು ಅರಣ್ಯ, ಪರಿಸರ, ಮತ್ತು ಜೀವಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆಯವರು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಆಗಮಿಸುತ್ತಿದ್ದಾರೆ. ವಿಶೇಷ ಆಹ್ವಾನಿತರಾಗಿ ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ಶಿವರಾಜ ಹಾಸನಕರ್ ಉಪಸ್ಥಿತರಿರುವರು.

ಆದಕಾರಣ ಈ ಕ್ರೀಡಾಕೂಟದಲ್ಲಿ ಕ್ರೀಡಾ ಆಸ್ತಕರು, ಸಮಾಜದ ಬುದ್ಧಿಜೀವಿಗಳು, ಚಿಂತಕರು, ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕ್ರೀಡಾಪಟುಗಳಿಗೆ ಹುರಿದುಂಬಿಸಿ ಕ್ರಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕೋರಿದರು. ದಲಿತ ಮುಖಂಡರಾದ ಮಾರೂತಿ ಬೌದ್ದೆ, ಅನಿಲಕುಮಾರ ಬೆಲ್ದಾರ್, ರಮೇಶ ಡಾಕುಳಗಿ ಮಾತನಾಡಿದರು. ರಾಷ್ಟ್ರ ಮಟ್ಟದ ಫುಟ್ಬಾಲ್ ಕ್ರೀಡಾಪಟು ವಸಂತ, ರಾಜ್ಯ ಮಟ್ಟದ ಫುಟ್ಬಾಲ್ ಕ್ರೀಡಾಪಟು ಶಾಮುವೆಲ್, ಮೌಲಪ್ಪ ಮಾಳಗೆ, ತಮ್ಮಣ್ಣ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.



ಬೀದರ : ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ. ರಾಜಕುಮಾರ ಅವರ ಭಾವಚಿತ್ರಕ್ಕೆ ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ ಅವರು ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಶಿವಶರಣಪ್ಪ ವಾಲಿ, ದೀಪಕ ವಾಲಿ, ಜೈರಾಜ್ ಖಂಡ್ರೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಉಗ್ರರ ದಾಳಿ; ವಿವಿಧ ಸಂಘಟನೆಗಳ ಖಂಡನೆ



ಬೀದರ. ಏ. 24 : ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ದಾಳಿ ನಡೆಸಿ, ಅಮಾಯಕರ ಕಗ್ಗೊಲೆ ನಡೆಸಿರುವ ಕೃತ್ಯವನ್ನು ಜಿಲ್ಲೆಯ ವಿವಿಧ ಸಂಘಟನೆಗಳು ಕಟುವಾಗಿ ಖಂಡಿಸಿವೆ.

ವೆಲ್‌ಫೇರ್ ಪಾರ್ಟಿ ಆಫ್ ಇಂಡಿಯಾ: ಪ್ರವಾಸಿಗರ ಮೇಲಿನ ಗುಂಡಿನ ದಾಳಿ ಅತ್ಯಂತ ಖಂಡನೀಯವಾಗಿದ್ದು, ಈ ದಾಳಿಗೆ ಕೇಂದ್ರ ಸರ್ಕಾರದ ಭದ್ರತಾ ವೈಫಲ್ಯವೇ ನೇರ ಕಾರಣ ಎಂದು ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ತಾಹೇರ್ ಹುಸೇನ್ ಆರೋಪಿಸಿದ್ದಾರೆ.

ಗುಂಡಿನ ದಾಳಿಯಲ್ಲಿ 27ಕ್ಕೂ ಅಧಿಕ ಜನರು ಮೃತಪಟ್ಟಿದ್ದಾರೆ. ಇದರಲ್ಲಿ ಕನ್ನಡಿಗರು ಸೇರಿದ್ದಾರೆ. ಇದಕ್ಕೆ ಕೇಂದ್ರ ಸರ್ಕಾರವೇ ಹೊಣೆ. ಘಟನೆಯ ಹೊಣೆ ಹೊತ್ತು ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೂಡಲೇ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದ್ದಾರೆ.

ಬ್ರಾಹ್ಮಣ ಮಹಾಸಂಘ: ಪ್ರವಾಸಿಗರ ಮೇಲಿನ ದಾಳಿ ಖಂಡನಾರ್ಹವಾಗಿದೆ. ಅಮಾಯಕ ಹಿಂದೂ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ. ಭಾರತ ಶಾಂತಿಪ್ರಿಯ ದೇಶ. ಆದರೆ, ಅದನ್ನು ದೌರ್ಬಲ್ಯ ಎಂದು ಭಾವಿಸುವ ವೈರಿ ರಾಷ್ಟ್ರಗಳಿಗೆ ತಕ್ಕ ಪಾಠ ಕಲಿಸಲು ಇದು ಸಕಾಲ ಎಂದು ಬ್ರಾಹ್ಮಣ ಮಹಾಸಂಘದ ಜಿಲ್ಲಾಧ್ಯಕ್ಷ ರಮೇಶ ಕುಲಕರ್ಣಿ ತಿಳಿಸಿದ್ದಾರೆ.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್: ಪ್ರವಾಸಿಗರ ಮೇಲಿನ ದಾಳಿ ಅತ್ಯಂತ ಪೈಶಾಚಿಕ ಕೃತ್ಯ. ಭಯೋತ್ಪಾದನೆಯನ್ನು ಬೇರು ಸಮೇತ ಕಿತ್ತು ಹಾಕಲು ಭಯೋತ್ಪಾದಕರ ತಾಣಗಳ ಮೇಲೆ ಸರ್ಜಿಕಲ್ ದಾಳಿ ನಡೆಸಬೇಕೆಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಮುಖಂಡ ರೇವಣಸಿದ್ದಪ್ಪ ಜಾಡರ್ ಆಗ್ರಹಿಸಿದ್ದಾರೆ.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ: ಉಗ್ರರು ನಡೆಸಿದ ಘೋರ ದುಷ್ಕೃತ್ಯ ಖಂಡನಾರ್ಹ. ಕೇಂದ್ರ ಸರ್ಕಾರ ದಾಳಿಯಲ್ಲಿ ಭಾಗಿಯಾದವರನ್ನು ಸುಮ್ಮನೆ ಬಿಡಬಾರದು. ಉಗ್ರರನ್ನು ಮಟ್ಟ ಹಾಕಬೇಕು. ದಾಳಿಯಲ್ಲಿ ಮೃತಪಟ್ಟ ಶಿವಮೊಗ್ಗದ ಮಂಜುನಾಥರಾವ್ ಸೇರಿ ಇಬ್ಬರ ಕುಟುಂಬಗಳಿಗೆ ತಲಾ ₹1 ಕೋಟಿ ಪರಿಹಾರ ನೀಡಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ವೆಂಕಟೇಶ್ ಕುಲಕರ್ಣಿ ಆಗ್ರಹಿಸಿದ್ದಾರೆ.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್: ಉಗ್ರರ ದಾಳಿಯನ್ನು ಕಟುವಾಗಿ ಖಂಡಿಸಿ, ಘಟನೆಯಲ್ಲಿ ಮೃತರಾದವರಿಗೆ ಪರಿಷತ್ತಿನ ಕಾರ್ಯಕರ್ತರು ನಗರದ ಹೆಣ್ಣು ಮಗು ವೃತ್ತದಲ್ಲಿ ಮೇಣದ ಬತ್ತಿ ಬೆಳಗಿಸಿ ಶ್ರದ್ಧಾಂಜಲಿ ಸಲ್ಲಿಸಿದರು.

ಕೇಂದ್ರ ಸರ್ಕಾರ ಸಾಕಷ್ಟು ಕ್ರಮ ಕೈಗೊಂಡಿದ್ದರೂ ಸಹ ಬಯೋತ್ಪಾದಕರ ಹಾವಳಿ ತಡೆಯಲು ಸಾಧ್ಯವಾಗಿಲ್ಲ. ಉಗ್ರರು, ಪ್ರತ್ಯೇಕತಾವಾದಿಗಳು ಸವಾಲೊಡ್ಡುತ್ತಿರುವುದು ಕಳವಳದ ಸಂಗತಿ. ಇನ್ನಷ್ಟು ಕಠಿಣ ಕ್ರಮ ಜರುಗಿಸಬೇಕೆಂದು ಪರಿಷತ್ತಿನ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹೇಮಂತ್ ತಿಳಿಸಿದರು.

ನಗರ ಘಟಕದ ಅಧ್ಯಕ್ಷ ಅನಿಲ ಜಾಧವ, ಕಾರ್ಯದರ್ಶಿ ಆನಂದ, ಸಹ ಕಾರ್ಯದರ್ಶಿ ಪವನ್ ಕುಂಬಾರ, ನಾಗರಾಜ, ಪವನ್ ಪಾಂಚಾಲ, ತಾಲ್ಲೂಕು ಸಂಚಾಲಕ ಮಹೇಶ ಕೋರಾ, ರಾಜ್ಯ ಕಾರ್ಯಕಾರಣಿ ಸದಸ್ಯ ಲಿಂಗದೇವ ಗುತ್ತಿ ಮತ್ತಿತರರು ಹಾಜರಿದ್ದರು.

ಪಾಕಿಸ್ತಾನದಿಂದ ಹೇಡಿ ಕೃತ್ಯ–ಖೂಬಾ: ಜಮ್ಮು ಮತ್ತು ಕಾಶ್ಮೀರದಲ್ಲಿ ಕಳೆದ 11 ವರ್ಷಗಳಿಂದ ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ. ಇದನ್ನು ಸಹಿಸದೇ ಪಾಕಿಸ್ತಾನ ಹೇಡಿ ಕೃತ್ಯ ಎಸಗಿರುವುದು ಖಂಡನಾರ್ಹ ಎಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಟೀಕಿಸಿದ್ದಾರೆ.

ಅಮಾಯಕರ ಸಾವಿಗೆ ಕಾರಣರಾದವರ ವಿರುದ್ಧ ದೇಶದ ಪ್ರಧಾನಿ ಅಗತ್ಯ ಕ್ರಮ ಕೈಗೊಳ್ಳಲಿದ್ದಾರೆ. ಈ ಘಟನೆಯಿಂದ ಹಿಂದೂಗಳು ಒಗ್ಗಟ್ಟಾಗಿರಬೇಕೆಂಬುದನ್ನು ಮನಗಾಣಬೇಕು. ಜಾತಿಗಳ ಹೆಸರಿನಲ್ಲಿ ಹೋಳಾಗಬಾರದು ಎಂದು ಮನವಿ ಮಾಡಿದ್ದಾರೆ.

# ಏ.26ರಂದು ದಾವಣಗೆರೆಯಲ್ಲಿ ಸಂವಿಧಾನ ಯಾನ: ಜಿಲ್ಲೆಯ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಓಂಪ್ರಕಾಶ ರೊಟ್ಟೆ ಕರೆ

ಮಲ್ಲಮ್ಮ ನುಡಿ ವಾರ್ತೆ



ಬೀದರ. ಏ. 24 : ಈ ತಿಂಗಳ 26ರಂದು ದಾವಣಗೆರೆ ನಗರದ ಹೈಸ್ಕೂಲ್ ಫೀಲ್ಡ್ ಬಳಿ ಇರುವ ಬೀರ್ಲಿಂಗೇಶ್ವರ ದೇವಸ್ಥಾನದ ಅವರಣದಲ್ಲಿ ಎದ್ದೇಳು ಕರ್ನಾಟಕ ಸಂಘಟನೆ ಸೇರಿದಂತೆ 100ಕ್ಕೂ ಅಧಿಕ ಸಂಘಟನೆಗಳ ಸಹಯೋಗದಲ್ಲಿ ಸಂವಿಧಾನ ಸಂರಕ್ಷರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಎದ್ದೇಳು ಕರ್ನಾಟಕ ಸಂಘಟನೆಯ ಜಿಲ್ಲಾ ಸಂಚಾಲಕ ಓಂಪ್ರಕಾಶ ರೊಟ್ಟೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಕರ್ನಾಟಕದಲ್ಲಿ 100ಕ್ಕೆ ಮೇಲ್ಪಟ್ಟು ಪ್ರಗತಿಪರ ಜನಪರ ಕಾಳಜಿ ಹೊಂದಿರುವ ಸಂಘಟನೆ ಪ್ರಮುಖರು ಚಿಂತನ–ಮಂಥನ ಮಾಡಿಕೊಂಡು ಸಂಘಟನೆಗಳ ಒಕ್ಕೂಟವೇ ಎದ್ದೇಳು ಕರ್ನಾಟಕ ಹೆಸರಿನಲ್ಲಿ ಸಂವಿಧಾನ ಸಂರಕ್ಷಣಾ ಪಡೆ ರಚಿಸಲಾಗಿದೆ. ಸಂವಿಧಾನದ ಆಶಗಳು ಪ್ರಜಾಪ್ರಭುತ್ವದ ವ್ಯವಸ್ಥೆಯನ್ನೆ ಬುಡಮೇಲು ಮಾಡಲು ಹೊರಟಿರುವ ಪ್ರಮುಖವಾದ ಎರಡು ರಾಷ್ಟ್ರೀಯ ಪಕ್ಷಗಳು ಸಂವಿಧಾನ ಬದಲಾವಣೆ ಮತ್ತು ಸಂವಿಧಾನ ಉಳಿಸುತ್ತೇವೆಂದು ಹೇಳುತ್ತಲೆ ಭಾರತದ 80% ಬಡವರಿರುವ ಈ ದೇಶದ ಯುವಕರು ರೈತರು, ಕೂಲಿಕಾರ್ಮಿಕರು, ಮಕ್ಕಳು, ಮಹಿಳೆಯರು ವೃದ್ಧರು, ಹಸನಾದ ಬದುಕಿಗೆ ಸಂವಿಧಾನ ಬದ್ಧವಾದ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗದ ದೂರಪಯೋಗ ಹಾಗೂ ಸಂವಿಧಾನ ಅಡಿಯಲ್ಲಿರುವ ಚುನಾವಣೆ ಆಯೋಗ, ಇ.ಡಿ. ಮುಂತಾದ ಸಂಸ್ಥೆಗಳನ್ನು ದೂರ್ಬಳಕೆ ಮಾಡಿಕೊಂಡು ಭ್ರಷ್ಟರ ರಕ್ಷಣೆ, ಶ್ರೀಮಂತರ ಕಂಪನಿಗಳಿಗೆ ಸರಕಾರದಿಂದ ಧನಸಹಾಯ ಮಾಡುವುದು, ಚುನಾಯಿತ ಪ್ರತಿನಿಧಿಗಳನ್ನು 100 ಕೋಟಿ ಹಣಕೊಟ್ಟು ಖರೀದಿ ಮಾಡಿ ರಾಷ್ಟ್ರಪತಿ ಭವನ ರಾಜ್ಯಪಾಲರ ಭವನ ದುರುಪಯೋಗ ಮಾಡಿಕೊಂಡು ರಾತೋರಾತ್ರಿ ಸರಕಾರಗಳನ್ನು ಉರುಳಿಸುವ ಕಾರ್ಯ ಮಾಡುತ್ತಿವೆ ಎಂದರು.

ಪ್ರಜಾಪ್ರಭುತ್ವ ಭಾರತದಲ್ಲಿ ಭಾರತೀಯರಾದ ನಾವುಗಳು ನಮ್ಮನ್ನು ನಾವೇ ಅರ್ಪಿಸಿಕೊಂಡ ಸಂವಿಧಾನವನ್ನು ಸಂರಕ್ಷಣೆ ಮಾಡಿಕೊಳ್ಳುವ ಅನಿವಾರ್ಯತೆಯ ಪರಿಸ್ಥಿತಿಗೆ ತಂದು ನಿಲ್ಲಿಸಿದ್ದಾರೆ. ಮೂರು ಧರ್ಮಗಳ ಧರ್ಮಾಂಧರು ಸಂವಿಧಾನದ ವಿರುದ್ಧವಾಗಿ ನಡೆದುಕೊಂಡು ಈ ದೇಶದ ಮುಗ್ಧ ಯುವಕರುನ್ನು ತಮ್ಮ ತಮ್ಮ ಧರ್ಮಾಂಧತೆಯ ವಿಷ ಬೀಜ ಬಿತ್ತಿ ದೇಶದ ಸಂವಿಧಾನಕ್ಕೆ ಗಂಡಾಂತರ ತಂದು ದೇಶದಲ್ಲಿ ಅಜಾಗರೂಕತೆಯ ವಾತಾವರಣ ನಿರ್ಮಿಸಿದ್ದಾರೆ. ಇದನ್ನು ತಡೆಗಟ್ಟಲಿಕ್ಕೆ ಸಂವಿಧಾನ ಸಂರಕ್ಷಣೆಗಾಗಿ ಕರ್ನಾಟಕದಲ್ಲಿ ದೇಶಪ್ರೇಮಿ ಯುವಪಡೆ ಕಟ್ಟಿಕೊಂಡು "ಸಂವಿಧಾನ ನಮ್ಮ ದೇಶದ ಹೆಮ್ಮೆ ನಮ್ಮ ದೇಶದ ಗುರುತು ನಮ್ಮ ದೇಶದ ಆತ್ಮೀಯತೆ"ಯಾಗಿದೆ. ಆ ಕಾರಣಕ್ಕಾಗಿ ಸಂವಿಧಾನ ಸಂರಕ್ಷಣೆಗಾಗಿ ಪಣತೊಡಬೇಕು. ಸಂವಿಧಾನ ಸಂರಕ್ಷಣೆಗಾಗಿ ದೇಶಪ್ರೇಮ ಯುವಕರ ಪಡೆ ಕಟ್ಟಲೇಬೇಕಾಗಿದೆ. ಮುಂದಿನ ಮೂರು ವರ್ಷಗಳಲ್ಲಿ 10 ಲಕ್ಷ ಯುವ ದೇಶಪ್ರೇಮಿಗಳ ಪಡೆಯ ಕಟ್ಟುವ ಕಾರ್ಯದಲ್ಲಿ ತೊಡಗಿ ಎದ್ದೇಳು ಕರ್ನಾಟಕ ಸಂವಿಧಾನ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಹಕ್ಕು ಮತ್ತು ಕರ್ತವ್ಯವಾಗಿದೆ ಎಂದು ತಿಳಿಸಿದರು.

ಸಂವಿಧಾನ ಸಂರಕ್ಷಣೆ ಎಂದರೆ ಶಾಂತಿ ಸೌಹಾರ್ದತೆಯನ್ನು ಕಾಪಾಡುವುದು ಪ್ರೀತಿ ಮತ್ತು ಐಕ್ಯತೆಯ ಸಂದೇಶವನ್ನು ಸಾರುವುದು, ಸತ್ಯದ ನಿಲುವು ತಿಳಿಸುವುದು, ಸಮಾನತೆಯ ಹರಿಕಾರರಾಗುವುದು, ನ್ಯಾಯದ ಪರಿಪಾಲಕರಾಗುವುದು, ದೇಶದ ಸಂವಿಧಾನದ ಸಂರಕ್ಷಣೆ ಯೋಧರಾಗುವುದು ಈ ಒಂದು ಸಂದೇಶವನ್ನು ಸಾರಲು 26 ಏಪ್ರಿಲ್ 2025ರಂದು ದಾವಣಗೇರೆಯಲ್ಲಿ 15 ಸಾವಿರ ಯುವಕರನ್ನು ಜಾಗೃತಗೊಳಿಸಲು ಮೊದಲ ಹಂತದ ಸಮಾವೇಶ ಹಮ್ಮಿಕೊಂಡಿದ್ದೇವೆ. ಆದ್ದ–ರಿಂದ ಬೀದರದಿಂದ 200 ಜನ ಯುವಕರು ಹೋಗುವ ತಯ್ಯಾರಿ ಮಾಡಿಕೊಂಡಿದ್ದೇವೆ. ಇನ್ನು ಹೆಚ್ಚಿನ ಸಂಖ್ಯೆ ಬರುವವರಿದ್ದರೆ ಬೀದರ ಜಿಲ್ಲೆ ಎದ್ದೇಳು ಕರ್ನಾಟಕ ಜಿಲ್ಲೆ ಸಂಘಟನೆ ಸಂಚಾಲಕರಾದ ಓಂಪ್ರಕಾಶ ರೊಟ್ಟೆ, ಯುವಪಡೆ ಮುಖಂಡರಾದ ಸಂದೀಪ ಮುಕುಂದೆ, ಜಗದೀಶ್ವರ ಬಿರಾದಾರ, ಜಾಗೃತಿ ಕರ್ನಾಟಕದ ಮುಖಂಡರಾದ ವಿನಯ ಮಾಳಗೆಯವರನ್ನು ಸಂಪರ್ಕಿಸಬೇಕೆಂದು ಓಂಪ್ರಕಾಶ ರೊಟ್ಟೆ ಹೇಳಿದರು.

ಎದ್ದೇಳು ಕರ್ನಾಟಕ ಸಂಘಟನೆಯ ಜಿಲ್ಲಾ ಸಂಚಾಲಕರಾದ ಮಹಮ್ಮದ್ ನಿಜಾಮುದ್ದಿನ್, ಜಗದೀಶ್ವರ ಬಿರಾದಾರ, ಸಂದೀಪ್ ಮುಕಿಂದೆ, ಮಾನವ ಬಂಧುತ್ವ ವೇದಿಕೆಯ ಜಿಲ್ಲಾಧ್ಯಕ್ಷ ಮಹೇಶ ಗೋರನಾಳಕರ್, ಪ್ರಮುಖರಾದ ಪ್ರಕಾಶ ರಾವಣ, ಕಾಳಿದಾಸ ಸುರ್ಯವಂಶಿ, ಜೈವಂತ ಸಿಂಗಾರೆ, ಬಾಲಾಜಿ ಸೂರ್ಯವಂಶಿ, ಸೈಯದ್ ಇಬ್ರಾಹಿಂ ಪತ್ರಿಕಾ ಗೋಷ್ಠಿಯಲ್ಲಿದ್ದರು.

# ಮುಂಬರುವ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು: ಶೀಲವಂತ



ಬೀದರ : ಏ.24: ಮುಂಬರುವ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರು ಹೇಳಿದರು. ಇವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವಿವಿಧ ಜಯಂತಿಗಳ ಪೂರ್ವ ಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು..ಮೇ 2 ರಂದು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ 10 ಗಂಟೆಗೆ ಭಾವಚಿತ್ರವನ್ನು ಪೂಜಿಸುವ ಮೂಲಕ ಜಯಂತಿಯನ್ನು ಆಚರಿಸಲಾಗುವುದು, ಮೇ.4 ರಂದು ಶ್ರೀ ಭಗೀರಥ ಜಯಂತಿಯನ್ನು ಬೆಳಿಗ್ಗೆ 9:30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ನಂತರ ರಥ ಮೆರವಣಿಗೆಗೆ ಮೂಲಕ ಶಿವಾಜಿ ವೃತ್ತ, ಭಗತ್ ಸಿಂಗ್ ವೃತ, ಬಸವೇಶ್ವರ ವೃತ, ಅಂಬೇಡ್ಕರ್ ವೃತ್ತ, ಜನರಲ್ ಕಾರಿಯಪ್ಪ ವೃತ್ತದಿಂದ ಪೂಜ್ಯ ಚನ್ನಬಸವ ಪಟ್ಟದೇವರು ರಂಗ ಮಂದಿರಕ್ಕೆ ತೆರಳಿ ನಂತರ ರಂಗಮಂದಿರದಲ್ಲಿ 11 ಗಂಟೆಗೆ ಮುಖ್ಯ ಕಾರ್ಯಕ್ರಮ ನಡೆಯಲಿದೆ ಹಾಗೂ ಎಲ್ಲಾ ಸರ್ಕಾರಿ ಮತ್ತು ಅರೆ ಸರ್ಕಾರಿ ಕಛೇರಿ, ಶಾಲಾ–ಕಾಲೇಜು ಭಾವಚಿತ್ರಕ್ಕೆ ಪೂಜೆ ಸಲ್ಲಿಸಬೇಕು ಮತ್ತು ಎಲ್ಲಾ ವೃತ್ತಿಗಳ ಮೇಲೆ ದೀಪಾಲಂಕಾರ ಮಾಡಲಾಗುವುದು ಹಾಗೂ ಪೋಲಿಸ್ ಇಲಾಖೆಯಿಂದ ಬಂದೋಬಸ್ತ್ ನೀಡಲಾಗುವುದು ಎಂದು ತಿಳಿಸಿದರು.

ಮೇ.10 ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ರಥ ಮೆರವಣಿಗೆ ಮೂಲಕ ಅಮಲಾಪೂರದಲ್ಲಿರುವ ಹೇಮರೆಡ್ಡಿ ಮಲ್ಲಮ್ಮ ಸಮುದಾಯ ಭವನ ತಲುಪಿ ನಂತರ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು. ಎಲ್ಲಾ ಸರ್ಕಾರಿ ಮತ್ತು ಅರೆ ಸರ್ಕಾರಿ ಕಛೇರಿ, ಶಾಲಾ–ಕಾಲೇಜುಗಳು ಭಾವಚಿತ್ರಕ್ಕೆ ಪೂಜೆ ಸಲ್ಲಿಸಬೇಕು ಎಂದು ತಿಳಿಸಿದರು. ಡಿಜೆ ಬಳಿಕೆ ಸಂಬಂಧಿಸಿದಂತೆ ಪೋಲಿಸ್ ಇಲಾಖೆಯಿಂದ ಅನುಮತಿ ಪಡೆಯಬೇಕು ಎಂದು ತಿಳಿಸಿದರು. ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಅಶೋಕ ರೆಡ್ಡಿ, ಜಗನ್ನಾಥ ತಡಪಳ್ಳಿ, ಶಂಕರ ರೆಡ್ಡಿ, ರವಿ ರೆಡ್ಡಿ, ತಾನಾಜಿ ನಗೆರ, ಗೋಪಾಲ ರೆಡ್ಡಿ, ರಾಜೇಂದ್ರ ರೆಡ್ಡಿ, ವಿಜಯಕುಮಾರ ರೆಡ್ಡಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆ



ಬೀದರ : ಏ.24: "ನಮ್ಮ ಹೋಲ ನಮ್ಮ ದಾರಿ" ಯೋಜನೆಯು ಎಲ್ಲಾ ರೈತರಿಗೆ ಅನುಕೂಲವಾಗಬೇಕು, ಸಿದ್ದ ಸಿರಿ ಎಥೇನಾಲ್ ಮತ್ತು ಪವರ್ ಚಿಂಚೋಳಿ ಸಂಸ್ಥೆಯಿಂದ ರೈತರೊಂದಿಗೆ ಒಪ್ಪಂದದ ಆಧಾರದ ಮೇಲೆ ಮೆಕ್ಕೆಜೋಳ ಬೆಳೆಯಲು ಪ್ರೋತ್ಸಾಹಿಸಿರುವುದರಿಂದ ಜಿಲ್ಲೆಯ ರೈತರು ಅದರ ಸದುಪಯೋಗಪಡೆದುಕೊಳ್ಳಬೇಕೆಂದು ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಸಿದ್ರಾಮಯ್ಯಾ ಸ್ವಾಮಿ ತಿಳಿಸಿದರು.


ಅವರು ಇಂದು ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ನಡೆದ ಜಿಲ್ಲೆಯ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೃಷಿ ಇಲಾಖೆಯಿಂದ ಸಿರಿಧಾನ್ಯ ಬೆಳೆಯುವ ರೈತರಿಗೆ ಸರ್ಕಾರದ ಸಹಾಯಧನ ಪ್ರತಿ ಹೆಕ್ಟರ್‌ಗೆ 10,000 ರೂ. ನೀಡುತ್ತಿದ್ದು, ಕೃಷಿ ಇಲಾಖೆಯಿಂದ/ತಾಲ್ಲೂಕು ಕೃಷಿಕ ಸಮಾಜದ ಘಟಕದಿಂದ ವ್ಯಾಪಕ ಪ್ರಚಾರ ಕೈಗೊಂಡು ರೈತರಿಗೆ ಸಿರಿಧಾನ್ಯ ಬೆಳೆಯುವಂತೆ ಪ್ರೋತ್ಸಾಹಿಸಬೇಕೆಂದರು.

ಹಿರಿಯ ವಿಜ್ಞಾನಿ ಕೃಷಿ ವಿಜ್ಞಾನ ಕೇಂದ್ರ ಜನವಾಡ ಸುನಿಲಕುಮಾರ ಅವರು ತೆ–ೞಗರಿ ಬೆಳೆಯಲ್ಲಿ ನೆಟೆ ರೋಗ ನಿರ್ವಹಣೆ ಕುರಿತು ಸಭೆಯಲ್ಲಿ ಚರ್ಚಿಸಿದರು, ಭವಾನಿ ಹಿರಿಯ ವಿಜ್ಞಾನಿ ಕೃಷಿ ಸಂಶೋಧನಾ ಸಂಸ್ಥೆ ಹಳದಕೇರಿ ಫಾರ್ಮ ಬೀದರರವರು ಸಿರಿಧಾನ್ಯ ಬೆಳೆಯ ಬಗ್ಗೆ ಸಭೆಗೆ ಮಾಹಿತಿ ನೀಡಿದರು, ನರಸಪ್ಪಾ ಉಪ ನಿರ್ದೇಶಕರು ಪಶು ವೈದ್ಯಕಿಯ ಇಲಾಖೆ ಬೀದರ ಅವರು ಕೃಷಿ ಇಲಾಖೆ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು, ಜಾನಮ್ಮಾ ಮೀನುಗಾರಿಗೆ ಇಲಾಖೆ ವಿವಿಧ ಇಲಾಖೆ ಯೋಜನೆಗಳ ಮಾಹಿತಿ ಸಭೆಗೆ ತಿಳಿಸಿದರು, ಮಲ್ಲಿಕಾರ್ಜುನ ಕ.ರಾ.ಸ.ಮ.ಮಂವ್ಯವಸ್ಥಾಪಕರು ರಸಗೊಬ್ಬರ ಹಾಗೂ ಬೆಂಬಲ ಬೆಲೆ ಯೋಜನೆ ಪ್ರಗತಿ ಸಭೆಗೆ ಸಲ್ಲಿಸಿದರು.

ಈ ಸಭೆಯಲ್ಲಿ ಜಿಯಾವುಲ್ಲಾ ಕೆ. ಜಂಟಿ ಕೃಷಿ ನಿರ್ದೇಶಕರು ಬೀದರ, ಜಿಲ್ಲಾ ಕೃಷಿಕ ಸಮಾಜದ ಉಪಾಧ್ಯಕ್ಷರಾದ ಉಮಕಾಂತ ವಿ., ಖಜಾಂಚಿ ಗೋವಿಂದರೆಡ್ಡಿ, ಪ್ರಧಾನ ಕಾರ್ಯದರ್ಶಿ ಸಂಗಮೇಶ ವಾಲೆ, ವಿಶ್ವನಾಥ ಪಾಟಿಲ್ ಮಾಡಗೂಳ, ರಾಜ್ಯ ಪ್ರತಿನಿಧಿ ಹಾಗೂ ಸದಸ್ಯರು ಜಿಲ್ಲಾ ಕೃಷಿಕ ಸಮಾಜ ಬೀದರ ಮತ್ತು ಇಲಾಖೆ ವಿವಿಧ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಣ್ಣ ನೀರಾವರಿ ಇಲಾಖೆಯಲ್ಲಿ ಡಾ.ಅಂಬೇಡ್ಕರ್ ಮೂರ್ತಿ ಸ್ಥಾಪಿಸಿ ಜಾನಸನ್ ಘೋಡೆ ಮನವಿ



ಬೀದರ. ಏ. 24 : ಇಲ್ಲಿಯ ಸಣ್ಣ ನೀರಾವರಿ ಇಲಾಖೆಯ ವಿಭಾಗೀಯ ಕಚೇರಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಮೂರ್ತಿ ಸ್ಥಾಪಿಸಬೇಕು ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಮನವಿ ಮಾಡಿದ್ದಾರೆ

ಬೆಂಗಳೂರಿನಲ್ಲಿ ಅವರು ಈ ಕುರಿತು ಮುಖ್ಯಮಂತ್ರಿ, ಹಾಗೂ ಸಣ್ಣ ನೀರಾವರಿ ಇಲಾಖೆ ಸಚಿವರಿಗೆ ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದ್ದಾರೆ.

ಸರ್ಕಾರದ ವಿವಿಧ ಇಲಾಖೆಗಳ ಕಚೇರಿಗಳಲ್ಲಿ ಡಾ. ಅಂಬೇಡ್ಕರ್ ಅವರ ಮೂರ್ತಿಗಳು ಇವೆ. ಸಣ್ಣ ನೀರಾವರಿ ಇಲಾಖೆ ಕಚೇರಿಯಲ್ಲಿ ಮೂರ್ತಿ ಸ್ಥಾಪಿಸಲಾಗಿಲ್ಲ. ಹೀಗಾಗಿ ಮೂರ್ತಿ ಸ್ಥಾಪನೆಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಮನವಿ ಪತ್ರ ಸಲ್ಲಿಸಿದ್ದಾರೆ.

# ಜಿಲ್ಲೆಯಲ್ಲಿ ಜಮ್ಮು ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿರುವ ಪ್ರಯಾಣಿಕರ ಮಾಹಿತಿಗೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 24–: ಕಾಶ್ಮೀರದ ಪಹಲ್‌ಗಾಮದಲ್ಲಿ ಉಗ್ರರದಾಳಿಯಿಂದಕನ್ನಡಿಗರಿಬ್ಬರು ಸಾವಿಗೀಡಾಗಿರುವುದುವಿಷಾದನೀಯ ಸಂಗತಿ ಹಿನ್ನೆಲೆ ಜಮ್ಮು ಕಾಶ್ಮೀರದ ಪ್ರವಾಸಕ್ಕೆತೆರಳಿರುವ ಕನ್ನಡಿಗರನ್ನು ರಾಜ್ಯಕ್ಕೆ ಮರಳಿತರಲು ರಾಜ್ಯ ಸರ್ಕಾರವು ಪ್ರಯತ್ನಿಸುತ್ತಿದೆ ಎಂದು ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರು ರಾಮಚಂದ್ರಪ್ಪ ಅವರು ತಿಳಿಸಿದ್ದಾರೆ.

ಕರ್ನಾಟಕದಲ್ಲಿ ಪ್ರವಾಸ ನಿರ್ವಹಿಸುತ್ತಿರುವ ಪ್ರವಾಸಿ ಕಾರ್ಯಾಚರಣೆದಾರರು (ಟೂರ್ ಆಪರೇಟರ್ ಟ್ರಾವೆಲ್ ಏಜೆಂಟ್ಸ್) ತಮ್ಮ ಮೂಲಕ ಜಮ್ಮು ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿರುವ ಪ್ರಯಾಣಿಕರ ವಿವರಗಳನ್ನು ಈ ಕೆಳಕಂಡ (ಹೆಲ್ಪ್‌ಲೈನ್) ಸಹಾಯವಾಣಿಗೆ ಕರೆ ಮಾಡಲು ಕೋರಿದೆ. ಜಮ್ಮು ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿರುವ ಪ್ರವಾಸಿಗರ ಸಂಬಂಧಿಕರು ಅಥವಾ ಪರಿಚಯಸ್ಥರು ಪ್ರವಾಸಕ್ಕೆ ತೆರಳಿರುವವರ ವಿವರಗಳನ್ನು ಈ ಕೆಳಕಂಡ ಹೆಲ್ಪ್‌ಲೈನ್ ಸಹಾಯವಾಣಿ ಕರೆ ಸಂ.080 43344334, 080 43344335, 080 43344336, 080 43344342ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯೋಗವಕಾಶಕ್ಕಾಗಿ ಏ.25ಕ್ಕೆ ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಏಪ್ರಿಲ್ 24–ಮೂರು ಖಾಸಗಿ ಸಂಸ್ಥೆಗಳು ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಏ.25ರ ಬೆಳಿಗ್ಗೆ 10 ರಿಂದ ಸಂಜೆ 2 ರವರೆಗೆ ನೇರ ಸಂದರ್ಶನ ಅಯೋಜಿಸಿವೆ. ಮೇಳವು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರುನಲ್ಲಿ ನಡೆಯಲಿದೆ. ಉದ್ಯೋಗಮೇಳದಲ್ಲಿ ಭಾಗವಹಿಸಲು ಅರ್ಹತೆ: ಎಸ್.ಎಸ್.ಎಲ್.ಸಿ, ಪಿಯುಸಿ ಹಾಗೂ ಯಾವುದೇ ಪದವಿ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ, ವಯೋಮಿತಿ: 18 ರಿಂದ 30 ವರ್ಷಗಳೊಳಗಿನ ಅಭ್ಯರ್ಥಿಗಳು ಮಾತ್ರ ಅರ್ಹರು. ಅಭ್ಯರ್ಥಿಗಳು ತಮ್ಮ ಬಯೋಡಾಟಾ, ವಿದ್ಯಾರ್ಹತೆಯ ಜೆರಾಕ್ಸ್ ಪ್ರತಿಗಳು, ಆಧಾರ್ ಕಾರ್ಡ್ ಮತ್ತು ಭಾವಚಿತ್ರಗಳೊಂದಿಗೆ ಹಾಜರಾಗಬೇಕು. ನೇರಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿಲ್ಲ. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಕಾರ್ಯಕ್ರಮದಲ್ಲಿ ಹಾಜರಾಗಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ, ಕಚೇರಿ ಸಮಯದಲ್ಲಿ 08532–231684, 9008211750, 8095125775 ಈ ದೂರವಾಣಿ ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ರಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 24, : ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು 2025ರ ಏಪ್ರಿಲ್ 5 ರಂದು ನಡೆದ ಸಭೆಯಲ್ಲಿ ಚರ್ಚಿಸಿದಂತೆ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ರಚಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಆದೇಶವನ್ನು ಹೊರಡಿಸಿದ್ದಾರೆ.

ಸರ್ಕಾರದ ಆದೇಶದನ್ವಯ ಪರಿಶಿಷ್ಟ ಜಾತಿ ಒಳ ಮೀಸಲಾತಿ ಕುರಿತಂತೆ ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ ದಾಸ್ ಅವರ ಏಕ ಸದಸ್ಯ ವಿಚರಣಾ ಆಯೋಗವನ್ನು ರಚಿಸಲಾಗಿದೆ. ಈ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಲು ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿದ್ದು, ಅದರಂತೆ ಕ್ರಮವಹಿಸಲು 2025ರ ಏಪ್ರಿಲ್ 5 ರಂದು ನ್ಯಾಯಮೂರ್ತಿ ಹೆಚ್.ಎಸ್.ನಾಗಮೋಹನ ದಾಸ್ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಹಾಗೂ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕ್ ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ರಚಿಸಲು ಆದೇಶಿಸಿದೆ. ಯಾದಗಿರಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಿ ಆದೇಶಿಸಿದೆ.

ಜಿಲ್ಲಾ ಮಟ್ಟದ ಸಮನ್ವಯ ಸಮಿತಿ : ಯಾದಗಿರಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಅಧ್ಯಕ್ಷರು, ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಉಪಾಧ್ಯಕ್ಷರು, ಸದಸ್ಯರುಗಳಾದ ಯಾದಗಿರಿ ಅಪರ ಜಿಲ್ಲಾಧಿಕಾರಿಗಳು, ಯಾದಗಿರಿ ನಗರಸಭೆ ಪೌರಾಯುಕ್ತರು, ಯಾದಗಿರಿ ಉಪ ವಿಭಾಗಾಧಿಕಾರಿಗಳು, ಯಾದಗಿರಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನಿರ್ದೇಶಕರು, ಯಾದಗಿರಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು, ಯಾದಗಿರಿ ಯೋಜನಾ ಇಲಾಖೆ ಜಿಲ್ಲಾ ಸಾಂಖ್ಯಿತ ಅಧಿಕಾರಿಗಳು, ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು, ಯಾದಗಿರಿ ಡಿಯುಡಿಸಿ ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರು, ಸದಸ್ಯರುಗಳು ಮತ್ತು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ರಚಿಸಿದೆ.

ಜಿಲ್ಲಾ ಮಟ್ಟದ ಸಮನ್ವಯ ಸಮಿತಿಗಳು ಪರಿಶಿಷ್ಟ ಜಾತಿಯ ಕುಟುಂಬಗಳ ಸಮೀಕ್ಷೆಯನ್ನು ಸುಸೂತ್ರವಾಗಿ ಯಾವುದೇ ಲೋಪವಿಲ್ಲದೆ ಯಶಸ್ವಿಯಾಗಿ ನಡೆಸಲು ಮೇಲುಸ್ತುವಾರಿ ಜವಬ್ದಾರಿಯನ್ನು ವಹಿಸಿಕೊಂಡು ನಿಗದಿತ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೆಡ್ಡಿ ಯುವಜನ ಸಂಘದ ನೂತನ ಅಧ್ಯಕ್ಷರಾಗಿ ಉಮೇಶ್ ಸಿಂಗನಾಳ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಗಂಗಾವತಿ ತಾಲೂಕಿನ ರೆಡ್ಡಿ ಸಮಾಜದ ಯುವಜನ ಸಂಘದ ನೂತನ ಅಧ್ಯಕ್ಷರಾಗಿ ಉಮೇಶ್ ಸಿಂಗನಾಳ ಆಯ್ಕೆಗೊಂಡರು

ಗುರುವಾರದಂದು ಖಾಸಗಿ ಹೋಟೆಲಿನ ಸಭಾಂಗಣ ಒಂದರಲ್ಲಿ ಜರುಗಿದ ರೆಡ್ಡಿ ಯುವಜನ ಸಂಘದ ಪದಾಧಿಕಾರಿಗಳ ಆಯ್ಕೆಯ ಸಂದರ್ಭದಲ್ಲಿ ರೆಡ್ಡಿ ಸಮಾಜದ ಹಿರಿಯರಾದ ಜಗದೀಶಪ್ಪ ಮತ್ತಿತರ ಮುಖಂಡರ ನೇತೃತ್ವದಲ್ಲಿ ಪದಾಧಿಕಾರಿಗಳನ್ನು ನೇಮಕ ಮಾಡಿ ಆಯ್ಕೆ ಮಾಡಲಾಯಿತು.

ರೆಡ್ಡಿ ಯುವ ಜನ ಸಂಘದ ಅಧ್ಯಕ್ಷರಾಗಿ ಉಪಾಧ್ಯಕ್ಷರಾಗಿ ಚನ್ನಬಸವ ಜೆಕಿನ್, ಚೈತನ್ಯ ರೆಡ್ಡಿ, ಪ್ರಧಾನ ಕಾರ್ಯದರ್ಶಿಯಾಗಿ ಬಸವಂತ ಪಾಟೀಲ್ ವಡ್ಡರಹಟ್ಟಿ, ಸಹಕಾರ್ಯದರ್ಶಿಯಾಗಿ, ಭೀಮೇಶ್ ರೆಡ್ಡಿ, ಜೀವನ ಕುಮಾರ್ ಪಾಟೀಲ, ಲಿಂಗನಗೌಡ ಹೇರೂರು ಸಂಘಟನಾ ಕಾರ್ಯದರ್ಶಿಯಾಗಿ ಮಹಾಂತೇಶ್ ಅಮರಣ್ಣವರ್, ಸಂಚಾಲಕರಾಗಿ ಸುನಿಲ್ ಕುಮಾರ್ ಹೊಸ್ಕೇರ, ಹಾಗೂ ಮಲ್ಲಪ್ಪ ಕಳಮಳ್ಳಿ. ಬಸಾಪಟ್ಟಣ ಇವರನ್ನು, ಆಯ್ಕೆ ಮಾಡಲಾಯಿತು. ರೆಡ್ಡಿ ಯುವಜನ ಸಂಘ ಸಮಾಜದ ಸರ್ವತೋಮುಖ ಅಭಿವೃದ್ಧಿಗಾಗಿ ಸಂಘಟನೆಯ ಮೂಲಕ ಒಗ್ಗಡಿಸುವ ಕಾರ್ಯವಾಗ ಬೇಕೆಂದು ಸಮಾಜದ ಮುಖಂಡರು ತಿಳಿಸಿದರು.

ಈ ಸಂದರ್ಭದಲ್ಲಿ ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷರಾದ ಜಗದೀಶಪ್ಪ ಸಿಂಗನಾಳ, ಗಂಗಾವತಿ ತಾಲೂಕ ಅಧ್ಯಕ್ಷರಾದ ಆರ್‌ಪಿ ರೆಡ್ಡಿ ವಕೀಲರು, ಕಾರಟಗಿ ತಾಲೂಕ ಅಧ್ಯಕ್ಷರಾದ ರುದ್ರಗೌಡ ನಂದಿಹಾಳ್, ರೆಡ್ಡಿ ಸಮಾಜದ ಮುಖಂಡರುಗಳಾದ ಚನ್ನಪ್ಪ ಮಳಗಿ ವಕೀಲರು, ಅಮರೇಶ್ ಗೋನಾಳ್ ಹೇರೂರು. ಮನೋಹರ ಗೌಡ, ರಾಜೇಶ್ ರೆಡ್ಡಿ, ವಿರುಪಾಕ್ಷಿ ರೆಡ್ಡಿ ವಕೀಲರು, ಸುರೇಶ್ ಸಿಂಗನಾಳ ಸೇರಿದಂತೆ ಇತರರು ಇದ್ದರು.

# ಆರೋಗ್ಯಕರ ಜೀವನಕ್ಕಾಗಿ ಸಮತೋಲನ ಆಹಾರ ಸೇವಿಸಿ:ಎಡಿ ಹಣಮಂತರಾಯ ಕೌಟಗೆ





:"ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಯಲ್ಲಿ ಕೂಲಿಕಾರರು ಕೆಲಸ ಮಾಡುತ್ತಿರುವುದು ಸಂತಸದ ವಿಷಯ ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ಅದರಲ್ಲೂ ಮಹಿಳಾ ಕೂಲಿಕಾರರು ನರೇಗಾ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು."

**–ಮಾಣಿಕರಾವ ಪಾಟೀಲ, ಇ.ಒ. ತಾ.ಪಂ. ಕಮಲನಗರ.///**

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಮನುಷ್ಯ ಆರೋಗ್ಯವಾಗಿದ್ದರೆ ಮಾತ್ರ ಜೀವನ ಸುಂದರವಾಗಿರಲು ಸಾಧ್ಯ. ಹೀಗಾಗಿ ನರೇಗಾ ಕಾರ್ಮಿಕರು ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕು ಎಂದು ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ಹಣಮಂತರಾಯ ಕೌಟಗೆ ಹೇಳಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಆರೋಗ್ಯ ಇಲಾಖೆ ಮತ್ತು ಐಇಸಿ ಸಂಯುಕ್ತಾಶ್ರಯದಲ್ಲಿ ತೋರಣಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ದುಡಿಯೋಣ ಬಾ, ಸ್ತ್ರೀ ಚೇತನ ಅಭಿಯಾನ ಮತ್ತು ನರೇಗಾ ಕೂಲಿ ಕಾರ್ಮಿಕರಿಗೆ ಹಮ್ಮಿಕೊಂಡ ಆರೋಗ್ಯ ತಪಾಸಣೆ ಕಾರ್ಯಕ್ರಮದ ಉದ್ಘಾಟಿಸಿ ಅವರು ಮಾತನಾಡಿದರು,

ಗ್ರಾಮೀಣ ಭಾಗದ ಜನರು ಗೂಳೆ ಹೋಗಬಾರದು ಮತ್ತು ಮನರೇಗಾ ಕಾಮಗಾರಿಯ ಸದುಪಯೋಗವನ್ನು ಹೆಚ್ಚಿನ ಸಂಖ್ಯೆಯಲ್ಲಿ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಿ ವೃದ್ಧರಿಗೆ, ವಿಶೇಷ ಚೇತನರಿಗೆ, ಗರ್ಭಿಣಿ ಮಹಿಳೆಯರಿಗೆ ನರೇಗಾ ಕೆಲಸದಲ್ಲಿ ರಿಯಾಯತಿ ಇದೆ. ಜೊತೆಗೆ ವೈಯಕ್ತಿಕ ಕಾಮಗಾರಿಗಳ ಬಗ್ಗೆ ವಿವರಿಸಿದರು.

ಇದೀಗ ಕೂಲಿ ಮೊತ್ತ 370 ರೂ. ಆಗಿದ್ದು ಕೂಲಿಕಾರರಿಗೆ ಅನುಕೂಲವಾಗಿದೆ ಇಂತಹ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಿ ಜೊತೆಗೆ ದೇಹದಲ್ಲಿ ಹಿಮೋಗ್ಲೋಬಿನ್ ಕಡಿಮೆಯಾದರೆ ಆರೋಗ್ಯದಲ್ಲಿ ಸಮಸ್ಯೆ ಕಂಡು ಬರುತ್ತದೆ. ಆದ್ದರಿಂದ ತಮ್ಮ ದೈನಂದಿನ ಆಹಾರದಲ್ಲಿ ಕಬ್ಬಿಣಾಂಶ ಮತ್ತು ವಿಟಮಿನ್ಸ್ ಅಂಶ ಹೇರಳವಾಗಿರುವ ಆಹಾರ ಸೇವಿಸಿ ಆರೋಗ್ಯವಾಗಿರಿ ಎಂದರು.

ಸಿಎಚ್‌ಓ ವಿನೋದ ಮಾತನಾಡಿ ಇತ್ತೀಚಿಗೆ ಸಮಾಜದಲ್ಲಿ ಜನರು ಸಾಮಾನ್ಯವಾಗಿ ಎದುರಿಸುತ್ತಿರುವುದು ಮೇಧುಮೇಹ ಮತ್ತು ರಕ್ತದೊತ್ತಡ ಸಮಸ್ಯೆಗಳು ಇದಕ್ಕೆಲ್ಲಾ ಕಾರಣ ಸರಿಯಾದ ಆಹಾರ ಪದ್ಧತಿ ಮತ್ತು ಆರೋಗ್ಯಕರ ಜೀವನ ಶೈಲಿ ಅನುಸರಿಸದೇ ಇರುವುದು ಈ ಕಾಯಿಲೆಗಳು ಸೈಲಂಟಾಗೆ ದೇಹವನ್ನು ಸೇರಿಕೊಳ್ಳುತ್ತವೆ ಆದ್ದರಿಂದ ಪ್ರತಿ ತಿಂಗಳು ಬಿಪಿ, ಶುಗರ್ ತಪಾಸಣೆ ಮಾಡಿಕೊಳ್ಳಿ ಎಂದರು.

ಕಾಮಗಾರಿ ಸ್ಥಳದಲ್ಲಿಯೇ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದೆ. ಎಲ್ಲರು ಬಿಪಿ, ಶುಗರ, ರಕ್ತ ತಪಾಸಣೆ ಮಾಡಿಕೊಳ್ಳಿ ಎಂದರು.

ತಾಂತ್ರಿಕ ಸಹಾಯಕರಾದ ವಿನೋದ ಮಾತನಾಡಿ, ನರೇಗಾ ಯೋಜನೆಯಡಿ ಕೂಲಿಕಾರರು ಅಳತೆಗೆ ಅನುಗುಣವಾಗಿ ಕಾಮಗಾರಿಯನ್ನು ನಿರ್ವಹಿಸಿ, ಸಮಾನ ಕೆಲಸಕ್ಕೆ ಸಮಾನ ವೇತನವನ್ನು ಪಡೆದುಕೊಳ್ಳಿ ಕೂಲಿ ಮೊತ್ತ 370 ರೂ.ಗೆ ಹೆಚ್ಚಳವಾಗಿದ್ದು ಗಂಡು ಹೆಣ್ಣಿಗೆ ಸಮಾನ ಕೂಲಿಯನ್ನು ಉದ್ಯೋಗ ಖಾತರಿ ಯೋಜನೆಯಲ್ಲಿ ಕೊಡಲಾಗುತ್ತದೆ ಇಂತಹ ಅವಕಾಶಗಳನ್ನು ಬಳಸಿಕೊಂಡು ಗುಳೆ ಹೋಗದೇ ನಿಮ್ಮ ಊರಲ್ಲೇ, ಕುಟುಂಬದ ಜೊತೆ ಇದ್ದು ನೆಮ್ಮದಿಯ ಜೀವನ ನಡೆಸಿ ಎಂದರು. ಕೂಲಿಕಾರರಿಗೆ ಜಾಬ್ ಕಾರ್ಡ ವಿತರಿಸಿ ಔಖಖ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷರಾದ ಸುನೀಲ ಶಿಗರೆ, ಸದಸ್ಯರಾದ ಮಾಧವ ಭೋಸಲೆ, ಟಿಸಿ ಅಮರ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಟಿಎ ಶೇಖರ, ಗ್ರಾ.ಪಂ. ಸಿಬ್ಬಂದಿಗಳು ಸೇರಿದಂತೆ ಮತ್ತಿತರರು ಇದ್ದರು. ಪಂಚಾಯತ ಅಭಿವೃದ್ಧಿ ಅಧಿಕಾರಿ ಮಲ್ಲೇಶ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಹಾಗೂ ಕಾರ್ಯಕ್ರಮ ನಿರೂಪಿಸಿದರು.

## ಪರಿಸರ ಚನ್ನಾಗಿದ್ದರೆ ಜೀವಿಗಳೆಲ್ಲ ಉತ್ತಮವಾಗಿ ಜೀವಿಸಬಹುದು:ವಿಜಯಕುಮಾರ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು:ಪರಿಸರ ಚನ್ನಾಗಿದ್ದರೆ ಜೀವಿಗಳೆಲ್ಲ ಉತ್ತಮವಾಗಿ ಜೀವಿಸಬಹುದು ಆದರೆ ಪರಿಸರ ನಾಶವಾದರೆ ಜೀವಸಂಕುಲಕ್ಕೆ ಕುತ್ತು ಎಂದು ತಾಲೂಕಾ ಅರಣ್ಯ ಅಧಿಕಾರಿ ವಿಜಯಕುಮಾರ ಹೇಳಿದರು

ಅವರು ಪುರಸಭೆ ವ್ಯಾಪ್ತಿಯ ಕರಡಕಲ್ ಗ್ರಾಮದಲ್ಲಿ ಎಸ್ ಎಂ ಎಲ್ ಜಿ ಮಹಾವಿದ್ಯಾಲಯ ಏರ್ಪಡಿಸಿದ ರಾಷ್ಟ್ರೀಯ ಸೇವಾ ವಿಶೇಷ ಶಿಬಿರ ಆರನೆ ದಿನದ ಕಾರ್ಯಕ್ರಮದಲ್ಲಿ ಪರಿಸರ ಮತ್ತು ಜೀವನ ಕುರಿತು ಉಪನ್ಯಾಸ ನೀಡಿದ ಅವರು ಗಿಡಮರ ಪಕ್ಷಿ ಪ್ರಾಣಿ ಸಂಕುಲ ಸೇರಿದಂತೆ ಏನೆಲ್ಲ ಜೀವಿಗಳು ಪರಿಸರ ಚನ್ನಾಗಿದ್ದರೆ ಮಾತ್ರ ಜೀವಿಸಬಲ್ಲವು ಇಲ್ಲವಾದರೆ ಜೀವಿಗಳಿಗೆ ಕುತ್ತು ಖಂಡಿತ ಬರುತ್ತದೆ ರಾಯಚೂರು ಜಿಲ್ಲೆಯಲ್ಲಿ ಅರಣ್ಯ ಕೇವಲ 5% ರಷ್ಟು ಮಾತ್ರ ಇದೆ ಇಲ್ಲಿಯ ಪಕ್ಷಿ ಸಂಕುಲವು ಅಪಾಯದಲ್ಲಿದೆ ಪ್ರಾಣಿಗಳ ಬಗೆಗೂ ಅಧ್ಯಯನ ಮಾಡಲಾಗಿದ್ದು ಹಲವು ಅಳಿವಿನ ಅಂಚಿನಲ್ಲಿವೆ ಅದಕ್ಕಾಗಿ ನಾವು ಪರಿಸರ ಹಾಗೂ ತಾಯಿ ಈ ಎರಡನ್ನು ಬಹಳ ಕಾಳಜಿಪೂರ್ವಕವಾಗಿ ಕಾಣಬೇಕಾಗಿದೆ

ಕೊರೊನಾ ಸಂದರ್ಭದಲ್ಲಿ ಆಮ್ಲಜನಕವನ್ನು ಹಣಕೊಟ್ಟು ಪಡೆಯಬೇಕಾದ ಸಂದರ್ಭವಿತ್ತು ಪರಿಸರ ನಮಗೆ ಉಚಿತವಾಗಿಯೆ ಉತ್ತಮ ಗಾಳಿ ನೀಡುತ್ತದೆ ಆದರೆ ಅದನ್ನು ನಾವು ಅರಿಯದೆ ಅರಣ್ಯವನ್ನು ತಿಳಿದು ತಿಳಿದು ನಾಶ ಮಾಡುತ್ತಿರುವುದು ದುರಂತವಾಗಿದ್ದು ಪರಿಸರ ಹಾನಿ ಮಾಡಿದರೆ ಅಪಾಯ ನಮಗೆ ಕಟ್ಟಿಟ್ಟಬುತ್ತಿ ಅದಕ್ಕಾಗಿ ಪರಿಸರವನ್ನು ಉಳಿಸಿಬೆಳೆಸುವ ಪಣತೊಡೋಣ ಎಂದು ಹೇಳಿದರು

ನಂತರ ಮುಖ್ಯ ಅತಿಥಿಗಳಾಗಿ ಆಗಮಿಸಿದ ಹಿರಿಯ ಪತ್ರಕರ್ತ ಲಕ್ಷ್ಮಣ ಬಾರಿಕೇರ್ ಮಾತನಾಡುತ್ತಾ ಶಿಕ್ಷಣ ಕಲಿಕೆ ಭರಾಟೆಯಲ್ಲಿ ಮಕ್ಕಳಿಗೆ ಆಟ ಆಡಲು ಬಿಡುವಿಲ್ಲದಂತಾಗಿದ್ದು ದೈಹಿಕ ಶ್ರಮವಿಲ್ಲದೆ ಆರೋಗ್ಯದ ತೊಂದರೆ ಪಡುವಂತಾಗಿದೆ ಶಿಕ್ಷಣದ ಜೊತೆಗೆ ನಮ್ಮ ನೆಲದ ಹಿರಿಮೆ ಗರಿಮೆಗಳ ಬಗೆಗೂ ಮಾಹಿತಿ ವಿದ್ಯಾರ್ಥಿಗಳಿಗೆ ಅಗತ್ಯವಾಗಿದೆ ಹಾಗೆ ಪರೀಕ್ಷೆಯಲ್ಲಿ ವಿಫಲರಾದಾಗ ಜೀವ ಕಳೆದುಕೊಳ್ಳುವಂತ ದುಸ್ಸಾಹಸಕ್ಕೆ ಕೈಹಾಕಬಾರದು ಯಾಕೆಂದರೆ ಜೀವನದಲ್ಲಿ ಪರೀಕ್ಷೆ ಒಂದೆ ಕೊನೆ ಅಲ್ಲ ಸಾಕಷ್ಟು ಆಯಾಮಗಳಿಗೆ ಅವುಗಳ ಮೂಲಕ ಜೀವನ ರೂಪಿಸಿಕೊಳ್ಳಬಹುದಾಗಿದೆ ಅದರ ಜೊತೆಗೆ ದಹಿಕ ಶ್ರಮದ ಕೆಲಸಕಾರ್ಯಗಳನ್ನು ಮಾಡುತ್ತಾ ಸದೃಢದೇಹ ಬೆಳೆಸಿಕೊಳ್ಳಬೇಕು ಆರೊಗ್ಯ ಕಾಪಾಡಿಕೊಂಡು ಸುಂದರ ಜೀವನ ರೂಪಿಸಿಕೊಳ್ಳಬೇಕು ಸಮಾಜ ಪರಿಸರ ಮತ್ತು ಮಾನವನ ಬಂಧುತ್ವ ಜೊತೆಯಾಗಸಾಗಬೇಕು ಎನ್ನುವುದನ್ನು ಇಂತಹ ಶಿಬಿರಗಳು ಪಾಠ ಕಲಿಸುತ್ತವೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ದೊಡ್ಡನಗೌಡ ಪಾಟೀಲ್ ಮಾತನಾಡುತ್ತಾ ಜೀವನದಲ್ಲಿ ಸೇವಾ ಮನೋಭಾವ ಬಹಳ ಮುಖ್ಯವಾಗಿದ್ದು ಅದನ್ನು ರೂಢೀಸಿಕೊಂಡು ಮುನ್ನೆಡೆದಾಗ ಜೀವನ ಸಾರ್ಥಕ ಎಂದರು

ಈಸಂದರ್ಭದಲ್ಲಿ ಉಪನ್ಯಾಸಕರಾದ ಚಂದ್ರಶೇಖರ ರಾಠೋಡ, ಶಾಂತಾ ನೆಲೋಗಿ, ಮುಖಂಡರಾದ ನಾಗರಾಜ ತಳಿಗೇರಿ, ಎಂ,ಡಿ ಅನೀಫ್ ಸಾಬ, ಸೇರಿದಂತೆ ಇದ್ದರು ನಂತರ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಪ್ರತಿಭಾವಂತ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 6ನೇ ತರಗತಿ ವಿದ್ಯಾಭ್ಯಾಸ ಮಾಡಲು ಪ್ರವೇಶಕ್ಕೆ ಅರ್ಜಿ ಆಹ್ವಾನ

ಯಾದಗಿರಿ : ಏಪ್ರಿಲ್ 24–: 2025–26ನೇ ಸಾಲಿನ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರತಿಭಾವಂತ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 6ನೇ ತರಗತಿ ವಿದ್ಯಾಭ್ಯಾಸ ಮಾಡಲು ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಸಿದ್ದಣ್ಣ ಅಣಬಿ ಅವರು ತಿಳಿಸಿದ್ದಾರೆ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು 6ನೇ ತರಗತಿಗಾಗಿ ದಾಖಲಾತಿ ಮಾಡಿಕೊಂಡು ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಜಿಲ್ಲೆಯಲ್ಲಿರುವ ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ಅರ್ಜಿ ಆಹ್ವಾನಿಸಿದೆ. ಅರ್ಹ ವಿದ್ಯಾರ್ಥಿಗಳು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯಿಂದ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ತಾಲ್ಲೂಕ ಮಟ್ಟದ ಕಛೇರಿಗಳಲ್ಲಿ 2025ರ ಮೇ 3 ರಂದು ಸಂಜೆ 5 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕು. 2025ರ ಮೇ 9 ರಂದು ಅರ್ಹತಾ ಪ್ರವೇಶ ಪರೀಕ್ಷೆ ಡಯಟ್ ಮೂಲಕ ನಡೆಯಲಿದೆ. 2025ರ ಮೇ 13 ರಂದು ಫಲಿತಾಂಶ ಪ್ರಕಟ ಹಾಗೂ 2025ರ ಮೇ 17 ರಂದು ಅರ್ಹ ವಿದ್ಯಾರ್ಥಿಗಳನ್ನು ಕೌನ್ಸಲಿಂಗ್ ಮೂಲಕ ಆಯ್ಕೆ ಮಾಡಲಾಗುವುದು. 2025ರ ಮೇ 31 ರಂದು ಆಯ್ಕೆಯಾದ ಶಾಲೆಗೆ ದಾಖಲಾತಿ ಸಲ್ಲಿಸಬೇಕು. ಅಪೂರ್ಣಗೊಂಡ ಹಾಗೂ ಅವಧಿ ಮೀರಿದ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಷರತ್ತುಗಳು : 2025–26ನೇ ಸಾಲಿನ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಉಚಿತ ಅರ್ಹತಾ ಪರೀಕ್ಷಾ ಮೂಲಕ ಆಯ್ಕೆ ಮಾಡಲಾಗುವುದು. 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಗೊಂಡ ವಿದ್ಯಾರ್ಥಿಗಳನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ದಾಖಲು ಮಾಡಲಾಗುವುದು. 6ನೇ ತರಗತಿಗೆ ಮಾತ್ರ ಜಿಲ್ಲೆಗೆ ನಿಗದಿಪಡಿಸಿದ ಗುರಿಗಳಿಗನುಗುಣವಾಗಿ ಪ್ರವೇಶಾವಕಾಶವನ್ನು ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರಿಶಿಷ್ಟ ವರ್ಗಕ್ಕೆ ಸೇರಿದವರಾಗಿದ್ದು, ಕುಟುಂಬದ ವಾರ್ಷಿಕ ಆದಾಯ 2 ಲಕ್ಷ ರೂ.ಗಳ ಒಳಗಿರಬೇಕು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ದೃಢೀಕೃತ ಅಂಕಪಟ್ಟಿಯನ್ನು ಅರ್ಜಿ ಜೊತೆ ಕಡ್ಡಾಯವಾಗಿ ಸಲ್ಲಿಸಬೇಕು. ವಿದ್ಯಾರ್ಥಿಗಳ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರದಿಂದ ಪ್ರತಿಷ್ಠಿತ ಶಾಲೆಗಳಿಗೆ ಒದಗಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ ಏಪ್ರಿಲ್.24: 2025–26ನೇ ಸಾಲಿಗೆ ಜಿಲ್ಲೆಯಲ್ಲಿನ ಪ್ರತಿಷ್ಠಿತ ಶಾಲೆಯ (ಕನ್ನಡ ಮಾಧ್ಯಮ) ವಸತಿ ಶಾಲೆಯಲ್ಲಿ ಪರಿಶಿಷ್ಟ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ https://swdservices.karnataka.gov.in/EducationPrestigious/authentication/login?redirectUrl=%2Fprofile ಮೂಲಕ ಆನ್‌ಲೈನ್ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಬೀದರ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹತೆಗಳು: ವಿದ್ಯಾರ್ಥಿಗಳು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು. ವಿದ್ಯಾರ್ಥಿ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 2.50 ಲಕ್ಷಗಳೊಳಗಿರಬೇಕು. ಬಡತನ ರೇಖೆಗಿಂತ ಕೆಳಗಿನ ಮಟ್ಟದ ಹಾಗೂ ಈ ಯೋಜನೆಯ ಸೌಲಭ್ಯವನ್ನು ಪಡೆಯಲು ವಿಫಲರಾಗಿರುವ ಅತಿ ಹಿಂದುಳಿದ ವರ್ಗದವರಿಗೆ ಈ ಸೌಲಭ್ಯವನ್ನು ನೀಡಲು ಉದ್ದೇಶಿಸಲಾಗಿರುತ್ತದೆ. ಪೌರ ಕಾರ್ಮಿಕರ ಮಕ್ಕಳು. ಸಫಾಯಿ ಕರ್ಮಚಾರಿಗಳ ಮಕ್ಕಳು. ಸ್ಮಶಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರ ಮಕ್ಕಳು. ದೇವದಾಸಿ ರವರ ಮಕ್ಕಳು, ಅಂಗವಿಕಲತೆಯನ್ನು ಹೊಂದಿರುವವರು. ಕೋವೀಡ್ ಮುಂತಾದ ಪ್ರಕೃತಿ ವಿಕೋಪದಿಂದ ತಂದೆ ತಾಯಿಯನ್ನು ಕಳೆದುಕೊಂಡ ಮಕ್ಕಳು. ಏಕ ಪೋಷಕ ಮಕ್ಕಳು. ಯೋಜನಾ ನಿರಾಶ್ರಿತರ ಮಕ್ಕಳು. ಕೊಳಗೇರಿಗಳಲ್ಲಿ ವಾಸಿಸುತ್ತಿರುವವರ ಮಕ್ಕಳು.

ಸಾಲ ಬಾಧೆಯಿಂದ ಆತ್ಮಹತ್ಯೆಗೆ ಗುರಿಯಾದವರ ಮಕ್ಕಳು. ದೌರ್ಜನ್ಯದಲ್ಲಿ ನೊಂದವರ ಮಕ್ಕಳು. ಮಾಜಿ ಸೈನಿಕರ ಮಕ್ಕಳು. ಕೃಷಿ ಕಾರ್ಮಿಕರ ಮಕ್ಕಳು. ಜೀತ ವಿಮುಕ್ತ ಮಕ್ಕಳು. ಪ್ರಮುಖವಾಗಿ ಈ ಮೇಲಿನ ಹಿಂದುಳಿದ ವರ್ಗದವರಿಗೆ ಹಾಗೂ 5ನೇ ತರಗತಿಯಲ್ಲಿ ತೇರ್ಗಡೆಯಾಗಿ ಶೇಕಡಾ 60% ಕ್ಕಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರಮುಖ್ಯತೆ ನೀಡಲಾಗುವುದು.

ಸದರಿ ವಿದ್ಯಾರ್ಥಿಗಳು ಪ್ರತಿಷ್ಠಿತ ಶಾಲೆಗಳ ಆಯ್ಕೆ ಕೋರಿ ಮಾದ್ಯಮಗಳನ್ನು ಕಡ್ಡಾಯವಾಗಿ ಸ್ಪಷ್ಟವಾಗಿ ಅರ್ಜಿಗಳಲ್ಲಿ ನಮೂದಿಸತಕ್ಕದ್ದು. ಒಂದು ಕುಟುಂಬದಲ್ಲಿ ಇಬ್ಬರಿಗೆ ಒಬ್ಬ ಬಾಲಕ ಮತ್ತು ಒಬ್ಬ ಬಾಲಕಿ, ಬಾಲಕ ಇಲ್ಲದಿದ್ದಲ್ಲಿ ಇಬ್ಬರು ಬಾಲಕಿಯರಿಗೂ ಅಥವಾ ಬಾಲಕಿ ಇಲ್ಲದಿದ್ದಲ್ಲಿ ಇಬ್ಬರು ಬಾಲಕರಿಗೆ ಪ್ರವೇಶಾವಕಾಶ ಕಲ್ಪಿಸತಕ್ಕದ್ದು. ಪ್ರವೇಶ ಕೋರಿ ಬರುವ ಅರ್ಜಿಗಳಲ್ಲಿ ಶೇಕಡಾ 50% ರಷ್ಟು ಬಾಲಕರಿಗೆ ಮತ್ತು ಶೇಕಡಾ 50% ಬಾಲಕಿಯರಿಗೆ ಮೀಸಲಾತಿಯನ್ನು ಕಲ್ಪಿಸುವುದು. ಆಯ್ಕೆ ಮಾಡಲಾದ ವಿದ್ಯಾರ್ಥಿಗಳನ್ನು ಯಾವ ವಿದ್ಯಾ ಸಂಸ್ಥೆಗಳಲ್ಲಿ ದಾಖಲಾತಿ ಕೋರುತ್ತಾರೆ ಅದೇ ಶಾಲೆಯಲ್ಲಿ ಕಲ್ಪಿಸಲಾಗುವುದು. ಪರಿಶಿಷ್ಟ ಜಾತಿಯ 50 ವಿದ್ಯಾರ್ಥಿಗಳ ಗುರಿ ನಿಗದಿಪಡಿಸಲಾಗಿದೆ.

ಕಾರಣ 6ನೇ ತರಗತಿ ಪ್ರವೇಶಕ್ಕಾಗಿ ದಿನಾಂಕ: 19–04–2025 ರಿಂದ ದಿನಾಂಕ: 03–05–2025 ರ ಸಾಯಂಕಾಲ 5:00 ಗಂಟೆಯೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಭೂಮಿ ತಾಯಿ ಸಂರಕ್ಷಣೆ ಮಾಡುವುದು ಎಲ್ಲರ ಜವಾಬ್ದಾರಿ



ಮಲ್ಲಮ್ಮ ನುಡಿ ವಾರ್ತೆ

ಹಗರಿಬೊಮ್ಮನಹಳ್ಳಿ: ಏ.24 ಭೂಮಿ ಎಲ್ಲರಿಗೂ ಆಶ್ರಯ ನೀಡಿದೆ. ಭೂಮಿ ತಾಯಿ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಪುರಸಭೆಯ ಅಧ್ಯಕ್ಷ ಮರಿರಾಮಪ್ಪ ಅಭಿಪ್ರಾಯ ಪಟ್ಟರು.ಪಟ್ಟಣದ ಪುರಸಭೆಯ ಆವರಣದಲ್ಲಿ 'ವಿಶ್ವ ಭೂಮಿ' ದಿನಾಚರಣೆ ಅಂಗವಾಗಿ ಗಿಡ ನೆಟ್ಟು ನೀರೆರೆದ ಬಳಿಕ ಮಾತನಾಡಿದರು.

ಜಗತ್ತಿನ ಸಕಲ ಜೀವರಾಶಿಗಳ ಅಸ್ತಿತ್ವಕ್ಕೆ ಕಾರಣೀಕತೃವಾದ ಭೂಮಿಯು ಅನೇಕ ಕಾರಣಗಳಿಂದ ಗಂಡಾಂತರಕ್ಕೆ ಸಿಲುಕುವ ಮೂಲಕ ಜೀವರಾಶಿಗಳ ಬದುಕಿಗೆ ಅಪಾಯ ಉಂಟಾಗುತ್ತಿದೆ. ಇದು ಹೀಗೆಯೇ ಮುಂದುವರೆದರೆ ಜೀವಿಗಳಿಗೆ ಉಳಿಗಾಲವಿಲ್ಲ. ಆದ್ದರಿಂದ ಇರುವ ಒಂದೇ ಭೂಮಿಯ ಸಂರಕ್ಷಣೆ ಮಾಡುವದು ಸಾಮೂಹಿಕ ಜವಾಬ್ದಾರಿಯಾಗಿದೆ ಎಂದರು ಪುರಸಭೆಯ ಮುಖ್ಯಾಧಿಕಾರಿ ಪ್ರಭಾಕರ್ ಪಾಟೀಲ ಎಂ.ಮಾತನಾಡಿ ಭೂಮಿಯು ವಾಯು, ನೀರು, ನೆಲ ಹೊಂದಿರುವ, ಜೀವಿಗಳು ವಾಸಿಸಲು ಯೋಗ್ಯವಾಗಿರುವ ಏಕೈಕ ಗ್ರಹ ಹಸಿರು ಭೂಮಿ, ಸ್ವಚ್ಛ್ ಜಲ, ಶುದ್ಧ ಗಾಳಿ, ಸುಂದರ ಅರಣ್ಯ, ಸಮತೋಲನ ಹವಾಮಾನ ಅಗತ್ಯವಾಗಿದೆ. ಭೂಮಿ ಉಳಿದರೆ ಮಾತ್ರ ಎಲ್ಲಾ ಜೀವರಾಶಿಗಳು ಉಳಿಯಲು ಸಾಧ್ಯವಿದೆ ಎಂಬುದನ್ನು ಮರೆಯದೆ ಭೂಮಿಯ ಸಂರಕ್ಷಣೆಗೆ ಮುಂದಾಗೋಣ ಎಂದು ಹೇಳಿದರು.

ಈ ವೇಳೆ ಪುರಸಭೆಯ ಹಿರಿಯ ಸದಸ್ಯ ಅಜೀಜ್ ಉಲ್ಲಾ ಮುಖಂಡರಾದ ಚಿಂತ್ರಪಳ್ಳಿ ದೇವೇಂದ್ರಪ್ಪ, ಗುಂಡ್ರು ಹನುಮಂತಪ್ಪ, ಪುರಸಭೆಯ ಅಧಿಕಾರಿಗಳು ಸಿಬ್ಬಂದಿಯವರು ಇತರರು ಇದ್ದರು.

# ಹಲಗೇರಿ ಗ್ರಾ.ಪಂ ಕೆರೆ ಹೂಳೆತ್ತುವ, ಕೂಸಿನ ಮನೆ ಹಾಗೂ ಮೊರನಾಳ ದತ್ತು ಗ್ರಾಮದ ಕಾಮಗಾರಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪ್ರಸ್ತುತ ಬೇಸಿಗೆ ಇರುವದರಿಂದ ಪ್ರತಿಯೊಂದು ಕುಟುಂಬವು ಗ್ರಾಮಪಂಚಾಯತಿಯಿಂದ ನೀಡುವ ನರೇಗಾ ಕೆಲಸದಲ್ಲಿ ಭಾಗವಹಿಸಿ 60 ದಿನಗಳ ಕೂಲಿ ಕೆಲಸ ನಿರ್ವಹಿಸಿರೆಂದು ಕೊಪ್ಪಳ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಪ್ರಕಾಶ್ ವಿ. ಅವರು ಕರೆ ನೀಡಿದರು.

ಅವರು ಮಂಗಳವಾರ ಹಲಗೇರಿ ಗ್ರಾಮಪಂಚಾಯತಿಯಿಂದ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಹಲಗೇರಿ ಗ್ರಾಮದ ಪುಟ್ಟಪ್ಪನ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ಪರಿಶೀಲಿಸಿ ಮಾತನಾಡಿದರು.

ನರೇಗಾ ಯೋಜನೆಯು ಗ್ರಾಮೀಣ ಭಾಗದ ಕೂಲಿಕಾರರಿಗೆ ಕೂಲಿ ಕೆಲಸ ಒದಗಿಸುವ ಯೋಜನೆಯಾಗಿದ್ದು, ಇಲ್ಲಿ ಕೆಲಸದಲ್ಲಿ ನಿರತರಾದ ಪ್ರತಿ ಕುಟುಂಬವು 60 ದಿನಗಳ ನಿರಂತರವಾಗಿ ಕೂಲಿ ಕೆಲಸ ನಿರ್ವಹಿಸಬಹುದು.ಪ್ರತಿಯೊಬ್ಬರು ರೂ.370 ಕೂಲಿ ಬರುವಂತೆ ಕೂಲಿ ಕೆಲಸ ನಿರ್ವಹಿಸಬೇಕು. ಪ್ರಸ್ತುತ ಬೇಸಿಗೆ ಇರುವದರಿಂದ ಕೆಲಸದ ಪ್ರಮಾಣದಲ್ಲಿ ಶೇ.30ರಷ್ಟು ವಿನಾಯಿತಿ ನೀಡಲಾಗಿದೆ. ಕಳೆದ ಸಾಲಿನಲ್ಲಿ ರೂ.349 ಇದ್ದ ಕೂಲಿ ಮೊತ್ತವನ್ನು ಪ್ರಸ್ತುತ ರೂ.370 ಕ್ಕೆ ಹೆಚ್ಚಿಸಿದ್ದು, ನಿಮಗೆ ನೀಡಿರುವ ಅಳತೆಗನುಗುಣವಾಗಿ ಕೆಲಸ ನಿರ್ವಹಿಸಬೇಕೆಂದರು.

ಬಿಸಲಿನ ಪ್ರಮಾಣದ ಬಹಳಷ್ಟು ಇರುವದರಿಂದ ಕೂಲಿ ಕೆಲಸಕ್ಕೆ ಬರುವ ಎಲ್ಲಾ ಪಾಲಕರು ತಮ್ಮ 6 ತಿಂಗಳಿನಿಂದ 3 ವರ್ಷದೊಳಗಿ ಮಕ್ಕಳನ್ನು ಕಾಮಗಾರಿ ಸ್ಥಳಕ್ಕೆ ಕರೆದುಕೊಂಡು ಬರದೇ ಗ್ರಾಮದಲ್ಲಿರುವ ಕೂಸಿನ ಮನೆಗೆ ಮಕ್ಕಳನ್ನು ಸೇರ್ಪಡೆ ಮಾಡಬೇಕು. ಪ್ರತಿಯೊಬ್ಬರಿಗೂ 6 ಪೂಟ್ ಉದ್ದ, 6 ಅಗಲ, 1 ಪೂಟ್ ಆಳ ಕೆಲಸ ನಿರ್ವಹಿಸಿದಲ್ಲಿ ಎಲ್ಲರಿಗೂ ರೂ.370 ಕೂಲಿ ಬರುತ್ತದೆ ಎಂದು ಹೇಳಿದರು.

ಮಹಿಳಾ ಕೂಲಿಕಾರರೊಂದಿಗೆ ಸಂವಾದ: ಕೆರೆ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಮಹಿಳಾ ಕೂಲಿಕಾರರೊಂದಿಗೆ ಜಿ.ಪಂ ಯೋಜನಾ ನಿರ್ದೇಶಕರು ಸಂವಾದ ನಡೆಸಿ ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಕೆಲಸಕ್ಕೆ ಹಾಜರಾಗಿ ಮಹಿಳಾ ಭಾಗವಹಿಸುವಿಕೆ ಹೆಚ್ಚಳವಾಗಬೇಕು ಎಂದರು. ಬಳಿಕ ಕೆರೆ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸಿರುವ ಕುರಿತು ಎನ್.ಎಂ.ಎಂ.ಎಸ್ ನಲ್ಲಿ ಹಾಜರಾತಿಯನ್ನು ಸೆರೆ ಹಿಡಿದು ಅಪಲೋಡ್ ಮಾಡಿರುವ ಕುರಿತು ಆನ್‌ಲೈನ್ ಹಾಜರಾತಿಯನ್ನು ಖುದ್ದಾಗಿ ಪರಿಶೀಲಿಸಿದರು.

ಹಲಗೇರಿ ಕೂಸಿನ ಮನೆ ಪರಿವೀಕ್ಷಣೆ: ಹಲಗೇರಿ ಗ್ರಾಮದ ಕೂಸಿನ ಮನೆಗೆ ಜಿ.ಪಂ ಯೋಜನಾ ನಿರ್ದೇಶಕರು ಭೇಟಿ ನೀಡಿದರು. ಮಕ್ಕಳು ದಾಖಲಾಗಿರುವ ಕುರಿತು ಕೇರ್ ಟೇರ್ಗಳು ಮಾಹಿತಿ ನೀಡಿದರು. ಪ್ರಸ್ತುತ 15 ಮಕ್ಕಳು ಪ್ರತಿ ದಿನ ಕೂಸಿನ ಮನೆಗೆ ಬರುತ್ತಿದ್ದು, ಬೆಳಿಗ್ಗೆ ಹಾಲು, ಬಾಳೆಹಣ್ಣು, ದಾಲ್ ಖಿಚಡಿ, ಹೆಸರು ಬೇಳೆ ಪಾಯಸ, ಶಾವಿಗೆ ಪಾಯಸ, ಮೊಟ್ಟೆ ನೀಡುತ್ತಿರುವ ಕುರಿತು ವಿವರಿಸಿದರು. ಮಕ್ಕಳ ಆರೋಗ್ಯ ತಪಾಸಣೆ ಜರುಗಿಸಬೇಕೆಂದು ಜಿ.ಪಂ ಯೋಜನಾ ನಿರ್ದೇಶಕರು ಹೇಳಿದರು.

ಬಿಸರಳ್ಳಿ ಗ್ರಾಮ ಪಂಚಾಯತಿ ಹಾಗೂ ನರೇಗಾ ದತ್ತು ಗ್ರಾಮ ಮೊರನಾಳಕ್ಕೆ ಭೇಟಿ: ಬಿಸರಳ್ಳಿ ಗ್ರಾಮ ಪಂಚಾಯತಿಗೆ ಜಿ.ಪಂ ಯೋಜನಾ ನಿರ್ದೇಶಕರು ಭೇಟಿ ನೀಡಿ, ನರೇಗಾ ಕೂಲಿಕಾರರಿಗೆ ಕೂಲಿ ಕೆಲಸ ನೀಡುವಂತೆ ಗ್ರಾ.ಪಂ ಅಧಿಕಾರಿಗಳಿಗೆ ಸೂಚಿಸಿದರು. ಪ್ರಧಾನಮಂತ್ರಿ ಆವಾಸ್ ಪ್ಲಸ್ ಸಮೀಕ್ಷೆಯನ್ನು ವಸತಿ ರಹಿತ ಯಾವುದೇ ಕುಟುಂಬವು ಹೊರಗುಳಿಯದಂತೆ ಜಿ.ಪಿ.ಎಸ್ ಮಾಡಬೇಕೆಂದು ಗಣಕಯಂತ್ರ ನಿರ್ವಾಹಕರಿಗೆ ಸೂಚಿಸಿದರು.

ಬಳಿಕ ಸಂಸದರ ನರೇಗಾ ದತ್ತು ಗ್ರಾಮ ಮೋರನಾಳ ಗ್ರಾಮಕ್ಕೆ ಭೇಟಿ ನೀಡಿ, ನರೇಗಾ ಯೋಜನೆಯ ಶಾಲಾ ಕಂಪೌಂಡ, ಶಾಲಾ ಶೌಚಾಲಯ, ಅಡುಗೆ ಕೋಣೆ ಮತ್ತು ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಿಂದ ಅನುಷ್ಠಾನಿಸುತ್ತಿರುವ ಪ್ರಗತಿಯಲ್ಲಿರುವ ನಮ್ಮ ಹೊಲ ನಮ್ಮ ರಸ್ತೆ ಕಾಮಗಾರಿಗಳನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತ ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ, ಬಿಸರಳ್ಳಿ ಗ್ರಾಮ ಪಂಚಾಯತ ಅಧ್ಯಕ್ಷರಾದ ರಮೇಶರಡ್ಡಿ, ಹಲಗೇರಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಅಶೋಕ ರಾಂಪುರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ತಾಂತ್ರಿಕ ಸಂಯೋಜ–ಕ ಯಮನೂರ, ಗ್ರಾಮ ಪಂಚಾಯತ ಕಾರ್ಯದರ್ಶಿ ದೊಡ್ಡನಗೌಡ, ತಾಂತ್ರಿಕ ಸಹಾಯಕ ಪ್ರವೀಣ ಗದಗ ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 24–ಯಾದಗಿರಿ ಜಿಲ್ಲೆಯ ಏಕಲವ್ಯ ಮಾದರಿ ವಸತಿ ಶಾಲೆ ಬಂದಳ್ಳಿ ಖಾಲಿ ಇರುವ ಶಿಕ್ಷಕರು, ಉಪನ್ಯಾಸಕರ ಹುದ್ದೆಗಳನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಸಿದ್ದಣ್ಣ ಅಣಬಿ ಅವರು ತಿಳಿಸಿದ್ದಾರೆ. ವಿವಿಧ ಶಿಕ್ಷಕರು, ಉಪನ್ಯಾಸಕರ ಹುದ್ದೆಗಳಿಗೆ ಗೌರವಧನ ಆಧಾರದ ಮೇಲೆ ನೇಮಕಾತಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ನಡೆಯುತ್ತಿರುವ ಏಕಲವ್ಯ ಮಾದರಿ ವಸತಿ ಶಾಲೆ ಬಂದಳ್ಳಿ ತಾ.ಜಿ.ಯಾದಗಿರಿಯಲ್ಲಿ ವಿವಿಧ ಶಿಕ್ಷಕರು, ಉಪನ್ಯಾಸಕರ ಹುದ್ದೆಗಳು ಖಾಲಿಯಿದ್ದು, ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶವಿರುತ್ತದೆ. ಏಕಲವ್ಯ ಮಾದರಿ ವಸತಿ ಶಾಲೆ ಬಂದಳ್ಳಿ ವಿವರ ಖಾಲಿ ಹುದ್ದೆಗಳಿಗೆ ಏಕಲವ್ಯ ಮಾದರಿ ವಸತಿ ಶಾಲೆ ಬಂದಳ್ಳಿ ಶಾಲೆಗೆ ಅಗತ್ಯ ದಾಖಲೆಗಳೊಂದಿಗೆ ಅರ್ಹ ಅಭ್ಯರ್ಥಿಗಳಿಂದ 2025ರ ಏಪ್ರಿಲ್ 25ರ ಒಳಗೆ ಸಲ್ಲಿಸಬೇಕು, ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಮೊ.ನಂ.8861559338, 7975542354ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**CITATION**
**IN THE COURT OF THE PRL. CIVIL JUDGE AND JMFC. AT HUMNABAD**
**Crl. Misc. No. 36/2025**

Petitioner:-
Shantappa G. Patil S/o late Ganapatarao Age; 57 years Occu: Agriculture R/o Village Hunsgera Tq:Humnabad Dist;Bidar, Now at Allamprabhu Ngar Gornalli Bidar Dist:Bidar.
Respondent:-
The Registrar of Birth and Death through the Tahasildar Humnabad.
Sub: Petition U/Sec. 13(3) of Birth and Death Registration Act 1969.

Whereas the above named petitioners have filed the petition under section of Birth and Death Registration Act 1969 praying this Honourable court to issue Death Ceriticate Son of petitioner namely: Ganapata-rao who died on 25-05-1995 at Village Hunsgera Tq:Humnabad Dist:Bidar. The petitioners claiming the death certificate of said Ganapatarao for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 20-05-2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 08-04-2025.

//By order of the court//
Chief Ministerial Officer
Prl. Civil Judge and JMFC Court
Humnabad


# ಪೂರ್ವಜರ ಇನಾಂ ಜಮೀನು ಯಥಾಸ್ಥಿತಿಯಾಗಿರಲಿ : ಮಂಗಳಮ್ಮ ಮನವಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಗಂಗಾವತಿಯ ವಿದ್ಯಾನಗರದ ಜಮೀನಿನ ಸರ್ವೆ ನಂಬರ್ 121ರ ನನ್ನ ತಂದೆ ಪಂಪಣ್ಣ ಇವರ ಸಮಾಧಿಯನ್ನು ಕಲ್ಗುಡಿ ಸುಬ್ಬರಾವ್ ಮತ್ತು ಆತನ ಸಹಚರರು ಕೆಡವಿ ಧ್ವಂಸ ಮಾಡಿದ್ದು ಇವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿ ಪೂರ್ವಜರ ಇನಾಂ ಜಮೀನು ಯಥಾಸ್ಥಿತಿಯಾಗಿ ಇರುವಂತೆ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿರುವುದಾಗಿ ಗಂಗಾವತಿಯ ಹಿರೇ ಜಂತಕಲ್ ನ ಮಂಗಳಮ್ಮ ಬಾಲಪ್ಪ ಹೇಳಿದರು.

ಅವರು ಗುರುವಾರದಂದು ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಸಂಬಂಧಿಸಿದ ದಾಖಲೆಗಳನ್ನು ಬಿಡುಗಡೆ ಮಾಡಿ 1972 ರಲ್ಲಿ ನಾಲ್ಕು ಜನ ಸಹೋದರರಿಗೆ ರೀ ಗ್ರಾಂಡ್ ಆಗಿ ಬಾಲಪ್ಪ, ಪಾರ್ವತಮ್ಮ, ಪಂಪಣ್ಣ ಮಾರೇಪ್ಪ ಮಂಜೂರಾಗುತ್ತದೆ ಅದರಲ್ಲಿ ನನಗೆ ಅಂದರೆ ಪಂಪಣ್ಣನ ಮಗಳಾದ ನಾನು ಮಂಗಳಮ್ಮ ಗಂಡ ಬಾಲಪ್ಪ 7 ಎಕರೆ 20 ಗುಂಟೆ ಜಮೀನಿನಲ್ಲಿ ಚಿಕ್ಕ ಪುಟ್ಟ ವ್ಯವಸಾಯ ಮಾಡಿಕೊಂಡು ಬಂದಿದ್ದು ಆದರೆ ಈಗ 2 ಎಕರೆ 20 ಗುಂಟೆಯಲ್ಲಿ ಯಾವುದೇ ಸಂಬಂಧ ಇಲ್ಲದವರು ಖರೀದಿಸಿರುವುದಾಗಿ ಕಬ್ಜಾ ಮಾಡಿದ್ದು ಈ ಅನ್ಯಾಯದ ವಿರುದ್ಧ ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಗೆ ದೂರು ನೀಡಲು ಹೋದರೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ, ದೂರು ಸಹ ಅವರು ಪಡೆಯುತ್ತಿಲ್ಲ ಅವರು ಕಬ್ಜಾ ಮಾಡಿದವರ ಪರ ಮಾತನಾಡುತ್ತಿದ್ದಾರೆ ಎಂದು ಆರೋಪಿಸಿದ ಅವರು ಈ ಆರು ತಿಂಗಳ ಹಿಂದೆ ನಮ್ಮ ಜಮೀನಿನಲ್ಲಿ ಜೋಳ ಬೆಳೆಯಲಾಗಿತ್ತು ಆಗ ನಮ್ಮ ಜಮೀನು ಎಂದು 100 ರಿಂದ 150 ಜನ ಬಂದು ಜಮೀನಿನಲ್ಲಿ ಬೆಳೆದ ಜೋಳವನ್ನು ಜೆಸಿಬಿ ಯಿಂದ ಕೆಡಿಸಿ ಹಲ್ಲೆ ಮಾಡಿದ್ದರು, ಆಗ ಪೊಲೀಸ್ ಠಾಣೆಗೆ ದೂರು ಕೊಡಲು ಹೋದರು ಯಾವುದೇ ಕ್ರಮ ಕೈಗೊಳ್ಳುವುದಿಲ್ಲ ಈ ಕುರಿತು ಮಾನವ ಹಕ್ಕುಗಳ ಆಯೋಗಕ್ಕೂ ಸಹ ದೂರು ನೀಡಲಾಗಿತ್ತು ಆದರೂ ಯಾವುದೇ ನ್ಯಾಯ ಸಿಗಲಿಲ್ಲ ಕಬ್ಜಾ ಮಾಡಿದವರು ನಿಮ್ಮ ಹೆಸರಿನಲ್ಲಿ ಯಾವುದೇ ಕಾಗದ ಪತ್ರ ಇಲ್ಲ ಎಂದು ನಮ್ಮ ಮೇಲೆ ದೌರ್ಜನ್ಯ ಮಾಡುತ್ತಿದ್ದಾರೆ ಹೀಗಾಗಿ ಜೀವ ಬೆದರಿಕೆ ಕೊಲೆ ಬೆದರಿಕೆ ಹಾಕುತ್ತಿದ್ದು ಈ ಜಮೀನಿನ ದಾಖಲೆಗಳಂತೆ ನಮಗೆ ಮರಳಿ ನೀಡಿ ನಮಗೆ ಕೃಷಿ ವ್ಯವಸ್ಥೆ ಮಾಡಲು ಅನುಕೂಲ ಮಾಡಿಕೊಳ್ಳಬೇಕು, ನಮ್ಮ ಮೇಲೆ ಹಲ್ಲೆ ಮಾಡಲು ಬಂದವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಪಲ್ಲವಿ ನಾಯಕ್, ಪರಶುರಾಮ್ ನಾಯಕ್, ಅಮರಪ್ಪ ನಾಯಕ್, ರೇಣುಕಾ ಕಂಪ್ಲಿ ಉಪಸ್ಥಿತರಿದ್ದರು.

ಏ.26ರಂದು ದಾವಣಗೆರೆಯಲ್ಲಿ ಸಂವಿಧಾನ ಯಾನ:

# ಜಿಲ್ಲೆಯ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಓಂಪ್ರಕಾಶ ರೊಟ್ಟೆ ಕರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಈ ತಿಂಗಳ 26ರಂದು ದಾವಣಗೆರೆ ನಗರದ ಹೈಸ್ಕೂಲ್ ಫೀಲ್ಡ್ ಬಳಿ ಇರುವ ಬೀರ್ಲಿಂಗೇಶ್ವರ ದೇವಸ್ಥಾನದ ಅವರಣದಲ್ಲಿ ಎದ್ದೇಳು ಕರ್ನಾಟಕ ಸಂಘಟನೆ ಸೇರಿದಂತೆ 100ಕ್ಕೂ ಅಧಿಕ ಸಂಘಟನೆಗಳ ಸಹಯೋಗದಲ್ಲಿ ಸಂವಿಧಾನ ಸಂರಕ್ಷರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಎದ್ದೇಳು ಕರ್ನಾಟಕ ಸಂಘಟನೆಯ ಜಿಲ್ಲಾ ಸಂಚಾಲಕ ಓಂಪ್ರಕಾಶ ರೊಟ್ಟೆ ತಿಳಿಸಿದರು.ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಕರ್ನಾಟಕದಲ್ಲಿ 100ಕ್ಕೆ ಮೇಲ್ಪಟ್ಟು ಪ್ರಗತಿಪರ ಜನಪರ ಕಾಳಜಿ ಹೊಂದಿರುವ ಸಂಘಟನೆ ಪ್ರಮುಖರು ಚಿಂತನ–ಮಂಥನ ಮಾಡಿಕೊಂಡು ಸಂಘಟನೆಗಳ ಒಕ್ಕೂಟವೇ ಎದ್ದೇಳು ಕರ್ನಾಟಕ ಹೆಸರಿನಲ್ಲಿ ಸಂವಿಧಾನ ಸಂರಕ್ಷಣಾ ಪಡೆ ರಚಿಸಲಾಗಿದೆ. ಸಂವಿಧಾನದ ಆಶಗಳು ಪ್ರಜಾಪ್ರಭುತ್ವದ ವ್ಯವಸ್ಥೆಯನ್ನೆ ಬುಡಮೇಲು ಮಾಡಲು ಹೊರಟಿರುವ ಪ್ರಮುಖವಾದ ಎರಡು ರಾಷ್ಟ್ರೀಯ ಪಕ್ಷಗಳು ಸಂವಿಧಾನ ಬದಲಾವಣೆ ಮತ್ತು ಸಂವಿಧಾನ ಉಳಿಸುತ್ತೇವೆಂದು ಹೇಳುತ್ತಲೆ ಭಾರತದ 80% ಬಡವರಿರುವ ಈ ದೇಶದ ಯುವಕರು ರೈತರು, ಕೂಲಿಕಾರ್ಮಿಕರು, ಮಕ್ಕಳು, ಮಹಿಳೆಯರು ವೃದ್ಧರು, ಹಸನಾದ ಬದುಕಿಗೆ ಸಂವಿಧಾನ ಬದ್ಧವಾದ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗದ ದೂರಪಯೋಗ ಹಾಗೂ ಸಂವಿಧಾನ ಅಡಿಯಲ್ಲಿರುವ ಚುನಾವಣೆ ಆಯೋಗ, ಇ.ಡಿ. ಮುಂತಾದ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಭ್ರಷ್ಟರ ರಕ್ಷಣೆ, ಶ್ರೀಮಂತರ ಕಂಪನಿಗಳಿಗೆ ಸರಕಾರದಿಂದ ಧನಸಹಾಯ ಮಾಡುವುದು, ಚುನಾಯಿತ ಪ್ರತಿನಿಧಿಗಳನ್ನು 100 ಕೋಟಿ ಹಣಕೊಟ್ಟು ಖರೀದಿ ಮಾಡಿ ರಾಷ್ಟ್ರಪತಿ ಭವನ ರಾಜ್ಯಪಾಲರ ಭವನ ದುರುಪಯೋಗ ಮಾಡಿಕೊಂಡು ರಾತೋರಾತ್ರಿ ಸರಕಾರಗಳನ್ನು ಉರುಳಿಸುವ ಕಾರ್ಯ ಮಾಡುತ್ತಿವೆ ಎಂದರು.ಪ್ರಜಾಪ್ರಭುತ್ವ ಭಾರತದಲ್ಲಿ ಭಾರತೀಯರಾದ ನಾವುಗಳು ನಮ್ಮನ್ನು ನಾವೇ ಅರ್ಪಿಸಿಕೊಂಡ ಸಂವಿಧಾನವನ್ನು ಸಂರಕ್ಷಣೆ ಮಾಡಿಕೊಳ್ಳುವ ಅನಿವಾರ್ಯತೆಯ ಪರಿಸ್ಥಿತಿಗೆ ತಂದು ನಿಲ್ಲಿಸಿದ್ದಾರೆ. ಮೂರು ಧರ್ಮಗಳ ಧರ್ಮಾಂಧರು ಸಂವಿಧಾನದ ವಿರುದ್ಧವಾಗಿ ನಡೆದುಕೊಂಡು ಈ ದೇಶದ ಮುಗ್ಧ ಯುವಕರುನ್ನು ತಮ್ಮ ತಮ್ಮ ಧರ್ಮಾಂಧತೆಯ ವಿಷ ಬೀಜ ಬಿತ್ತಿ ದೇಶದ ಸಂವಿಧಾನಕ್ಕೆ ಗಂಡಾಂತರ ತಂದು ದೇಶದಲ್ಲಿ ಅಜಾಗರೂಕತೆಯ ವಾತಾವರಣ ನಿರ್ಮಿಸಿದ್ದಾರೆ. ಇದನ್ನು ತಡೆಗಟ್ಟಲಿಕ್ಕೆ ಸಂವಿಧಾನ ಸಂರಕ್ಷಣೆಗಾಗಿ ಕರ್ನಾಟಕದಲ್ಲಿ ದೇಶಪ್ರೇಮಿ ಯುವಪಡೆ ಕಟ್ಟಿಕೊಂಡು "ಸಂವಿಧಾನ ನಮ್ಮ ದೇಶದ ಹೆಮ್ಮೆ ನಮ್ಮ ದೇಶದ ಗುರುತು ನಮ್ಮ ದೇಶದ ಆತ್ಮೀಯತೆ"ಯಾಗಿದೆ. ಆ ಕಾರಣಕ್ಕಾಗಿ ಸಂವಿಧಾನ ಸಂರಕ್ಷಣೆಗಾಗಿ ಪಣತೊಡಬೇಕು. ಸಂವಿಧಾನ ಸಂರಕ್ಷಣೆಗಾಗಿ ದೇಶಪ್ರೇಮ ಯುವಕರ ಪಡೆ ಕಟ್ಟಲೇಬೇಕಾಗಿದೆ. ಮುಂದಿನ ಮೂರು ವರ್ಷಗಳಲ್ಲಿ 10 ಲಕ್ಷ ಯುವ ದೇಶಪ್ರೇಮಿಗಳ ಪಡೆಯ ಕಟ್ಟುವ ಕಾರ್ಯದಲ್ಲಿ ತೊಡಗಿ ಎದ್ದೇಳು ಕರ್ನಾಟಕ ಸಂವಿಧಾನ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಹಕ್ಕು ಮತ್ತು ಕರ್ತವ್ಯವಾಗಿದೆ ಎಂದು ತಿಳಿಸಿದರು.ಸಂವಿಧಾನ ಸಂರಕ್ಷಣೆ ಎಂದರೆ ಶಾಂತಿ ಸೌಹಾರ್ದತೆಯನ್ನು ಕಾಪಾಡುವುದು ಪ್ರೀತಿ ಮತ್ತು ಐಕ್ಯತೆಯ ಸಂದೇಶವನ್ನು ಸಾರುವುದು, ಸತ್ಯದ ನಿಲುವು ತಿಳಿಸುವುದು, ಸಮಾನತೆಯ ಹರಿಕಾರರಾಗುವುದು, ನ್ಯಾಯದ ಪರಿಪಾಲಕರಾಗುವುದು, ದೇಶದ ಸಂವಿಧಾನದ ಸಂರಕ್ಷಣೆ ಯೋಧರಾಗುವುದು ಈ ಒಂದು ಸಂದೇಶವನ್ನು ಸಾರಲು 26 ಏಪ್ರಿಲ್ 2025ರಂದು ದಾವಣಗೇರೆಯಲ್ಲಿ 15 ಸಾವಿರ ಯುವಕರನ್ನು ಜಾಗೃತಗೊಳಿಸಲು ಮೊದಲ ಹಂತದ ಸಮಾವೇಶ ಹಮ್ಮಿಕೊಂಡಿದ್ದೇವೆ. ಆದ್ದರಿಂದ ಬೀದರದಿಂದ 200 ಜನ ಯುವಕರು ಹೋಗುವ ತಯ್ಯಾರಿ ಮಾಡಿಕೊಂಡಿದ್ದೇವೆ. ಇನ್ನು ಹೆಚ್ಚಿನ ಸಂಖ್ಯೆ ಬರುವವರಿದ್ದರೆ ಬೀದರ ಜಿಲ್ಲೆ ಎದ್ದೇಳು ಕರ್ನಾಟಕ ಜಿಲ್ಲೆ ಸಂಘಟನೆ ಸಂಚಾಲಕರಾದ ಓಂಪ್ರಕಾಶ ರೊಟ್ಟೆ, ಯುವಪಡೆ ಮುಖಂಡರಾದ ಸಂದೀಪ ಮುಕುಂದೆ, ಜಗದೀಶ್ವರ ಬಿರಾದಾರ, ಜಾಗೃತಿ ಕರ್ನಾಟಕದ ಮುಖಂಡರಾದ ವಿನಯ ಮಾಳಗೆಯವರನ್ನು ಸಂಪರ್ಕಿಸಬೇಕೆಂದು ಓಂಪ್ರಕಾಶ ರೊಟ್ಟೆ ಹೇಳಿದರು.ಎದ್ದೇಳು ಕರ್ನಾಟಕ ಸಂಘಟನೆಯ ಜಿಲ್ಲಾ ಸಂಚಾಲಕರಾದ ಮಹಮ್ಮದ್ ನಿಜಾಮುದ್ದಿನ್, ಜಗದೀಶ್ವರ ಬಿರಾದಾರ, ಸಂದೀಪ್ ಮುಕಿಂದೆ, ಮಾನವ ಬಂಧುತ್ವ ವೇದಿಕೆಯ ಜಿಲ್ಲಾಧ್ಯಕ್ಷ ಮಹೇಶ ಗೋರನಾಳಕರ್, ಪ್ರಮುಖರಾದ ಪ್ರಕಾಶ ರಾವಣ, ಕಾಳಿದಾಸ ಸುರ್ಯವಂಶಿ, ಜೈವಂತ ಸಿಂಗಾರೆ, ಬಾಲಾಜಿ ಸೂರ್ಯವಂಶಿ, ಸೈಯದ್ ಇಬ್ರಾಹಿಂ ಪತ್ರಿಕಾ ಗೋಷ್ಠಿಯಲ್ಲಿದ್ದರು.

# ಹಡಪದ(ಸವಿತಾ)ಸಮಾಜ ಧ್ವನಿಯಿಲ್ಲದ ಸಮಾಜ: ಹನುಮಂತಪ್ಪ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಹಡಪದ ಸಮಾಜ ಆರ್ಥಿಕವಾಗಿ, ಸಾಮಾಜಿಕವಾಗಿ, ರಾಜಕೀಯವಾಗಿ ಅತ್ಯಂತ ಹಿಂದುಳಿದ ಸಮಾಜ ವಾಗಿದ್ದು ಧ್ವನಿಯಿಲ್ಲದ ಸಮಾಜವಾಗಿದೆ ಎಂದು ಕೊಪ್ಪಳ ಜಿಲ್ಲಾ ಹಡಪದ ಸಮಾಜದ ನೂತನ ಅಧ್ಯಕ್ಷ ಹನುಮಂತಪ್ಪ ಸರಿಗಮ ಹೇಳಿದರು.

ಅವರು ಗುರುವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ, ಉದ್ದೇಶಿಸಿ ಮಾತನಾಡಿ ರಾಜ್ಯ ಸರ್ಕಾರ ಹಡಪದ ಸಮಾಜಕ್ಕೆ ಎಲ್ಲಾ ರೀತಿಯ ನೆರವು ನೀಡಬೇಕು, ರಾಜ್ಯದಲ್ಲಿ ಹಡಪದ ಸಮಾಜ ಒಂಬತ್ತು ಲಕ್ಷ ಜನಸಂಖ್ಯೆ ಇದ್ದು ಆದರೆ 5 ಲಕ್ಷ ಎಂದು ತೋರಿಸಿರುವುದು ಸರಿಯಲ್ಲ ಸರಿಯಾದ ರೀತಿ ಸಂಖ್ಯೆ ತೋರಿಸುವಂತೆ ಸರಕಾರವನ್ನು ಒತ್ತಾಯಿಸಿದರು.

ಪದಾಧಿಕಾರಿಗಳಾಗಿ

ತಾಲೂಕ ಅಧ್ಯಕ್ಷರಾಗಿ ಅಂದಪ್ಪ ಸಂಗಾಪೂರ, ಉಪಾಧ್ಯಕ್ಷರಾಗಿ ವಿರುಪಾಕ್ಷಪ್ಪ ದೊಡ್ಡಮನಿ, ಬಸಾಪುರ. ಪ್ರಧಾನ ಕಾರ್ಯದರ್ಶಿಯಾಗಿ ಮಹೇಶ ಹಡಪದ, ಭಾಗ್ಯನಗರ, ಸಹ ಕಾರ್ಯದರ್ಶಿ ನಿಂಗೆಶಪ್ಪ ಹಡಪದ, ಗೊಂಡಬಾಳ,

ಖಜಾಂಚಿ ಗವಿಸಿದ್ದಪ್ಪ ಹಡಪದ, ದದೇಗಲ್, ಉಪ ಖಜಾಂಚಿಯಾಗಿ ಕೊಟ್ರೇಶ ಹಡಪದ,

ನಿರ್ದೇಶಕರಾಗಿ ಮಾರುತೇಶ ಹಾಲಹಳ್ಳಿ, ಈರಣ್ಣ ಹಡಪದ, ದದೇಗಲ್, ಕಳಕಪ್ಪ ಹಡಪದ, ಇರಕಲ್ಲಗಡ್, ಈಶ್ವರ ಸಾಹುಕಾರ್ ಬೇವಿನಾಳ, ವಿರೇಶ ಹಡಪದ ಕೋಳೂರು ಆಯ್ಕೆಯಾಗಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಹಡಪದ ಸಮಾಜದ ಜಿಲ್ಲಾ ಉಪಾಧ್ಯಕ್ಷ ಗುಂಡಪ್ಪ ಹಡಪದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗವಿಸಿದ್ದಪ್ಪ ಕಾಟ್ರಳ್ಳಿ, ಯುವ ಘಟಕದ ಅಧ್ಯಕ್ಷ ಬಸವರಾಜ ಹಡಪದ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮಲ್ಲಪ್ಪ ಹಡಪದ, ಕೊಪ್ಪಳ ತಾಲೂಕು ಅಧ್ಯಕ್ಷ ಅಂದಪ್ಪ ಹಡಪದ ಉಪಸ್ಥಿತರಿದ್ದರು.

# ಪ್ರಯಾಣಿಕರ ಬೆಂಗಾವಲಾಗಿ ನಿಂತ ಮಂತ್ರಿ; ಮಹಿಳೆ ಜೊತೆ ಅಸಭ್ಯವಾಗಿ ವರ್ತಿಸಿದ ನಿರ್ವಾಹಕನ ಅಮಾನತು ಸಾಲದು, ವಜಾಕ್ಕೆ ನಿರ್ದೇಶನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಮಹಿಳಾ ಪ್ರಯಾಣಿಕರ ಜೊತೆ ಅಸಭ್ಯವಾಗಿ ವರ್ತಿಸಿದ ಆರೋಪದ ಹಿನ್ನೆಲೆಯಲ್ಲಿ ಮಂಗಳೂರು ವಿಭಾಗದ ಏಖಖಖಿಅ ನಿರ್ವಹನನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ. ಪ್ರಯಾಣಿಕರ ಜೊತೆ ಅಸಭ್ಯವಾಗಿ ವರ್ತಿಸಿರುವುದಕ್ಕೆ ಅಮಾನತು ಮಾಡಿದರೆ ಸಾಲದು, ಸೇವೆಯಿಂದಲೇ ವಜಾ ಮಾಡಬೇಕಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಪ್ರತಿಪಾದಿಸಿದ್ದಾರೆ. ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು KSRTಅ ವ್ಯವಸ್ಥಾಪಕ ನಿರ್ದೇಶಕರಿಗೆ ನಿರ್ದೇಶನ ನೀಡಿದ್ದಾರೆ.



ಬಸ್ಸಿನಲ್ಲಿ ನಿರ್ವಾಹಕನೊಬ್ಬ ಮಹಿಳಾ ಪ್ರಯಾಣಿಕರೊಡನೆ ಅತ್ಯಂತ ಕೆಟ್ಟದಾಗಿ ನಡೆದುಕೊಂಡಿರುವ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ವೀಡಿಯೋ ಹರಿದಾಡಿದೆ. ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಏಖಖಖಿಅ ಆಡಳಿತ ಮಂಡಳಿ, ಆರೋಪಕ್ಕೆ ಗುರಿಯಾಗಿರುವ ಮಂಗಳೂರು ವಿಭಾಗದ ಏಖಖಖಿಅ ನಿರ್ವಹನನ್ನು ಸೇವೆಯಿಂದ ಅಮಾನತುಗೊಳಿಸಿದೆ.

ಈ ನಡುವೆ, ಆರೋಪ ಬಗ್ಗೆ ಕೆಂಡಾಮಂಡಲವಾಗಿರುವ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ KSRTC ವ್ಯವಸ್ಥಾಪಕ ನಿರ್ದೇಶಕರಿಗೆ ಟಿಪ್ಪಣಿ ರವಾನಿಸಿದ್ದು, ಪ್ರಸಾರವಾದ ವಿಡಿಯೋಗೆ ಸಂಬಂಧಪಟ್ಟಂತೆ, ಮೇಲ್ನೋಟಕ್ಕೆ ಘಟನೆಗೆ ಸಂಬಂಧಪಟ್ಟಂತೆ ಕೂಡಲೇ ವಿಚಾರಣಾ ಪ್ರಕ್ರಿಯೆ ಪ್ರಾರಂಭಿಸಿ, ತ್ವರಿತವಾಗಿ ವಿಚಾರಣೆ ಮುಗಿಸಿ, ಆ ನಿರ್ವಾಹಕನನ್ನು ಸೇವೆಯಿಂದಲೇ ವಜಾ ಮಾಡಲು ಕ್ರಮಕೈಗೊಳ್ಳುವಂತೆ ಸೂಚಿಸಿದ್ದಾರೆ.

ನಿರ್ವಾಹಕನ ಬಗ್ಗೆ ಆರೋಪ ಸಾಬೀತಾಗಿರುವ ಹಿನ್ನೆಲೆಯಲ್ಲಿ ಈಗಾಗಲೇ ನಿರ್ವಾಹಕನನ್ನು ಅಮಾನತು ಮಾಡಿರುವುದು ಸರಿಯಷ್ಟೇ. ಬಸ್ಸಿನಲ್ಲಿ ಪ್ರಯಾಣಿಸುವ ಪ್ರತಿಯೊಬ್ಬ ಹೆಣ್ಣುಮಕ್ಕಳೊಡನೆ ಗೌರವದೊಂದಿಗೆ ನಡೆದುಕೊಳ್ಳುವುದ ು ನಮ್ಮ ಸಿಬ್ಬಂದಿಗಳ ಆದ್ಯ ಕರ್ತವ್ಯವಾಗಿರಬೇಕು.

ಈ ರೀತಿಯ ಅಸಹ್ಯಕರ ನಡವಳಿಕೆ ಅಕ್ಷಮ್ಯ ಅಪರಾಧ ಎಂದು ಸಚಿವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಏಖಖಖಿಅ ಬಸ್ಸುಗಳು ಹಾಗೂ ಚಾಲಕ-ನಿರ್ವಾಹಕರ ಬಗ್ಗೆ ಸಾರ್ವಜನಿಕ ಪ್ರಯಾಣಿಕರು ಅತೀವ ನಂಬಿಕೆ ಮತ್ತು ಪ್ರೀತಿ ಹೊಂದಿದ್ದಾರೆ.

ಕೆಲವೊಬ್ಬರು ಮಾಡುವ ಈ ರೀತಿಯ ಕೆಲಸಗಳು ಸಂಸ್ಥೆ ಹಾಗೂ ಸಿಬ್ಬಂದಿಗಳ ಗೌರವಕ್ಕೆ ಧಕ್ಕೆ ತರುವಂತಹದು. ಈ ಘಟನೆಗೆ ಸಂಬಂಧಪಟ್ಟಂತೆ ಕೂಡಲೇ ವಿಚಾರಣಾ ಪ್ರಕ್ರಿಯೆ ಪ್ರಾರಂಭಿಸಿ, ತ್ವರಿತವಾಗಿ ವಿಚಾರಣೆ ಮುಗಿಸಿ, ಆ ನಿರ್ವಾಹಕನನ್ನು ಸೇವೆಯಿಂದ ಲೇ ವಜಾ ಮಾಡಲು ಕ್ರಮಕೈಗೊಳ್ಳುವಂತೆ ಸಚಿವರು ನಿಗಮದ ಎಂಡಿಗೆ ನಿರ್ದೇಶಿಸಿದ್ದಾರೆ.

# ಹರೀಶ, ಪ್ರಶಾಂತಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.24-ಹರಿಯಾಣದ ಕುರುಕ್ಷೇತ್ರದಲ್ಲಿ ಜರುಗಿದ ಜೂನಿಯರ್ ನ್ಯಾಷನಲ್ ಖೋಖೋ ಚಾಂಪಿಯನ್ ಶಿಪ್ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ ಪಡೆದ ಕರ್ನಾಟಕ ರಾಜ್ಯ ತಂಡವನ್ನು ಪ್ರತಿನಿಧಿಸಿದ್ದ ತಾಲೂಕಿನ ಬೇವೂರ ಗ್ರಾಮದ ಹರೀಶ ಗೌಡರ ಹಾಗೂ ಪ್ರಶಾಂತ ಗಡೇದ ಅವರನ್ನು ಸ್ಥಳೀಯ ಗ್ರಾಮ ಪಂಚಾಯತಿ ವತಿಯಿಂದ ಸನ್ಮಾನಿಸಲಾಯಿತು.

ಗ್ರಾಪಂ ಅಧ್ಯಕ್ಷೆ ಫರೀದಾ ಗುರಗುನ್ನಿ, ಅಭಿವೃದ್ಧಿ ಅಧಿಕಾರಿ ಭೀಮಪ್ಪ ಇಟಗಿ, ಸದಸ್ಯರಾದ ಬಸವರಾಜ ಭಗವತಿ, ಗ್ಯಾನೇಶ ನೀಲನಾಯಕ, ಚಿದಾನಂದ ಹೊಸಮನಿ, ಕಾರ್ಯದರ್ಶಿ ರಾಮಪ್ಪ ಬಡಿಗೇರ, ಸಿಬ್ಬಂದಿ ವರ್ಗ ಇದ್ದರು.

## ಡಾ.ರಾಜಕುಮಾರ ಜನ್ಮ ದಿನಾಚರಣೆ
# ಕಲಾದೇವಿ ಆರಾಧಕ ಡಾ.ರಾಜ್‌ಕುಮಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.24-ಕಲಾವಿದರ ಕುಟುಂಬದಲ್ಲಿ ಜನಿಸಿ ರಂಗಭೂಮಿಯಲ್ಲಿ ತನ್ನ ಪ್ರತಿಭೆ ತೋರಿಸಿ ಚಲನಚಿತ್ರದಲ್ಲಿ ಮಿಂಚಿ ದೇಶದ ಪ್ರತಿಷ್ಠಿತ ದಾದಾಸಾಹೇಬ ಫಾಲ್ಕೆ ಪ್ರಶಸ್ತಿ ಪುರಸ್ಕೃತ ಡಾ.ರಾಜ್‌ಕುಮಾರ ಕಲಾದೇವಿ ಆರಾಧಕರು ಎಂದು ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಡಾ.ರಾಜಕುಮಾರ ಅವರ 97ನೇ ಜನ್ಮದಿನಾಚರಣೆ ಹಾಗೂ ಡಾ.ರಾಜ್ ಗೀತೆಗಳ ಗಾಯನ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸಿರಿವಂತ, ಬಡವ, ರಾಜ-ಮಹಾರಾಜರ ಪಾತ್ರಗಳಲ್ಲಿ ಅಭಿನಯಿಸಿ ಪಾತ್ರಗಳಿಗೆ ಜೀವ ತುಂಬುವ ಕಾರ್ಯ ಮಾಡಿದ ಡಾ.ರಾಜ್, ಅವರು ಕೇವಲ ಕಲಾವಿದನಾಗಿರಲಿಲ್ಲ. ಮಾನವೀಯತೆಯ ಮೌಲ್ಯಗಳುಳ್ಳ ವ್ಯಕ್ತಿಯಾಗಿದ್ದರು ಎಂದರು.

ಕನ್ನಡ ಭಾಷೆಗೆ ಪ್ರಾತಿನಿತ್ಯ ಕೊಡುವ ನಿಟ್ಟಿನಲ್ಲಿ ಗೋಕಾಕ್ ಚಳುವಳಿ ನಡೆಸುವಲ್ಲಿ ಪ್ರಮುಖರಾಗಿದ್ದರು. ತಮ್ಮ ಇಡೀ ಕಲಾ ಜೀವನದಲ್ಲಿ ಸರಳ ಹಾಗೂ ಆದರ್ಶ ವಿಷಯಗಳನ್ನೊಳಗೊಂಡ ಹಾಗೂ ಪ್ರೇಕ್ಷಕರಿಗೆ ಮಾರ್ಗದರ್ಶಿಯಾಗಬಲ್ಲ ಪಾತ್ರ ನಿರ್ವಹಿಸಿ ಎಲ್ಲರ ಆರಾಧ್ಯ ಕಲಾವಿದರಾಗಿದ್ದರು ಎಂದು ಪಿ.ಎಚ್.ಪೂಜಾರ ಹೇಳಿದರು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಮಾತನಾಡಿ, ರಾಜಕುಮಾರ ಕಲೆಯ ಜೊತೆಗೆ ಉತ್ತಮ ಹಾಡುಗಾರರಾಗಿದ್ದರು. ಅದ್ಬುತವಾದ ಕಂಠಸಿರಿಯಿಂದ ಹಾಗೂ ಸ್ಪಷ್ಟ ಕನ್ನಡ ಶಬ್ದ ಪ್ರಯೋಗದಲ್ಲಿ ಪರಿಣಿತರಾಗಿದ್ದರು. ಇವರು ನಟಿಸಿದ ಪ್ರತಿಯೊಂದು ಚಿತ್ರಗಳು ಸಮಾಜಕ್ಕೊಂದು ಸಂದೇಶ ನೀಡುತ್ತಿದ್ದವು. ಆದ್ದರಿಂದ ರಾಜ್‌ಕುಮಾರ ಒಬ್ಬ ಮಾದರಿ ವ್ಯಕ್ತಿಯಾಗಿ ಎಲ್ಲರ ಮನದಲ್ಲಿ ನೆಲೆಯೂರಿದ್ದರು ಎಂದರು.

ಡಿಎಸ್‌ಪಿ ಮಂಜುನಾಥ ಗಂಗಲ್ ಮಾತನಾಡಿ, ಎಸ್.ಎಂ.ಕೃಷ್ಣ ಮುಖ್ಯಮಂತ್ರಿ ಇದ್ದ ಸಂದರ್ಭದಲ್ಲಿ ರಾಜ್‌ಕುಮಾರ ಅವರನ್ನು ವೀರಪ್ಪನ್ ಅಪಹರಿಸಿದ ಅಂದು ಟಿವಿ ಮಾಧ್ಯಮಗಳು ಅಷ್ಟೊಂದು ಪ್ರಚಲಿತದಲ್ಲಿರಲಿಲ್ಲ. ಅಷ್ಟಾದರೂ ಅಣ್ಣಾರವರ ಅಪಹರಣ ನಾಡಿನಾದ್ಯಂತ ಕಾಡ್ಗಿಚ್ಚಿನಂತೆ ಹರಡಿತ್ತು. ಆ ಸಂದರ್ಭದಲ್ಲಿ ನಾನು ಕರ್ತವ್ಯ ನಿರ್ವಹಿಸುತ್ತಿರುವಾಗ ಅಭಿಮಾನಿಗಳ ಆಕ್ರೋಶ, ಪ್ರತಿಭಟನೆಗಳು ವ್ಯಕ್ತವಾಗಿದ್ದವು. ಆ ಸಂದರ್ಭದಲ್ಲಿ ಡಾ.ರಾಜ್ ಅವರ ಸರಳ ಸಜ್ಜನಿಕೆ, ಸ್ವಭಾವದ ಬಗ್ಗೆ ಜನರಿಗೆ ತಿಳಿಸಿ ಹೇಳಿದಾಗ ಅಭಿಮಾನಿಗಳು ಶಾಂತರಾಗಿದ್ದರು ಎಂದರು.

ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಭಾರಿ ಸಹಾಯಕ ನಿರ್ದೇಶಕಿ ಕಸ್ತೂರಿ ಪಾಟೀಲ, ರಾಜೇಶ್ವರಿ ದೇಶಪಾಂಡೆ, ವಿನಾಯಕ ದಂಡಗಿ, ರಾಮಚಂದ್ರ ಪೂಜಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಹಾನ್ ನಾಯಕರ ವ್ಯಕ್ತಿತ್ವ ವಿದ್ಯಾರ್ಥಿಗಳಿಗೆ ಸ್ಫೂರ್ತಿ-ಶ್ರೀಲತಾ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.24-ದೇಶದ ಮಹಾನ್ ನಾಯಕರ ವ್ಯಕ್ತಿತ್ವ ಸ್ಫೂರ್ತಿದಾಯಕವಾಗಿದ್ದು, ವಿದ್ಯಾರ್ಥಿಗಳು ಸಕಾರಾತ್ಮಕ ಚಿಂತನೆಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಬಸವೇಶ್ವರ ಇಂಜಿನಿಯರಿಂಗ್ ಕಾಲೇಜ್ ನಿವೃತ್ತ ಪ್ರಾಧ್ಯಾಪಕರಾದ ಶ್ರೀಲತಾ ರಾವ್ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ವೃತ್ತಿ ಮಾರ್ಗದರ್ಶನ ಹಾಗೂ ಉದ್ಯೋಗ ಘಟಕ ಹಾಗೂ ಅಮೃತ ಪ್ರತಿಷ್ಠಾನ ಮಾನವ ಸಂಪನ್ಮೂಲ ಅಭಿವೃದ್ಧಿ ಘಟಕ ಬಾಗಲಕೋಟೆ ಇವರ ಸಹಯೋಗದಲ್ಲಿ ನಡೆದ ವ್ಯಕ್ತಿತ್ವ ವಿಕಸನ ಕಾರ್ಯಗಾರದಲ್ಲಿ ಉಪನ್ಯಾಸಕರಾಗಿ ಅವರು ಮಾತನಾಡಿದರು.

ಮಾನವನ ಶರೀರ ಅಪ್ರತಿಮ ಶಕ್ತಿಯಿಂದ ಕೂಡಿದ್ದು ಆ ಶಕ್ತಿಯನ್ನು ಬಳಸಿಕೊಂಡು ತಮ್ಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳುವುದು ಜೀವನದ ಒಂದು ಕಲೆ. ದೇಶದ ಮಹಾನ್ ನಾಯಕರ ವ್ಯಕ್ತಿತ್ವ ನಿಮಗೆ ಸ್ಪೂರ್ತಿಯಾಗಲಿ. ಸಕಾರಾತ್ಮಕ ಆಲೋಚನೆಗಳೊಂದಿಗೆ ವಿದ್ಯಾರ್ಥಿಗಳು ಯಾವತ್ತೂ ಸಮಯಕ್ಕೆ ಮಹತ್ವ ಕೊಡಬೇಕೆಂದರು.

ಮುಖ್ಯ ಅತಿಥಿ ಎಸ್.ಆರ್.ನರಸಾಪುರ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಡಾ.ಎಸ್.ವಿ.ಪರ್ವತಿಕರ ಮಾತನಾಡಿ, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ನಾಲ್ಕು ಮುಖ್ಯ ಸಂಗತಿಗಳು ಅವಶ್ಯಕವಾಗಿವೆ. ಅವು ಆತ್ಮವಿಶ್ವಾಸ, ಏಕಾಗ್ರತೆ, ಸಮರ್ಪಣೆ, ಸೃಜನಶೀಲತೆ ಇವುಗಳಿಂದ ವಿದ್ಯಾರ್ಥಿಗಳ ಬದುಕು ಸುಂದರವಾಗಿ ನಿರ್ಮಾಣ ಮಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯೆ ಎಸ್.ಜೆ.ಒಡೆಯರ್, ನಿಸರ್ಗದ ಪ್ರತಿಯೊಂದು ಜೀವಿಯಲ್ಲಿಯೂ ಒಂದೊಂದು ಕಲೆ ಇದೆ ಅದರಲ್ಲಿಯೂ ಮನುಷ್ಯ ಅತ್ಯಂತ ಬುದ್ಧಿವಂತನಾದ ಜೀವಿ. ತನ್ನಲ್ಲಿರುವ ಜ್ಞಾನ ಸಾಮರ್ಥ್ಯವನ್ನು ಬಳಸಿಕೊಂಡು ತನ್ನ ವ್ಯಕ್ತಿತ್ವವನ್ನು ವಿಕಸನಗೊಳಿಸಿ ವಿಶೇಷವಾದ ಕಲೆಗಳ ಮೂಲಕ ತನ್ನ ಬದುಕನ್ನು ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಕಸ್ತೂರಿ ತುರುಡಗಿ ಪ್ರಾರ್ಥಿಸಿದರು, ಪಿ.ಕೆ.ಚೌಗಲಾ ಸ್ವಾಗತಿಸಿದರು, ಸಂಯೋಜಕಿ ಸೀಮಾ ಚಾವುಸ್, ಪೂಜಾ ಅರಕಸಾಲಿ ನಿರೂಪಿಸಿದರು.

# ಕೌಶಲಗಳನ್ನು ಬಳಸಿಕೊಂಡು ಯಶಸ್ವಿ ಉದ್ಯಮಿಗಳಾಗಬೇಕು-ಪ್ರೊ.ನಾವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.24-ಎಲ್ಲರಲ್ಲೂ ಉದ್ಯಮಶೀಲತಾ ಕೌಶಲ್ಯಗಳು ಇರುತ್ತವೆ. ಸ್ವಸಾಮರ್ಥ್ಯದಿಂದ ಅವುಗಳನ್ನು ಬಳಸಿಕೊಂಡು ಯಶಸ್ವಿ ಉದ್ಯಮಿಗಳಾಗಲು ಪ್ರಯತ್ನಿಸಬೇಕು ಎಂದು ಬೆಳಗಾವಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಪಂಡಿತ್ ದೀನದಯಾಳ್ ಉಪಾಧ್ಯಾಯ ಅಧ್ಯಯನ ಪೀಠದ ನಿರ್ದೇಶಕ ಪ್ರೊ.ಬಿ.ಎಸ್.ನಾವಿ ಹೇಳಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿಯ ಪಂಡಿತ್ ದೀನದಯಾಳ್ ಉಪಾಧ್ಯಾಯ ಅಧ್ಯಯನ ಪೀಠ, ಲಘು ಉದ್ಯೋಗ ಭಾರತಿ, ಕರ್ನಾಟಕ ಮತ್ತು ಬಿ.ವಿ.ವಿ. ಸಂಘದ ಬಾಗಲಕೋಟೆಯ ಬಸವೇಶ್ವರ ವಾಣಿಜ್ಯ ಕಾಲೇಜಿನ Institution's Innovation Council(IIC)&Incubation Centre ಸಹಯೋಗದಲ್ಲಿ ನಡೆದ ಉದ್ಯಮಶೀಲತಾ ಸಾಮರ್ಥ್ಯದ ಅರಿವು ಮೂಡಿಸುವಿಕೆ ಕುರಿತ ಒಂದು ದಿನದ ಕಾರ್ಯಗಾರವನ್ನುದ್ದೇಶಿಸಿ ಮಾತನಾಡಿದ ಅವರು, ಉದ್ಯಮಶೀಲತೆಯ ಕೇಂದ್ರೀಕರಣದ ಅತ್ಯಂತ ವಿಸ್ತಾರವಾದ ಉದ್ಯಮಶೀಲತೆಗೆ ನಿಮ್ಮ ನಿರ್ದಿಷ್ಟ ಆಸಕ್ತಿಗಳನ್ನು ಬೆಳೆಸಿಕೊಳ್ಳಬೇಕು. ನಿಮ್ಮದೇ ಆದ ಉದ್ಯೋಗ ಸಾಮರ್ಥ್ಯ ವಿನ್ಯಾಸಕ್ಕೆ ಉತ್ಸಾಹ, ಶಿಸ್ತು, ಸಮಯಪ್ರಜ್ಞೆ ಅತಿ ಅವಶ್ಯಕ ಎಂದು ಎಂದರು.

ಕರ್ನಾಟಕದ ಲಘು ಉದ್ಯೋಗ ಭಾರತೀಯ ರಾಜ್ಯ ಕಾರ್ಯದರ್ಶಿ ಡಾ.ಪ್ರಿಯಾ ಪುರಾಣಿಕ ಮುಖ್ಯ ಅತಿಥಿಗಳಾಗಿ ಮಾತನಾಡಿ, ಆವಿಷ್ಕಾರ ಮತ್ತು ಅಭ್ಯಾಸದ ಮೂಲಕ ಉದ್ಯಮಶೀಲವಾಗಿ ಯೋಚಿಸುವ ಮತ್ತು ಕಾರ್ಯನಿರ್ವಹಿಸುವ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಹೊಸ ವ್ಯಾಪಾರ ಅವಕಾಶಗಳನ್ನು ಹೇಗೆ ಪರಿಚಯಿಸುತ್ತಾರೆ ಎಂಬುದನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಗಾರದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಜಗನ್ನಾಥ ಚವ್ಹಾಣ ಮಾತನಾಡಿದರು. ಸಂಪನ್ಮೂಲ ವ್ಯಕ್ತಿ ಬಾಗಲಕೋಟೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕ ಪ್ರಶಾಂತ್ ಬಾರಿಗಿಡದ ಸರ್ಕಾರದ ಉದ್ಯೋಗ ಯೋಜನೆ ಮತ್ತು ಸವಲತ್ತುಗಳನ್ನು ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಡಾ.ಶಿವಲಿಂಗಯ್ಯ.ಎಸ್.ಗೋಥೆ, ಐ.ಕ್ಯೂ.ಎ.ಸಿ ಸಂಯೋಜಕಿ ಗಿರಿಜಾ ನಾವದಗಿ, ಐ.ಸಿ.ಸಿ ಸಂಯೋಜಕ ರಾಮಕೃಷ್ಣ ತ್ಯಾಪಿ ಉಪಸ್ಥಿತರಿದ್ದರು. ಬಾರ್ಸಿ ಶೀತಲ್ ನಿರೂಪಿಸಿದರು. ಕೆ.ಜೆ.ಮಲಜಿ ವಂದಿಸಿದರು.



ಭಾಲ್ಕಿ: ಪಟ್ಟಣದ ಮಹಾತ್ಮ ಗಾಂಧಿ ವೃತ್ತ ಬಳಿ ಕಾಶ್ಮೀರನ ಪಹಲ್ಗಾಮ್ ಬಳಿಯ ಬೈಸರನ್ ಕಣಿವೆಯಲ್ಲಿ ಉಗ್ರರ ದಾಳಿಯಲ್ಲಿ ಮೃತಪಟ್ಟವರ ಆತ್ಮಕ್ಕೆ ಶಾಂತಿ

ಕೋರಿ ವಿಶ್ವ ಹಿಂದೂ ಪರಿಷತ್ ವತಿಯಿಂದ ಮೇಣದ ಬತ್ತಿಯನ್ನು ಬೆಳಗಲಾಯಿತು. ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದೇವರು ವಿಶ್ವ ಹಿಂದೂ ಪರಿಷತ್ ಪ್ರಮುಖರಾದ ಶಿವು ಲೋಖಂಡೆ, ಸಾಗರ್ ಮಾಲಾನಿ, ಸೋಮನಾಥಪ್ಪ ಅಷ್ಟೂರೆ, ಕಿರಣ ಖಂಡ್ರೆ, ಚನ್ನಬಸವಣ್ಣ ಬಳತೆ, ಜೈಕಿಶನ್ ಬಿಯಾನಿ, ಮೀನಾಕ್ಷಿ ತಾಯಿ ಬಿರಾದರ, ಸುನೀತಾ ಮೀನಕೆರೆ, ಶ್ರೀನಾಥ ಹೆಡ್ಡಾ, ಅಮರ ಜೋಳದಪಕೆ, ರಾಹುಲ್ ವಾಡೆಕರ್ ಇದ್ದರು.

# ನಾಳೆ ತುಳಸಿಗೇರಿಯಲ್ಲಿ ಮಲ್ಲಕಂಬ ಸ್ಪರ್ಧೆಗೆ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.24-ಬಿಹಾರ ರಾಜ್ಯದ ಭೋದಗಯಾದಲ್ಲಿ ಮೇ 4 ರಿಂದ 15 ವರೆಗೆ ನಡೆಯಲಿರುವ ರಾಷ್ಟ್ರ ಮಟ್ಟದ ಖೇಲೋ ಇಂಡಿಯಾ ಯೂತ್ ಗೇಮ್ಸ್‌ಗೆ ಮಲ್ಲಕಂಬ ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯ ತಂಡವನ್ನು ಆಯ್ಕೆ ಮಾಡಲು ಎಪ್ರೀಲ್ 26 ರಂದು ತುಳಸಿಗೇರಿಯಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತಿದೆ.

ಆಸಕ್ತ ಮಲ್ಲಕಂಬ ಕ್ರೀಡಾಪಟುಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಅಂದು ಬೆಳಿಗ್ಗೆ 9 ಗಂಟೆಗೆ ಹಾಜರಾಗಬೇಕು. ಭಾಗವಹಿಸುವ ಯುವಕ, ಯುವತಿಯರು ಜನವರಿ 1, 2007ರ ನಂತರ ಜನಿಸಿರಬೇಕು. ಕರ್ನಾಟಕ ರಾಜ್ಯದವರಾಗಿದ್ದು, ಆಧಾರ ಕಾರ್ಡ ಕಡ್ಡಾಯವಾಗಿ ಹಾಜರುಪಡಿಸಬೇಕು. ಜನ್ಮದಾಖಲೆ, ಶಾಲಾ ದಾಖಲಾತಿ ಪ್ರಕಾರ ತರುವುದು ಕಡ್ಡಾಯವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಾಗಲಕೋಟೆ ದೂರವಾಣಿ ಸಂಖ್ಯೆ 08354-235896, 9945537128ಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಪಹಲ್ಗಾಮ್ ಭಯೋತ್ಪಾದಕರ ದಾಳಿ ಖಂಡನೀಯ: ನಮಾಜಕಟ್ಟಿ

ಮಲ್ಲಮ್ಮ ನುಡಿ ವಾರ್ತೆ



ತಾಳಿಕೋಟಿ: ಜಮ್ಮು-ಕಾಶ್ಮೀರದ ಪಹಲ್ಗಾಮ್ ನಲ್ಲಿ ಸಂಭವಿಸಿದ ಭಯಾನಕ ದುರಂತವನ್ನು ಜಮಾತೆ ಇಸ್ಲಾಮಿ ಹಿಂದ್ ನಗರ ಶಾಖೆಯ ಅಧ್ಯಕ್ಷ ಮುಜಾಹೀದ ನಮಾಜಕಟ್ಟಿ ಕಟುವಾಗಿ ಖಂಡಿಸಿದ್ದಾರೆ. ಘಟನೆ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಅವರು ಈ ಘಟನೆಯಲ್ಲಿ ಮಡಿದ ಅಮಾಯಕ ಹಾಗೂ ನಿರಪರಾಧಿಗಳ ಪರವಾಗಿ ದೇವರಲ್ಲಿ ಪ್ರಾರ್ಥಿಸುತ್ತ ಈ ಸಂದರ್ಭದಲ್ಲಿ ಮೃತರ ಕುಟುಂಬಕ್ಕೆ ಈ ನೋವನ್ನು ಸಹಿಸುವ ಶಕ್ತಿ ಹಾಗೂ ಸಾಮರ್ಥ್ಯವನ್ನು ದೇವನು ದಯಪಾಲಿಸಲಿ ಎಂದು ಹೇಳಿ ಸರ್ಕಾರವು ಸಂತ್ರಸ್ತರಿಗೆ ಎಲ್ಲ ರೀತಿಯ ನೆರವು ಮತ್ತು ಸಹಾಯವನ್ನು ಒದಗಿಸಬೇಕು, ಜೊತೆಗೆ ಈ ಹೇಯ ಹಾಗೂ ಅಮಾನವೀಯ ಕೃತ್ಯ ಎಸಗಿದ ಮಾನವ ವಿರೋಧಿ ಶಕ್ತಿಗಳಿಗೆ ಕಠಿಣ ಶಿಕ್ಷೆಯನ್ನು ನೀಡಿ ಮುಂದೆ ಇಂತಹ ಘಟನೆ ಸಂಭವಿಸಿದಂತೆ ಎಚ್ಚರಿಕೆ ವಹಿಸಬೇಕು ಎಂದು ಅವರು ತಿಳಿಸಿದರು. ಇದೇ ವೇಳೆ ಭದ್ರತಾ ಪಡೆಯಿಂದ ಸಂಭವಿಸಿದ ವೈಫಲ್ಯ ಹಾಗೂ ನಿರ್ಲಕ್ಷದ ಕುರಿತು ಪಾರದರ್ಶಕ ತನಿಖೆ ನಡೆಸಬೇಕು. ಇಂತಹ ಸಂಕಷ್ಟದ ಪರಿಸ್ಥಿತಿಯಲ್ಲಿ ತಾಳ್ಮೆ ಹಾಗೂ ಸಯಂಮ ಕಾಪಾಡುತ್ತಾ ಶಾಂತಿ ಮತ್ತು ಸಾಮರ್ಥ್ಯವನ್ನು ಸ್ಥಾಪಿಸುವುದು ನಮ್ಮೆಲ್ಲರ ಹೊಣೆಗಾರಿಕೆ ಆಗಿದೆ ಎಂದು ಅವರು ತಿಳಿಸಿದರು.

# ಡಾ.ರಾಜ್ ಗೀತೆಗಳ ಗಾಯನ ಸ್ಪರ್ಧೆ-ಅಂಜಲಿ ಪ್ರಥಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.24-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಡಾ.ರಾಜಕುಮಾರ ಜನ್ಮ ದಿನಾಚರಣೆ ಅಂಗವಾಗಿ ಗುರುವಾರ ಡಾ.ರಾಜ್ ಗೀತೆಗಳ ಗಾಯನ ಸ್ಪರ್ಧೆ ನಡೆಸಲಾಯಿತು.

ಸ್ಪರ್ಧೆಯಲ್ಲಿ ಅಂಜಲಿ ಕೋವಳ್ಳಿ (ಪ್ರಥಮ), ಜಗದೀಶ ಭಜಂತ್ರಿ (ದ್ವಿತೀಯ) ಹಾಗೂ ಮಹಾಲಿಂಗ ಮೇಗಾಡಿ (ತೃತೀಯ) ಸ್ಥಾನ ಪಡೆದುಕೊಂಡಿದ್ದಾರೆ. ಮಹಾಂತೇಶ ಪಟ್ಟಣಶೆಟ್ಟಿ, ಬಸಪ್ಪ ಕಳ್ಳಿಗುಡ್ಡ, ಕಾವ್ಯ ಕೋವಳ್ಳಿ, ಶರಣಪ್ಪ ಜಾಲಿಹಾಳ, ಮಂಜುನಾಥ ಮುಸರಿ, ದುಂಡಪ್ಪ ಗೌಡರ, ರಾಜೇಶ್ವರಿ ಗೌಡರ ಸಮಾಧಾನಕರ ಬಹುಮಾನ ಪಡೆದುಕೊಂಡಿದ್ದಾರೆಂದು ಜಿಲ್ಲಾ ವಾರ್ತಾಧಿಕಾರಿ ಕಸ್ತೂರಿ ಪಾಟೀಲ ತಿಳಿಸಿದ್ದಾರೆ.

# ರಸ್ತೆ ನಿರ್ಮಾಣ: ಸಂಸದರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 24 :- ನಗರದ ನೌಬಾದ್ ಸಮೀಪದ ಕೆ.ಇ.ಬಿ. ಹಾಗೂ ಸಹ್ಯಾದ್ರಿ ಬಡಾವಣೆಗಳಿಗೆ ರಸ್ತೆ ನಿರ್ಮಿಸಬೇಕು ಎಂದು ಬಡಾವಣೆ ನಿವಾಸಿಗಳು ಮನವಿ ಮಾಡಿದ್ದಾರೆ.

ಭಾಲ್ಕಿಯಲ್ಲಿ ಗುರುವಾರ ಸಂಸದ ಸಾಗರ್ ಖಂಡ್ರೆ ಅವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿದರು.

ಎರಡೂ ಬಡಾವಣೆಗಳಲ್ಲಿ 200 ರಿಂದ 250 ಮನೆಗಳು ಇವೆ.



ಆದರೆ, ಬಡಾವಣೆಗಳಿಗೆ ರಸ್ತೆ ಇಲ್ಲ. ಹೀಗಾಗಿ ಸಂಚಾರಕ್ಕೆ ತೊಂದರೆ-ಯಾಗುತ್ತಿದೆ. ಮಳೆಗಾಲದಲ್ಲಿ ಸಮಸ್ಯೆ ಹೇಳತೀರದ್ದಾಗಿದೆ ಎಂದು ಗಮನ ಸೆಳೆದರು.

ರಸ್ತೆ ನಿರ್ಮಿಸಬೇಕು. ಕೆ.ಇ.ಬಿ. ಬಡಾವಣೆಯ ಜಗಜ್ಯೋತಿ ಬಸವೇಶ್ವರ ಉದ್ಯಾನಕ್ಕೆ ಸೌಕರ್ಯ ಕಲ್ಪಿಸಬೇಕು ಎಂದು ಕೋರಿದರು.

ಬಡಾವಣೆಯ ರಮೇಶ ಚಿದ್ರಿ, ವೀರಶೆಟ್ಟಿ ಚನಶೆಟ್ಟಿ, ವೈಜಿನಾಥ ಬಾವಗೆ, ಶಿವರಾಜ ರಟಕಲೆ, ಮಲ್ಲಿಕಾರ್ಜುನ ಗಂಗು, ವಿಷ್ಣುಕಾಂತ ಬಾಜೋಳಗೆ ಇದ್ದರು.

# ಚುನಾಯಿತ ಪ್ರತಿನಿಧಿಗಳು ಮತ್ತು ಅಧಿಕಾರಿಗಳು ಜಂಟಿಯಾಗಿ ಪಂಚಾಯತ್‌ರಾಜ್ ವ್ಯವಸ್ಥೆಯ ಬೇರುಗಳನ್ನು ಗಟ್ಟಿಗೊಳಿಸಬೇಕು:ಡಾ. ಗಿರೀಶ ಬದೋಲೆ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಏ.24: ಭಾರತದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳಿಗೆ ವಿಶೇಷಹಾಗೂ ಮಹತ್ವದ ಸ್ಥಾನವಿದೆ. ಮಹಾತ್ಮಗಾಂಧಿಯವರ ಆಶಯದಂತೆ ಗ್ರಾಮಸ್ವರಾಜ್ ನಿರ್ಮಾಣವಾಗಬೇಕಾದರೆ ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿ ಆಗಬೇಕಾಗುತ್ತದೆ.ಗಾಂಧೀಜಿಯವರು 'ಭಾರತವು ಗ್ರಾಮಗಳಲ್ಲಿದೆ' ಎನ್ನುತ್ತಿದ್ದರು. ಗಾಂಧೀಜಿಯವರ ಆಶಯವನ್ನು ನಮ್ಮ ಸಂವಿಧಾನದ ರಾಜನಿರ್ದೇಶಕ ತತ್ವಗಳಲ್ಲಿ ಅಡಕಗೊಳಿಸಿದ್ದು ಸಂವಿಧಾನದ 73ನೇಯ ತಿದ್ದುಪಡಿಯಂತೆ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಪರಮಾಧಿಕಾರ ನೀಡಲಾಗಿದೆ' ಎಂದು ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ ತಿಳಿಸಿದರು.

ಅವರು ಗುರುವಾರದಂದು ಬೀದರ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಮ್ಮ ಸಂವಿಧಾನದ 73 ಮತ್ತು 74 ನೇ ತಿದ್ದುಪಡಿಗಳು ಪಂಚಾಯತ್ ರಾಜ್ ಮತ್ತು ನಗರಸ್ಥಳೀಯ ಸಂಸ್ಥೆಗಳಿಗೆ ಬಲತುಂಬಿದ್ದು 73ನೇ ತಿದ್ದುಪಡಿಯಂತೆ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳನ್ನು ಸ್ಥಾಪಿಸಿದ್ದು ಪ್ರತಿಹಂತದ ಪಂಚಾಯತ್ ರಾಜ್ ಸಂಸ್ಥೆಗೆ ಅದರದ್ದೆ ಆದ ಜವಾಬ್ದಾರಿ ನಕ್ಷೆಯನ್ನು ನೀಡಲಾಗಿದೆ. ಗ್ರಾಮಪಂಚಾಯತಿಗಳು ತಳಮಟ್ಟದ ಗ್ರಾಮರಾಜ್ ಸಂಸ್ಥೆಗಳಾಗಿದ್ದರೆ ತಾಲೂಕಾ ಪಂಚಾಯತಿಗಳು ಗ್ರಾಮ ಪಂಚಾಯತಿಗಳೊಂದಿಗೆ ಸಮನ್ವಯಕಾರ್ಯ ನಿರ್ವಹಿಸಿದರೆ



ಜಿಲ್ಲಾ ಪಂಚಾಯತಿಗಳು ಗ್ರಾಮಪಂಚಾಯತಿಗಳು ಮತ್ತು ತಾಲೂಕಾ ಪಂಚಾಯತಿಗಳಿಗೆ ಅಗತ್ಯ ಮಾರ್ಗದರ್ಶನ, ನಿರ್ದೇಶನ ಮಾಡುವ ಕಾರ್ಯ ಮಾಡುತ್ತಿವೆ ಎಂದರು.ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಗ್ರಾಮ ಪಂಚಾಯತಿಗಳು ಅತಿಮಹತ್ವದ ಪಾತ್ರವಹಿಸುವ ಸ್ಥಳೀಯ ಗ್ರಾಮಸರ್ಕಾರಗಳಾಗಿದ್ದು ಗ್ರಾಮಸಭೆಗೆ ಸಾಂವಿಧಾನಿಕ ಮಾನ್ಯತೆ ಇದೆ. ಗ್ರಾಮ ಸಭೆಯು ಗ್ರಾಮದ ಸಂಸತ್ತು ಇದ್ದಂತೆ. ಗ್ರಾಮ ಪಂಚಾಯತಿಯ ಎಲ್ಲ ಕಾರ್ಯಕ್ರಮಗಳು ಮತ್ತು ಅಭಿವೃದ್ಧಿ ಯೋಜನೆಗಳು ಗ್ರಾಮಸಭೆಯಲ್ಲಿ ಚರ್ಚಿಸಿ ಅನುಮೋದನೆಗೊಳ್ಳುತ್ತಿರುವುದರಿಂದ ಗ್ರಾಮದ ಧ್ವನಿ ಅಲ್ಲಿ ಕೇಳುತ್ತದೆ. ಗ್ರಾಮೀಣ ಪ್ರದೇಶದ ಜನತೆಯ ಆಶೋತ್ತರಗಳು ಗ್ರಾಮಸಭೆಯ ಮೂಲಕ ಅಭಿವ್ಯಕ್ತಿಗೊಂಡು ಯೋಜನೆಯ ರೂಪ ತಾಳುತ್ತವೆ. ಇಂತಹ ಮಹತ್ವದ ಪಾತ್ರವಹಿಸುವ ಗ್ರಾಮಸಭೆ ಮತ್ತು ಗ್ರಾಮ ಪಂಚಾಯತಿಗಳನ್ನು ಚುನಾಯಿತ ಜನಪ್ರತಿನಿಧಿಗಳು ಮತ್ತು ಸರಕಾರಿ ಅಧಿಕಾರಿಗಳು ಸೇರಿ ಬಲಬಡಿಸಬೇಕಿದೆ. ಚುನಾಯಿತ ಪ್ರತಿನಿಧಿಗಳು ಮತ್ತು ಸರಕಾರಿ ಅಧಿಕಾರಿಗಳು ಪಂಚಾಯತ್ ರಾಜ್ ವ್ಯವಸ್ಥೆಯೆಂಬ ರಥದ ಎರಡು ಚಕ್ರಗಳಿದ್ದಂತೆ, ಅವರಿಬ್ಬರು ಪರಸ್ಪರ ಪೂರಕವಾಗಿ ನಡೆಯಬೇಕು' ಎಂದರು.ಬೀದರ ಜಿಲ್ಲಾ ಪಂಚಾಯತಿಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ತಂಡವು ಉತ್ತಮ ಕಾರ್ಯ ನಿರ್ವಹಿಸುತ್ತಿರುವ ಮೂಲಕ ಬೀದರ ಜಿಲ್ಲೆಯು ನರೇಗಾ, ವಸತಿ, ಎಸ್ ಬಿ ಎಮ್ ಮತ್ತು ತೆರಿಗೆ ವಸೂಲಾತಿಯಲ್ಲಿ ರಾಜ್ಯದ ಅಗ್ರ ಜಿಲ್ಲೆಗಳಲ್ಲಿ ಒಂದಾಗಿದ್ದು ಒಂದರಿಂದ ಐದನೇ ಸ್ಥಾನದಲ್ಲಿದೆ. ಇದೇ ರೀತಿ ಮುಂದುವರೆಯೋಣ ' ಎಂದು ಆಶಿಸಿ, ಪಂಚಾಯತ್ ರಾಜ್ ದಿನಾಚರಣೆಯ ಪ್ರಯುಕ್ತ ಕೇಕ್ ಕತ್ತರಿಸಿ ಜಿಪಂಯ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ಕೇಕ್ ನೀಡುವ ಮೂಲಕ ದಿನಾಚರಣೆಗೆ ಮೆರುಗು ನೀಡಿದರು.

ಪಿಡಿಒ ಸ್ವರೂಪಾರಾಣಿ ಮಾತನಾಡಿ, ಗ್ರಾಮೀಣಾಭಿವೃದ್ಧಿಯಲ್ಲಿ ಗ್ರಾಮ ಸಭೆಗಳು, ವಾರ್ಡ್ ಸಭೆಗಳ ಮಹತ್ವವನ್ನು ಒತ್ತಿ ಹೇಳಿದರು. ಯೋಜನಾಶಾಖೆಯ ಸಹಾಯಕ ಸಾಂಖಿಕ ಅಧಿಕಾರಿ ರತಿಕಾಂತ ಮಾತನಾಡಿ ಪಂಚಾಯತ್ ರಾಜ್ ಸಂಸ್ಥೆಗಳು ಬೆಳೆದು ಬಂದ ಬಗೆಯನ್ನು ವಿವರಿಸಿದರು. ಉಪಕಾರ್ಯದರ್ಶಿ ಮುಕ್ಕಣ್ಣಕರಿಗಾರ,ಯೋಜನಾನಿರ್ದೇಶಕ ಜಗನ್ನಾಥ ಮೂರ್ತಿ, ಪಿಆರ್‌ಇಡಿ ಮತ್ತು ಗ್ರಾಮೀಣ ಕುಡಿಯುವ ನೀರು ಯೋಜನೆಯ ಕಾರ್ಯಪಾಲಕ ಅಭಿಯಂತರರುಗಳಾದ

ಶಿವಾಜಿ ಡೋಣಿ, ರಾಮಲಿಂಗ ಬಿರಾದರ,ಸಹಾಯಕ ಕಾರ್ಯದರ್ಶಿ ಬೀರೇಂದ್ರಸಿಂಗ್,ಸಹಾಯಕ ನಿರ್ದೇಶಕ ಜಯಪ್ರಕಾಶ ಚೌಹಾಣ ಸೇರಿದಂತೆ ಜಿಪಂಯ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಉಪಸ್ಥಿತರಿದ್ದರು.

ಅಭಿವೃದ್ಧಿ ಶಾಖೆಯ ಅಧೀಕ್ಷಕ ಮಹ್ಮದ್ ಬಶೀರ್ ಸ್ವಾಗತಿಸಿ,ಕಾರ್ಯಕ್ರಮ ನಿರ್ವಹಿಸಿದರು.

ಕಾರ್ಯಕ್ರಮದ ಪ್ರಾರಂಭದಲ್ಲಿ ಕಾಶ್ಮೀರದ ಪಹಲ್ ಗಾಂವ್ ನಲ್ಲಿ ಉಗ್ರಗಾಮಿಗಳ ಗುಂಡೇಟಿಗೆ ಬಲಿಯಾಗಿ ಮೃತಪಟ್ಟವರ ಆತ್ಮಗಳಿಗೆ ಒಂದು ನಿಮಿಷ ಮೌನಾಚರಿಸುವ ಮೂಲಕ ಶಾಂತಿ ಕೋರಲಾಯಿತು.

## ರಾಜ್ಯದಲ್ಲಿ ಅವಧಿ ಮೀರಿ ನೆಲೆಸಿರುವ ವಿದೇಶಿಗರ ಬಗ್ಗೆ ನಿಗಾ ವಹಿಸಲು ಸಿಎಂ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಚಾಮರಾಜನಗರ:ಏ.24:ಭಾರತದಲ್ಲಿ ನೆಲೆಸಿರುವ ವಿದೇಶಿಗರ ಬಗ್ಗೆ ನಿಗಾ ವಹಿಸಲು ಕೇಂದ್ರ ಗೃಹ ಇಲಾಖೆ ರಾಜ್ಯಗಳಿಗೆ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಅವಧಿ ಮೀರಿ ನೆಲೆಸಿರುವ ವಿದೇಶಿಗರ ಬಗ್ಗೆ ಎಚ್ಚರಿಕೆಯಿಂದ ಇರುವಂತೆ ಗೃಹ ಇಲಾಖೆಗೆ ಸೂಚನೆ ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ತಿಳಿಸಿದ್ದಾರೆ.

ಏಪ್ರಿಲ್ 22 ರಂದು ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ನಡೆದ ಮಾರಕ ಭಯೋತ್ಪಾದಕ ದಾಳಿಯಲ್ಲಿ ಇಬ್ಬರು ವಿದೇಶಿಗಳು ಸೇರಿ 26 ಜನರು ಸಾವಿಗೀಡಾಗಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ. ಉಗ್ರರು ನಡೆಸಿದ ಈ ದಾಳಿಯು, 2019ರ ಪುಲ್ವಾಮಾ ದಾಳಿಯ ನಂತರ ಕಣಿವೆಯಲ್ಲಿ ನಡೆದ ಅತ್ಯಂತ ಭೀಕರ ದಾಳಿಗಳಲ್ಲಿ ಒಂದಾಗಿದೆ.

ಮಲೆ ಮಹದೇಶ್ವರ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಗ್ರರು ಯಾವುದೇ ರಾಜ್ಯದಲ್ಲಿರಲಿ ಅವರನ್ನು ಮಟ್ಟಹಾಕಬೇಕಾಗಿರುವುದು ಕೇಂದ್ರ ಸರ್ಕಾರದ ಜವಾಬ್ದಾರಿ. ಉಗ್ರರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಪಹಲ್ಗಾಮ್ ಘಟನೆ ಅತ್ಯಂತ ಹೇಯ ಹಾಗೂ ಅಮಾನುಷವಾದುದ್ದು. ಇದನ್ನು ತೀವ್ರವಾಗಿ ಖಂಡಿಸುತ್ತೇನೆ. ಪುಲ್ವಾಮಾ ಘಟನೆಯೂ ಇದೇ ಜಿಲ್ಲೆಯಲ್ಲಿ ನಡೆದಿದ್ದರಿಂದ ಎಚ್ಚರಿಕೆಯಿಂದ ಇರಬೇಕಾಗಿತ್ತು. ಗುಪ್ತಚರ ವ್ಯವಸ್ಥೆಯ ವೈಫಲ್ಯವಾಗಿದೆ ಎನ್ನುವುದು ಮೇಲ್ನೋಟಕ್ಕೆ ಗೊತ್ತಾಗುತ್ತದೆ. ಘಟನೆ ನಡೆದ ಬಳಿಕ ಕ್ರಮ ತೆಗೆದುಕೊಳ್ಳುವುದು ಬೇರೆ. ಘಟನೆಯಾಗದಂತೆ ತೆಗೆದುಕೊಳ್ಳುವ ಕ್ರಮಗಳು ಬೇರೆ. ಅದನ್ನು ಕೇಂದ್ರ ಸರ್ಕಾರ ಮಾಡಬೇಕಿತ್ತು ಎಂದಿದ್ದಾರೆ.

ಪುಲ್ವಾಮಾದಲ್ಲಿ 40 ಸೈನಿಕರು ಪ್ರಾಣತೆತ್ತರು. ಈ ಘಟನೆಯಲ್ಲಿ 28 ಜನ ನಾಗರಿಕರು ಮೃತರಾಗಿದ್ದಾರೆ. ಇದನ್ನು ತಪ್ಪಿಸಲು ಕ್ರಮ ವಹಿಸಬೇಕಿತ್ತು.



ಇಂಥ ಘಟನೆ ಮರುಕಳಿಸದಂತೆ ಎಚ್ಚರ ವಹಿಸಬೇಕು. ಉಗ್ರರು ಯಾವುದೇ ಧರ್ಮಕ್ಕೆ ಸೇರಿರಲಿ ಅವರೆಲ್ಲರನ್ನೂ ಮಟ್ಟ ಹಾಕಬೇಕಿರುವುದು ಕೇಂದ್ರ ಸರ್ಕಾರದ ಜವಾಬ್ದಾರಿ. ಅದಕ್ಕೆ ಬೇಕಾಗಿರುವ ಎಲ್ಲ ಸಹಕಾರ, ಬೆಂಬಲವನ್ನು ನಾವು ನೀಡುತ್ತೇವೆ ಎಂದರು.ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಿಎಂ, ಕೇಂದ್ರ ಸರ್ಕಾರ ಅಗತ್ಯ ಅನುಮೋದನೆಗಳನ್ನು ನೀಡಿದ ತಕ್ಷಣ ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಯೋಜನೆಯನ್ನು ಕಾರ್ಯಗತಗೊಳಿಸಲು ತಮ್ಮ ಸರ್ಕಾರ ಸಿದ್ಧವಾಗಿದೆ ಎಂದು ಹೇಳಿದರು.'ನಾವು ಮೇಕೆದಾಟು ಯೋಜನೆಯನ್ನು ಕಾರ್ಯಗತಗೊಳಿಸಲು ಸಿದ್ಧರಿದ್ದೇವೆ. ಕೇಂದ್ರ ಸರ್ಕಾರ ಅದನ್ನು ಅನುಮೋದಿಸಬೇಕು. ಅನುಮೋದನೆ ಸಿಕ್ಕರೆ, ನಾಳೆಯೇ ಅನುಷ್ಠಾನವನ್ನು ಪ್ರಾರಂಭಿಸುತ್ತೇವೆ. ಈ ವಿಷಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದರೂ ಯಾವುದೇ ಪ್ರಗತಿ ಕಂಡುಬಂದಿಲ್ಲ' ಎಂದು ಹೇಳಿದರು.ಮೇಕೆದಾಟು ಯೋಜನೆಯು ಕರ್ನಾಟಕ ಪ್ರಸ್ತಾಪಿಸಿದ ಬಹುಪಯೋಗಿ (ಕುಡಿಯುವ ನೀರು ಮತ್ತು ವಿದ್ಯುತ್) ಯೋಜನೆಯಾಗಿದೆ. ಇದು ರಾಮನಗರ ಜಿಲ್ಲೆಯ ಕನಕಪುರ ಬಳಿ 67.16 ಟಿಎಂಸಿ ಅಡಿ ಸಾಮರ್ಥ್ಯದ ಜಲಾಶಯವನ್ನು ನಿರ್ಮಿಸುವುದನ್ನು ಒಳಗೊಂಡಿದೆ.

ರಾಜ್ಯದ ನೀರಿನ ಹಂಚಿಕೆಯ ಮೇಲೆ ಪರಿಣಾಮ ಬೀರಬಹುದು ಎಂಬ ಕಳವಳವನ್ನು ಉಲ್ಲೇಖಿಸಿ ತಮಿಳುನಾಡು ಈ ಯೋಜನೆಯನ್ನು ವಿರೋಧಿಸಿದೆ.ಕರ್ನಾಟಕ ಅಧಿಕಾರಿಗಳ ಪ್ರಕಾರ, ಈ ಯೋಜನೆ ಪೂರ್ಣಗೊಂಡ ನಂತರ, ಬೆಂಗಳೂರು ಮತ್ತು ಹತ್ತಿರದ ಪ್ರದೇಶಗಳಿಗೆ 4.75 ಟಿಎಂಸಿ ಅಡಿ ಕುಡಿಯುವ ನೀರನ್ನು ಪೂರೈಸುವ ಮತ್ತು 400 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುವ ಗುರಿಯನ್ನು ಹೊಂದಿದೆ.

ಕೇಂದ್ರವು ರಾಜ್ಯದ ಪಾಲಿನ ಹಣವನ್ನು ಹೆಚ್ಚಾಗಿ ತಡೆಹಿಡಿಯುತ್ತದೆ ಎಂದು ಆರೋಪಿಸಿದ ಸಿಎಂ, ಘೋಷಿಸಿದ ಅನುದಾನವನ್ನು ಸಹ ಬಿಡುಗಡೆ ಮಾಡುತ್ತಿಲ್ಲ ಎಂದು ಹೇಳಿದರು.

'2023–24ರಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ.ಗಳನ್ನು ಘೋಷಿಸಲಾಗಿತ್ತು. ಆದರೆ, ಒಂದು ರೂಪಾಯಿಯನ್ನೂ ಬಿಡುಗಡೆ ಮಾಡಿಲ್ಲ. ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದಾಗ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಮ್ಮ ಬಜೆಟ್ ಭಾಷಣದಲ್ಲಿ ಇದನ್ನು ಘೋಷಿಸಿದ್ದರು' ಎಂದು ಅವರು ಹೇಳಿದರು.

## ರಥಯಾತ್ರೆಗೆ ಭವ್ಯ ಸ್ವಾಗತ ನೀಡಿ ಪೂಜೆ ಸಲ್ಲಿಸಿದ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಏ.24:ಅನುಭವ ಮಂಟಪ ಬಸವಾದಿ ಶರಣರ ವೈಭವ ಕಾರ್ಯಕ್ರಮದ ರಥಯಾತ್ರೆಯೂ ಇಂದು ಹುಮ್ನಾಬಾದ್ ಪಟ್ಟಣಕ್ಕೆ ಆಗಮಿಸಿದ ಸಂದರ್ಭದಲ್ಲಿ ಬೀದರ ವಿಧಾನ ಪರಿಷತ್ ಸದಸ್ಯರಾದ ಶ್ರೀ ಭೀಮರಾವ ಬಿ ಪಾಟಿಲ್ ರವರು ಹಾರ್ದಿಕವಾಗಿ ಬರಮಾಡಿಕೊಂಡು ಪೂಜೆ ಸಲ್ಲಿಸಿದರು.ಈ ಸಂದರ್ಭದಲ್ಲಿ ತಾಲೂಕಾ ದಂಡಾಧಿಕಾರಿಗಳಾದ ಶ್ರೀಮತಿ ಅಂಜುಮ್ ತಬಸುಮ್, ಹುಮ್ನಾಬಾದ್ ಪುರಸಭೆಯ ಅಧ್ಯಕ್ಷರಾದ ಶ್ರೀಮತಿ ಪಾರ್ವತಿಬಾಯಿ ಸೇರಿಕಾರ್,ಉಪಾಧ್ಯಕ್ಷರಾದ ಎಮ್. ಡಿ ಮುಕ್ರಮ್ ಮುಖಂಡರಾದ



ಮಲ್ಲಿಕಾರ್ಜುನ್ ಮಾಶಟ್ಟಿ,ಸುಭಾಶ್ ಅರ್ಯ,ವೀರಣ್ಣಾ ತುಪ್ಪದ,ಮಹೇಶ್ ಅಗಡಿ, ಅಣ್ಣಾರಾವ ಪಾಟಿಲ್, ಚಂದು ಮುಸ್ತಾಪುರೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಪ್ರಮುಖರಿದ್ದರು.

## ಬಂಜಾರ ಸಮುದಾಯದ ಜನಜಾಗೃತಿ ಸಮಾವೇಶದಲ್ಲಿ ಬಿಗ್ ಬಾಸ್ ವಿಜೇತ ಹನುಮಂತ್

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಏ.24: ತಾಲೂಕಿನ ಬಂಜಾರಾ ರಕ್ಷಣಾ ವೇದಿಕೆ ಹಾಗೂ ಬಂಜಾರಾ ಸಮಾಜದ ವಿವಿಧ ಸಂಘಟನೆಗಳ ಒಕ್ಕೂಟದಲ್ಲಿ ಬಂಜಾರಾ ಜನಜಾಗೃತಿ ಸಮಾವೇಶದ ಕಾರ್ಯಕ್ರಮದಲ್ಲಿ ಖ್ಯಾತ ಚಲನಚಿತ್ರ ನಟಿ ಕಲ್ಪನಾ ಪವಾರ ಹಾಗೂ ಬಿಗ್ ಬಾಸ್ ವಿಜೇತ ಹಣಮಂತ ಲಮಾಣಿ ಭಾಗವಹಿಸಿದ್ದರು

ಸಂತ ಸೇವಾಲಾಲ ಮಹಾರಾಜರ 286ನೇ ಜಯಂತ್ಯೋತ್ಸವ ನಿಮಿತ್ಯ ಅಫಜಲಪುರ ಪಟ್ಟಣದ ಶ್ರೀಗುರು ಮಳೇಂದ್ರಶಿವಾಚಾರ್ಯ ಕಲ್ಯಾಣ ಮಂಟಪದಲ್ಲಿ ಕಾರ್ಯಕ್ರಮ ನೆರವೇರಿಸಲಾಗಿತ್ತು. ದಿವ್ಯ ಸಾನಿಧ್ಯ ಮಹಾರಾಷ್ಟ್ರ ರಾಜ್ಯದ ಬಂಜಾರಾ ಕಾಶಿಕ್ಷೇತ್ರ ಪೌರಾಗಡ ಶ್ರೀ ಬಾಬುಸಿಂಗ ಮಹಾರಾಜರು ಹಾಗೂ ಖ್ಯಾತ



ಕಲಾವಿದ ಟಿವಿ ವಾಹಿನಿಗಳ ರಿಯಾಲಿಟಿ ಶೋ ಬಿಗ್ ಬಾಸ್ ವಿಜೇತ ಹಾಗೂ ಸರಗಮಪ ಸಿಂಗರ್ ಖ್ಯಾತಿಯ ಹಣಮಂತ ಲಮಾಣಿ ಹಾಗೂ ಖ್ಯಾತ ಚಲನಚಿತ್ರ ನಟಿ ಕಲ್ಪನಾ ಪವಾರ ಸೇರಿದಂತೆ ಅನೇಕ ರಾಜಕೀಯ ದುರಿಣರು ಸೇರಿದಂತೆ ನಾಡಿನ ಹೆಸರಾಂತ ಮಠಾಧಿಶರು ಭಾಗಿಯಾಗಿದ್ದರು.

ಬೆಳಿಗ್ಗೆ 12 ಗಂಟೆಗೆ ಶ್ರೀಗುರು ಮಳೇಂದ್ರಮಠದಿಂದ ಬಸವೇಶ್ವರ ವೃತ್ತದ ಮಾರ್ಗವಾಗಿ ಮಳೇಂದ್ರ ಕಲ್ಯಾಣಮಂಟಪದವರೆಗೆ ಕುಂಬಮೇಳ ವಾದ್ಯವೈಭೋಗಗಳೊಂದಿಗೆ ಸಂತ ಸೇವಾಲಾಲ ಮಹಾರಾಜರ ಭಾವಚಿತ್ರದ ಭವ್ಯ ಮೆರವಣಿಗೆ ಜರುಗಿತು.ಸುಡು ಬಿಸಿಲಿನಲ್ಲಿ ಸಮಾಜದ ಉತ್ಸಾಹಿ ಯುವಕರಿಂದ ಭವ್ಯ ಮೆರವಣಿಗೆ ಹಾಗೂ ಸಮುದಾಯದ ವಿಶೇಷ ನೃತ್ಯದೊಂದಿಗೆ ಬಹುವಿಜೃಂಭಣೆಯಿಂದ ನಡಯಿತು.ಕಾರ್ಯಕ್ರಮಕ್ಕೆ ಎಲ್ಲಾ ಜಾತಿ ಜನಾಂಗದ ನಾಯಕರು ಹಾಗೂ ಪ್ರಮುಖರು ಭಾಗಿಯಾಗಿದರು. ಕಾರ್ಯಕ್ರಮ ಬಹು ಅದ್ದೂರಿಯಾಗಿ ಜರುಗಿತು.

ನಂತರ ಅಫಜಲಪುರ ತಾಲೂಕಿನ ಮುಗ್ದ ಸಮುದಾಯ ಬಂಜಾರಾ ಸಮಾಜದ ಶೈಕ್ಷಣಿಕ, ಆರ್ಥಿಕ ಹಾಗೂ ರಾಜಕೀಯ ಜನ ಜಾಗೃತಿ ಸೇರಿದಂತೆ ಬಂಜಾರಾ ಸಮಾಜದಲ್ಲಿದ್ದು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಲಾಯಿತು.

ವಿಶೇಷವಾಗಿ ಬಂಜಾರಾ ಸಮಾಜದ ಖ್ಯಾತ ಚಲನಚಿತ್ರ ನಟ–ನಟಿಯರು ಸೇರಿದಂತೆ ಎಲ್ಲಾ ಸಮುದಾಯದ ಮಠಾಧಿಶರು ಭಾಗಿಯಾಗಿದ್ದರು .

ಬಂಜಾರ ಸಮಾಜ ಸೇರಿದಂತೆ ಅನೇಕ ಹನುಮಂತನ ಅಭಿಮಾನಿಗಳು ಸಾವಿರಾರು ಸಂಖ್ಯೆಯಲ್ಲಿ ಜನ ಸಾಗರವೇ ಹರಿದು ಬಂದಿತ್ತು.

## ಜಾತಿ ವರದಿ ಬಗ್ಗೆ ವೀರಶೈವ ಶಾಸಕರು ಸಿಡಿದೇಳಬೇಕು: ಶ್ರೀ ರಂಭಾಪುರಿ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.24:ಮುಖ್ಯಮಂತ್ರಿಗಳು ಸಚಿವ ಸಂಪುಟ ಸಭೆಯಲ್ಲಿ ಜಾತಿಗಣತಿ ಸಮೀಕ್ಷೆಯ ವೀರಶೈವ ಲಿಂಗಾಯತ ಜನಸಂಖ್ಯೆ ಕುರಿತು ಪ್ರಸ್ತಾಪಕ್ಕೆ ಬಂದರೆ ಎಲ್ಲ ಪಕ್ಷದ ವೀರಶೈವ ಲಿಂಗಾಯತ ಶಾಸಕರು ವಿರೋಧ ವ್ಯಕ್ತಪಡಿಸಬೇಕು. ಅನ್ಯಾಯದ ವಿರುದ್ಧ ಸಿಡಿದೇಳಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಹುಡಗಿ ಗ್ರಾಮದಲ್ಲಿ ನಡೆದ ಧರ್ಮಸಭೆಯಲ್ಲಿ ಮಾತನಾಡಿ, 10 ವರ್ಷದ ಹಿಂದೆ ನಡೆದಿರುವ ವರದಿ ಇದೀಗ ಏಕೆ ಪ್ರಸ್ತಾಪಕ್ಕೆ ಬರುತ್ತಿದೆ? ಈ ಹಿಂದೆ ಹಾವನೂರು ಆಯೋಗದ ವರದಿ ಹರಿಯುವ



ಮೂಲಕ ಭೀಮಣ್ಣ ಖಂಡ್ರೆ ವಿರೋಧ ವ್ಯಕ್ತಪಡಿಸಿದ್ದರು. ತಂದೆಯಂತೆ ಸಚಿವ ಈಶ್ವರ ಖಂಡ್ರೆ ಕೂಡ ದಿಟ್ಟ ಹೆಜ್ಜೆ ಇಡಬೇಕು ಎಂದರು.

ನಂತರ ಸಚಿವ ಈಶ್ವರ ಖಂಡ್ರೆ ಹಾಗೂ ಶ್ರೀಗಳು ಕೆಲ ಹೊತ್ತು ಜಾತಿಗಣತಿ ವಿಷಯದ ಕುರಿತು ಚರ್ಚಿಸಿದರು. ವೀರಶೈವ ಲಿಂಗಾಯತ ಎಂದು ಬರೆಸುವ ಬದಲಿಗೆ ಕೆಲ ಒಳಪಂಗಡಗಳು ಮೀಸಲಾತಿಗಾಗಿ ಬೇರೆ ಬೇರೆ ಬರೆಸಿರುವ ಕುರಿತು ವಿವರಿಸಿದರು. ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡುವುದಾಗಿ ಸಚಿವ ಖಂಡ್ರೆ ಭರವಸೆ ನೀಡಿದರು.

## ಕರ್ನಾಟಕದಲ್ಲಿ ಕನ್ನಡ ಬೆಳೆಯಲು ಮೂಲಕಾರಣ ಡಾ.ರಾಜಕುಮಾರ್

ಮಲ್ಲಮ್ಮ ನುಡಿ ವಾರ್ತೆ ಬೀದರ : ಏ.24: 1982 ಕ್ಕಿಂತ ಮುಂಚೆ ಕರ್ನಾಟಕದಲ್ಲಿ ಹೆಚ್ಚಾಗಿ ಸಂಸ್ಕೃತ ಭಾಷೆ ಚಾಲ್ತಿಯಲ್ಲಿತ್ತು. ನಂತರ ಡಾ. ರಾಜಕುಮಾರ್ ಅವರ ನೇತೃತ್ವದಲ್ಲಿ ನಡೆದ ಗೋಕಾಕ್ ಚಳುವಳಿಯಿಂದ ಕರ್ನಾಟಕದಲ್ಲಿ ಕನ್ನಡ ಬೆಳೆಯಿತು ಎಂದು ಚಲನಚಿತ್ರ ನಿರ್ದೇಶಕರು ಹಾಗೂ ನಿರ್ಮಾಪಕರಾದ ಬಿ. ಜೆ. ವಿಷ್ಣುಕಾಂತ್ ಹೇಳಿದರು.

ಅವರು ಗುರುವಾರದಂದು ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೀದರ, ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ.ರಾಜ್‌ಕುಮಾರ್ 97ನೇ ಜಯಂತಿ ಅಂಗವಾಗಿ ರಾಜರಸ ಸಂಗೀತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ಎಲ್ಲ ಸಾಹಿತಿಗಳು ಒಗ್ಗೂಡಿ ಕನ್ನಡದ ಬಗ್ಗೆ ಹೋರಾಟ ನಡೆಸಿದರು. ಆ ಹೋರಾಟಕ್ಕೆ ಜಯ ಸಿಗಲಿಲ್ಲ. ಆ ಎಲ್ಲ ಸಾಹಿತಿಗಳು ಒಗ್ಗೂಡಿ ಗೋಕಾಕ್ ಚಳುವಳಿಯ ನಾಯಕತ್ವವನ್ನು ಡಾ. ರಾಜಕುಮಾರ್ ಅವರಿಗೆ ವಹಿಸಲು ಕೋರಿದರು.



ಇದನ್ನು ಒಪ್ಪಿದ ಡಾ. ರಾಜ್ ಅವರು ಒಂದು ತಿಂಗಳ ಕಾಲ ಚಳುವಳಿ ನಡೆಸಿದರು. ಕೊನೆಗೆ ಮುಖ್ಯಮಂತ್ರಿ ಆರ್.ಗುಂಡೂರಾವ್ ಅವರಿಗೆ ವರದಿ ಸಲ್ಲಿಸಿದಾಗ, ರಾಜ್ಯದಲ್ಲಿ ಕನ್ನಡಕ್ಕೆ ಮೊದಲ ಆದ್ಯತೆ ನೀಡಲಾಯಿತು. ಕನ್ನಡವನ್ನು ಪ್ರಥಮ ಭಾಷೆಯಾಗಿ ಘೋಷಣೆ ಮಾಡಲಾಯಿತು. ಇದ–ರಿಂದಾಗಿ ಕರ್ನಾಟಕ ರಾಜ್ಯದಲ್ಲಿ ಕನ್ನಡ ಬೆಳೆಯಿತು ಎಂದರು.

ಡಾ. ರಾಜಕುಮಾರ್ ಅವರ ತಂದೆ ತಾಯಿ ಕೂಡ ಕಲಾವಿದರಾಗಿದ್ದರು. ಇವರ ತಂದೆ ಗುಬ್ಬಿ ವೀರಣ್ಣ ನಾಟಕ ತಂಡದಲ್ಲಿ ಕೆಲಸ ಮಾಡಿದ್ದರು. ಡಾ. ರಾಜ್ ಅವರ ಮೊಟ್ಟ ಮೊದಲ ಹೆಸರು ಮುತ್ತುರಾಜ್ ಎಂದಾಗಿತ್ತು. ಅವರನ್ನು ಪ್ರೀತಿಯಿಂದ ಎಲ್ಲರೂ ಮುತ್ತಣ್ಣ ಎಂದೇ ಕರೆಯುತ್ತಿದ್ದರು. ಈ ಹೆಸರಿನ ಮೇಲೆ ಶಿವರಾಜ್ ಕುಮಾರ್ ಅವರು ಒಂದು ಸಿನಿಮಾ ಕೂಡ ತೆಗೆದಿದ್ದಾರೆ ಎಂದು ಡಾ. ರಾಜಕುಮಾರ ಅವರ ಜೀವನದ ಬಗ್ಗೆ ವಿವರಿಸಿದರು. ರಾಜಕುಮಾರ್ ಅವರ ಮೊಟ್ಟ ಮೊದಲನೆಯ ಚಲನಚಿತ್ರ ಬೇಡರ ಕಣ್ಣಪ್ಪವಾಗಿದೆ. ಅಂದಿನ ದಿನಗಳಲ್ಲಿ ಈ ಚಲನಚಿತ್ರ ತುಂಬಾ ಹೆಸರು ಮಾಡಿತ್ತು. ಇದಕ್ಕೆ ಪ್ರಶಸ್ತಿಗಳು ಕೂಡ ಲಭಿಸಿದ್ದವು. ಡಾ.ರಾಜ್ ಅವರು ಒಟ್ಟು 205 ಚಲನಚಿತ್ರದಲ್ಲಿ ನಟಿಸಿದ್ದಾರೆ. ಅವರ 100ನೇ ಚಲನಚಿತ್ರ ಭಾಗ್ಯದ ಬಾಗಿಲು ಹಾಗೂ 200 ನೇ ಚಲನಚಿತ್ರ ದೇವತಾ ಮನುಷ್ಯ ಆಗಿದೆ ಎಂದು ತಿಳಿಸಿದರು.

ನಾನು 1995 ರಲ್ಲಿ ಒಂದು ನಾಟಕದಲ್ಲಿ ನಟನೆ ಮಾಡುತ್ತಿದ್ದಾಗ ಡಾ. ರಾಜಕುಮಾರ್ ಅವರು ನನ್ನನ್ನು ಸನ್ಮಾನ ಮಾಡಿ, ನೀವು ಒಂದೊಳ್ಳೆ ಕಲಾವಿದರಾಗುತ್ತೀರಿ ಎಂದು ನುಡಿದಿದ್ದರು. ಅದರ ನಂತರ ಕೆಲ ವರ್ಷ ನಾಟಕ ಹಾಗೂ ಚಲನಚಿತ್ರದಿಂದ ದೂರ ಉಳಿದ ನಾನು, ಡಾ. ಬಿ. ಆರ್. ಅಂಬೇಡ್ಕರ್ ಎನ್ನುವ ಚಲನಚಿತ್ರ ಮಾಡಿದ್ದೇನೆ. ಇದು ರಾಜ್ಯ ಮಟ್ಟದ ಪ್ರಶಸ್ತಿ ಪಡೆದಿತ್ತು ಎಂದು ಡಾ. ರಾಜ್ ಅವರ ಜೊತೆಗಿನ ಅನುಭವವನ್ನು ಬಿ.ಜೆ.ವಿಷ್ಣುಕಾಂತ ಅವರು ಹಂಚಿಕೊಂಡರು.

ಬೀದರ್ ವಿಶ್ವವಿದ್ಯಾಲಯದ ಕುಲಸಚಿವೆ ಸುರೇಖಾ ಅವರು ಮಾತನಾಡಿ, ಕನ್ನಡ ಚಿತ್ರರಂಗವನ್ನು ಕನ್ನಡಕ್ಕೆ ಪರಿಚಯಿಸಿದವರು ಡಾ. ರಾಜಕುಮಾರ್ ಅವರಾಗಿದ್ದಾರೆ. ಅವರು ಒಬ್ಬ ನಟರಾಗದೆ ಒಳ್ಳೆ ಸಮಾಜದ ಹರಿಕಾರರಾಗಿದ್ದಾರೆ. ನಾನು ಕೂಡ ಅವರ ಅಭಿಮಾನಿಯಾಗಿದ್ದೇನೆ. ವಿದ್ಯಾರ್ಥಿಗಳು ಅವರ ಚಲನಚಿತ್ರಗಳು ನೋಡಬೇಕು ಎಂದು ಹೇಳಿದರು.

ಕೆ.ಆರ್.ಇ ಸಂಸ್ಥೆಯ ಉಪಾಧ್ಯಕ್ಷ ಬಿ.ಜಿ ಶೇಟಕಾರ್ ಮಾತನಾಡಿ, ಡಾ. ರಾಜಕುಮಾರ್ ಅವರು ವೀರಪ್ಪನ್ ಜೊತೆಗೂ ಕೂಡ ಕಾಲ ಕಳೆದಿದ್ದರು. ಆದರೂ ಧೃತಿಗೆಡದೇ ಪ್ರೀತಿಯಿಂದಲೇ ಅವರ ಮನಸ್ಸನ್ನು ಗೆದ್ದಿದ್ದರು. ಇವರು ಸಾಮಾನ್ಯ ವ್ಯಕ್ತಿ ಇರಲಿಲ್ಲ ಎಂದು ಗುಣಗಾನ ಮಾಡಿದರು.

ಕಾರ್ಯಕ್ರಮದಲ್ಲಿ ಶಿವಕುಮಾರ ಪಾಂಚಾಳ ಆಕಾಶವಾಣಿ ಕಲಾವಿದರು ಬೀದರ ಇವರಿಂದ ಸಂಗೀತ ರಸಮಂಜೂರಿ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಜಾನಪದ ಆಕಾಡೆಮಿಯ ಸದಸ್ಯ ವಿಜಯಕುಮಾರ್ ಸೋನಾರೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸುರೇಶ್ ಚನ್ನಶೆಟ್ಟಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನರೇಶ್, ಕೆ.ಆರ್.ಇ.ಸಂಸ್ಥೆಯ ಕಾರ್ಯದರ್ಶಿ ಸತೀಶ್ ಪಾಟೀಲ್, ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ.ಮಲ್ಲಿಕಾರ್ಜುನ್ ಹಂಗರಗಿ, ಚಂದ್ರಕಾಂತ್ ಶೇಟಕಾರ್, ಸೋಮನಾಥ್ ಬಿರಾದಾರ್, ಮಲ್ಲಯ್ಯ ಸ್ವಾಮಿ ಹಾಗೂ ಸಂಗೀತಾ ಸೇರಿದಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಿಬ್ಬಂದಿ, ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಕೇಂದ್ರದ ಬೆಲೆ ಏರಿಕೆ ವಿರುದ್ಧ ಜಿಲ್ಲಾ ಯುವ ಕಾಂಗ್ರೆಸ್ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಏ.24: ಇಂದು ನಗರದ ಪ್ರವಾಸಿ ಮಂದಿರದಿಂದ ಅಶೋಕ ವೃತ್ತದ ವರೆಗೆ ಕೇಂದ್ರದ ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ನಡೆಸಿ ಅಶೋಕ ವೃತ್ತದಲ್ಲಿ ಪ್ರತಿಭಟಿಸಿ ತಹಶಿಲ್ದಾರ ವಿಠ್ಠಲ್ ಚೌಗಲೆ ಅವರಿಗೆ ಮನವಿ ಸಲ್ಲಿಸಿದರು.ಜಿಲ್ಲಾಧ್ಯಕ್ಷರಾದ ಲಿಂಗೇಶ ಕಲ್ಗುಡಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಾರಡ್ಡಿ ಗಲಿಬಿ, ಕಾಂಗ್ರೆಸ್ ಮುಖಂಡರಾದ ಜ್ಯೋತಿ ಎಂ. ಗೊಂಡಬಾಳ, ಕಾರ್ಮಿಕ ಘಟಕ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ಪಂಡಿತ, ಜಿಲ್ಲಾ ಉಪಾಧ್ಯಕ್ಷ ಗವಿಸಿದ್ದನಗೌಡ ಪಾಟೀಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಬಸವರಾಜ ಮಲ್ಲಾಡದ, ಸಾಹಿಲ್ ಸಾಬ್, ಖಲಂದರ್ ಸಾಬ್, ಬ್ಲಾಕ್ ಅಧ್ಯಕ್ಷರುಗಳಾದ ಈರಣ್ಣ ಬದಾಮಿ ಕುಷ್ಟಗಿ, ಅಯ್ಯಪ್ಪ ಹವಾಲ್ದಾರ್, ನಾಗರಾಜ ಭಂಗಿ ಯಲಬುರ್ಗಾ, ಜೋಗದರವಿ ಗಂಗಾವತಿ ವಿಧಾನಸಭಾ, ಬಾಬರ್ ಗಂಗಾವತಿ ನಗರ, ಸಿದ್ದು ಹೊಸಮಠ ಗಂಗಾವತಿ ಗ್ರಾಮೀಣ, ದೇವರಾಜ ಕಟ್ಟಿಮನಿ ಕನಕಗಿರಿ ವಿಧಾನಸಭಾ, ಮಂಜುನಾಥ



ನಾಗಲಾಪೂರ ಕನಕಗಿರಿ ನಗರ, ಸುನೀಲ್ ಮೂಲಿಮನಿ ಕಾರಟಗಿ ನಗರ, ಬಸು ಮೈಲಾಪುರ, ವಿಜಯ ಕಂಬಳಿ, ಹನುಮೇಶ ಹಿರೇಖೇಡ, ಶಿವು, ನಾಗರಾಜ, ಪಂಚಾಕ್ಷರಿ, ಅಮರೇಶ ಮಡಿವಾಳ, ಹನುಮೇಶ ಅಂಟರಠಾಣಾ ಇತರರು ಇದ್ದರು.ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ನಾಯಕಿ ಜ್ಯೋತಿ ಎಂ.ಗೊಂಡಬಾಳ ಕೇಂದ್ರ ಸರಕಾರ ಕೇವಲ ಜನರ ಮೇಲೆ ಭಾರ ಹಾಕುವ ಕೆಲಸದಲ್ಲಿ ನಿರತವಾಗಿದೆ, ಜಿಎಸ್ಟಿ, ಗ್ಯಾಸ್, ಪೆಟ್ರೋಲ್, ಡೀಸೆಲ್, ಸಿಎನ್ ಜಿ ಎಲ್ಲವೂ ದುಬಾರಿ ಇಂತಹ ದುಬಾರಿ ಸಮಸ್ಯೆ ಮುಚ್ಚಿಹಾಕಲು ಇಲ್ಲದ ಸಮಸ್ಯೆ ತಂದು ನಿಲ್ಲಿಸುವ ಕೆಲಸ ಮಾಡುವ ಜೊತೆಗೆ ಬಡವರಿಗೆ ಆಸರೆಯಾದ ಗ್ಯಾರಂಟಿ ಕಾಂಗ್ರೆಸ್ ಸರಕಾರ ಟೀಕಿಸಿ ಪ್ರತಿಭಟಿಸುತ್ತಿರುವದು ನಿಜಕ್ಕೂ ನಾಚಿಕೆಗೇಡಿತನ. ಬಿಜೆಪಿಯ ಮೋದಿ ಶಾ ಕೂಡಲೇ ಬೆಲೆ ಇಳಿಸುವ ಕೆಲಸ ಮಾಡಲಿ, ರಾಜ್ಯದ ತೆ–ರಿಗೆ ಪಾಲು ನೀಡಲಿ ಎಂದರು. ಮಾಜಿ ಯುವ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಗವಿಸಿದ್ದನಗೌಡ ಪಾಟೀಲ್ ಮಾತನಾಡಿ, ಸರಕಾರ ಜನರಿಗೆ ಮೋಸ ಮಾಡುತ್ತಿದ್ದರೂ ಇಲ್ಲಿನ ಭ್ರಷ್ಟ, ಅಂಡು ಸುಟ್ಟುಕೊಂಡ ಬಿಜೆಪಿ ಸಂಸದರು ಶಕ್ತಿಹೀನರಾಗಿ ಮನೆಯಲ್ಲಿ ಕುಳಿತಿದ್ದು ಎದ್ದು ಬಂದು ಕರ್ನಾಟಕ ಪರ ಮಾತನಾಡಲಿ ಎಂದು ಕಿಡಿಕಾರಿದರು. ಯುವ ಜಿಲ್ಲಾ ಅಧ್ಯಕ್ಷ ಲಿಂಗೇಶ ಕಲ್ಗುಡಿ ಮಾತನಾಡಿ, ಇದು ಕೇವಲ ಆರಂಭದ ಹೋರಾಟವಾಗಿದ್ದು ಕೇಂದ್ರದ ಮಲತಾಯಿ ಧೋರಣೆ, ಬಡವರ ವಿರೋಧಿ ಮತ್ತು ಬಂಡವಾಳಶಾಯಿ ಧೋರಣೆ ಖಂಡಿಸಿ ನಿರಂತರ ಹೋರಾಟ ಮಾಡುತ್ತೇವೆ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.